ಸಂಪುಟ: 04 ಸಂಚಿಕೆ: 237 ಪುಟಗಳು: 08 ಭಾನುವಾರ 10 ನವೆಂಬರ್ 2024
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail. com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5

ಮುಂಜಾನೆ ಮಾತು
ಉತ್ತಮರು ಆತ್ಮವಿಮರ್ಶೆ ಮಾಡಿಕೊಂಡು ತಮ್ಮನ್ನು ತಾವು ತಿದ್ದಿಕೊಳ್ಳುತ್ತಾರೆ. ಅಧಮರು ಮಾತ್ರವೇ ಪರರ ನಿಂದೆ ಮಾಡುತ್ತ ಕೆಳಗಿಳಿಯುತ್ತಾರೆ

ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

ಉದಯ ವಾಹಿನಿ
ವರದಿಗಾರರು ಬೇಕಾಗಿದ್ದಾರೆ
ಎಂಎ., ಜರ್ನಲಿಸಂ ಮಾಡಿರುವಂತಹ ಉತ್ಸಾಹಿ ಯುವಕ ಯುವತಿಯರು ತಾಲ್ಲೂಕು ಹಾಗೂ ಜಿಲ್ಲಾ ಮಟ್ಟಗಳಲ್ಲಿ ಕೆಲಸ ಮಾಡುವಂತಹ
ರಾಜ್ಯದಾದ್ಯಂತ ವರದಿಗಾರರು ಬೇಕಾಗಿದ್ದಾರೆ
ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ:
9448225696
+91 8035841833
#: 1230 'JAYAMAHAL 13th cross, 2nd phase, Girinagar, Bangalore-560085. (Near to Bangalore one park, opposite mandya medical)
udayavahininews@gmail.com

ಪಿಪಿಇ ಕಿಟ್ ಖರೀದಿ ಅಕ್ರಮ
ರಾಜಾಹುಲಿಗೆ ಕಂಟಕ!

- 2020, ಏಪ್ರಿಲ್‌ನಲ್ಲಿ ಪಿಪಿಇ ಕಿಟ್ ಖರೀದಿಯಲ್ಲಿ ಅಕ್ರಮ
- ಚೀನಾದ ಎರಡು ಕಂಪನಿಗಳಿಂದ ಪಿಪಿಇ ಕಿಟ್ ಖರೀದಿ
- ಸುಮಾರು 3 ಲಕ್ಷ ಪಿಪಿಇ ಕಿಟ್‌ಗಳನ್ನ ದುಬಾರಿ ಬೆಲೆಗೆ ಖರೀದಿಸಿದ್ದಾರೆ
- ಪಿಪಿಇ ಕಿಟ್ ಖರೀದಿಯಲ್ಲೇ ಸುಮಾರು 14 ಕೋಟಿ ಅಕ್ರಮ ಆಗಿದೆ

ಕಮಲ ವಿರುದ್ಧ ಕೈ ಪ್ರತ್ಯಸ್ತ್ರ

• ಉದಯವಾಹಿನಿ, ಬೆಂಗಳೂರು

ಬಿಜೆಪಿ ಸರ್ಕಾರದ ಅವಧಿಯಲ್ಲಿ ನಡೆದಿದ್ದ ಕೊರೊನಾ ಹಗರಣಕ್ಕೆ ಸಂಬಂಧಿಸಿದಂತೆ ಪಿಪಿಇ ಕಿಟ್ ಹಾಗೂ ಇತರೆ ಸಾಮಾಗ್ರಿ ಖರೀದಿಯಲ್ಲಿ ಅಕ್ರಮ ನಡೆದಿರುವುದು ದೃಢಪಟ್ಟಿದೆ ಎಂದು ನ್ಯಾಯಮೂರ್ತಿ ಜಾನ್ ಮೂಕಲ್ ಡಿ.ಮೈಕಲ್ ಕುನ್ಹಾ ಆಯೋಗ ಹೇಳಿದೆ. ಈ ಸಂಬಂಧ ಅಂದಿನ ಮುಖ್ಯಮಂತ್ರಿ ಬಿಎಸ್ ಯಡಿಯೂರಪ್ಪ ಮತ್ತು ಆರೋಗ್ಯ ಸಚಿವ ಬಿ ಶ್ರೀರಾಮುಲು ವಿರುದ್ಧ ಪ್ರಾಸಿಕ್ಯೂಷನ್‌ಗೆ ಆಯೋಗ ಶಿಫಾರಸು ಮಾಡಿದೆ.

ಅಂದಿನ ಸರ್ಕಾರ ಚೀನಾ ಕಂಪನಿಗಳಿಂದ ಪಿಪಿಇ ಕಿಟ್ ಖರೀದಿ ಮಾಡಿತ್ತು. ಪಿಪಿಇ ಕಿಟ್ ಖರೀದಿ ವೇಳೆ ದರದಲ್ಲಿ ಭಾರಿ ವ್ಯತ್ಯಾಸ ಕಂಡುಬಂದಿದೆ. ದರ ವ್ಯತ್ಯಾಸದಿಂದ ಪಿಪಿಇ ಕಿಟ್ ಪೂರೈಕೆದಾರರಿಗೆ 14.21 ಕೋಟಿ ರೂ. ಲಾಭವಾಗಿದೆ. ಪೂರೈಕೆದಾರರಿಗೆ ಲಾಭ ಮಾಡಿ ಕೊಡುವ ದುರುದ್ದೇಶದಿಂದ ಅಕ್ರಮ ಎಸಗಲಾಗಿದೆ ಎಂದು ವರದಿಯಲ್ಲಿದೆ. ಹೈಕೋರ್ಟ್ ನಿವೃತ್ತ ನ್ಯಾಯಮೂರ್ತಿ ಜಾನ್ ಮೈಕಲ್ ಡಿ.ಕುನ್ಹಾ ನೇತೃತ್ವದಲ್ಲಿ ಆಗಸ್ಟ್ 25, 2023ರಲ್ಲಿ ರಚನೆಯಾಗಿದ್ದ ತನಿಖಾ ಆಯೋಗ ಈಗಾಗಲೇ ಮಧ್ಯಂತರ ವರದಿ ಸಲ್ಲಿಸಿದೆ. ಒಟ್ಟು 769 ಕೋಟಿ ರೂ. ಅವ್ಯವಹಾರ ನಡೆದಿರುವುದು ಪತ್ತೆ ಮಾಡಿದೆ.

ಚೀನಾದ ಸಂಸ್ಥೆಗಳಿಂದ 3 ಲಕ್ಷ ಪಿಪಿಇ ಕಿಟ್‌ಗಳನ್ನು ನೇರವಾಗಿ ಖರೀದಿಸುವ ಕುರಿತು ಅಂದಿನ ಮುಖ್ಯಮಂತ್ರಿ ಬಿಎಸ್ ಯಡಿಯೂರಪ್ಪ ಆದೇಶಿಸಿದ್ದರು. ಎರಡು ಚೀನಾ ಸಂಸ್ಥೆಗಳಿಂದ ಪಿಪಿಇ ಕೆಟ್‌ಗಳನ್ನು ದುಬಾರಿ ದರದಲ್ಲಿ ಕೊಂಡುಕೊಳ್ಳಲಾಗಿದೆ ಎಂದು ಬಯಲಾಗಿದೆ. ಹೀಗಾಗಿ, ಬಿಎಸ್ ಯಡಿಯೂರಪ್ಪ ಹಾಗೂ ಆರೋಗ್ಯ ಸಚಿವರಾಗಿದ್ದ ಬಿ ಶ್ರೀರಾಮುಲು ವಿರುದ್ಧ ಕಾನೂನು ಕ್ರಮ ಜರುಗಿಸಲು ಆಯೋಗ ಶಿಫಾರಸು ಮಾಡಿದೆ.

ಬೆಂಗಳೂರಲ್ಲಿ ಮಾತನಾಡಿದ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅವರು, ಪಿಪಿಇ ಕಿಟ್ ಖರೀದಿ ಅಕ್ರಮ ವಿಚಾರವಾಗಿ ಪ್ರತಿಕ್ರಿಯಿಸಿ, ನಿವೃತ್ತ ನ್ಯಾಯಮೂರ್ತಿ ಮೈಕೆಲ್ ಡಿ'ಕುನ್ಹಾ ಅವರ ಆಯೋಗ ರಚನೆ ಮಾಡಿದ್ದೆವು. ಅವರು ಸಾವಿರ ಪುಟಗಳ ವರದಿ ಕೊಟ್ಟಿದ್ದರು. ಆಯೋಗವು ಯಡಿಯೂರಪ್ಪ, ಶ್ರೀರಾಮುಲು ವಿರುದ್ಧ ಪ್ರಾಸಿಕ್ಯೂಷನ್‌ಗೆ ಶಿಫಾರಸು ಮಾಡಿದೆ. ನಮ್ಮ ಸಂಪುಟ ಉಪಸಮಿತಿ ಪರಿಶೀಲನೆ ಮಾಡುತ್ತಿದೆ. ಇದು ವೈಯಕ್ತಿಕ ವಿಚಾರಣೆ ಏನಲ್ಲ. ನಾವು ವಿರೋಧ ಪಕ್ಷದಲ್ಲಿದ್ದಾಗ ಆರೋಪ ಮಾಡಿದ್ದೆವು. ನಮ್ಮ ಪಕ್ಷದಿಂದ ತನಿಖೆ ಮಾಡಿ ವರದಿ ಕೊಟ್ಟಿದ್ದೆವು. ಸರ್ಕಾರಕ್ಕೆ ವರದಿ ಒಪ್ಪಿಸಿದ್ದೆವು. ನಿಯಮ ಬದಿಗೊತ್ತಿ ಅಂದು ನಿರ್ಧಾರ ಮಾಡಿದ್ದರು. ನಾವು ಅಧಿಕಾರಕ್ಕೆ ಬಂದ ಮೇಲೆ ನಿವೃತ್ತ ನ್ಯಾಯಮೂರ್ತಿ ನೇತೃತ್ವದ ಆಯೋಗಕ್ಕೆ ತನಿಖೆಗೆ ಕೊಟ್ಟಿದ್ದೆವು. ಈಗ ಮೊದಲ ರಿಪೋರ್ಟ್ ಕೊಟ್ಟಿದ್ದಾರೆ. ಅಂತಿಮ ವರದಿಯನ್ನೂ ಕೊಡುತ್ತಾರೆ ಎಂದರು.

ಪಿಪಿಇ ಕಿಟ್ ಖರೀದಿ ಅಕ್ರಮ ಕುರಿತು ಅಧಿಕಾರಿಗಳ ಮೇಲೆ ಕ್ರಮ ತೆಗೆದುಕೊಳ್ಳಬೇಕು. ಅವರಿಗೆ ನೋಟಿಸ್ ಕೊಟ್ಟು ಉತ್ತರ ಪಡೆಯಬೇಕು. ಇದು ವ್ಯಾಪಕವಾಗಿರುವುದರಿಂದ ಸೂಕ್ಷ್ಮವಾಗಿ ಹೆಜ್ಜೆ ಇಡಬೇಕಿದೆ. ನಿಯಮಗಳ ಅಡಿಯಲ್ಲೇ ನಾವು ಹೋಗಬೇಕು. ಇವರು ಲೂಟಿ ಮಾಡಿರುವುದು ಬಹಳ ಸ್ಪಷ್ಟ, ಸಿಎಂ, ಸಚಿವರು ಭಾಗಿಯಾಗಿರೋದು ಸ್ಪಷ್ಟ. ಪಿಪಿಇ ಕಿಟ್ ಖರೀದಿಯಲ್ಲಿ ಅಕ್ರಮ ಮಾಡಿದ್ದಾರೆ. ದೇಶದಲ್ಲಿ ಪಿಪಿಇ ಕಿಟ್ ಖರೀದಿಗೆ ಅವಕಾಶ ಇತ್ತು. ಆದರೆ, ಅವರು ಹಾಂಕಾಂಗ್‌ನಿಂದ ತರಿಸಿದ್ದಾರೆ. 14 ಕೋಟಿ ಹೆಚ್ಚು ಹಣ ಕಂಪನಿಗೆ ತೆತ್ತಿದ್ದಾರೆ ಎಂದು ದೂರಿದರು. ಈ ಸಂಬಂಧ ಮೊದಲ ಸಂಪುಟ ಉಪ ಸಮಿತಿ ಸಭೆ ನಡೆಸಿದ್ದೇವೆ. ಉಪ ಚುನಾವಣೆಯಿಂದಾಗಿ ಎರಡನೇ ಸಭೆ ಮಾಡಿಲ್ಲ. ಇನ್ನು ಬೇಕಾದಷ್ಟು ಆರೋಪಗಳಿವೆ. ವೆಂಟಿಲೇಟರ್, ಬೇರೆ ಬೇರೆ ಉಪಕರಣ ಖರೀದಿ ಮಾಡಿದ್ದಾರೆ. ಹೇಗೆ ತನಿಖೆ ಮಾಡಬೇಕು ಎಂಬ ನಿರ್ಧಾರವನ್ನು ಸಂಪುಟ ಉಪ ಸಮಿತಿಯಲ್ಲಿ ತೆಗೆದುಕೊಳ್ಳುತ್ತೇವೆ. ಆಗ ಇಬ್ಬರು ಆರೋಗ್ಯ ಸಚಿವರು ಇದ್ದರು. ಹೆಣದ ಮೇಲೆ ಹಣ ಮಾಡಿದ್ರು. ಹೆಚ್ಚಿನ ಬೆಲೆಗೆ ಖರೀದಿ ಮಾಡಿದ್ರು. ಅವರ ಅವಧಿಯನ್ನು ದುರುಪಯೋಗ ಪಡಿಸಿಕೊಂಡರು. ಕೀಳು ಮಟ್ಟದ ಅಧಿಕಾರ ಮಾಡಿದ್ದಾರೆ ಎಂದು ಆರೋಪಿಸಿದರು.

ನಾವು ಇದರಲ್ಲಿ ರಾಜಕೀಯ ಮಾಡಲಿಲ್ಲ. ಸಂಪೂರ್ಣ ವರದಿ ಬರಲಿ ಆಮೇಲೆ ಕ್ರಮ ವಹಿಸುತ್ತೇವೆ. ಹಣ ರಿಕವರಿ ಬಗ್ಗೆ ಕಮಿಟಿ ಶಿಫಾರಸು ಮಾಡಿದೆ. ಗುಣಮಟ್ಟ ಇಲ್ಲದ ವಸ್ತು ಪಡೆದಿದ್ದಾರೆ. ಕಡಿಮೆ ವಸ್ತುಗಳನ್ನು ಕೆಲವು ಕಡೆ ಖರೀದಿಸಿದ್ದಾರೆ. ಆಯೋಗದ ವರದಿಯಲ್ಲಿ ಸ್ಪಷ್ಟವಾಗಿದೆ. ಕೋವಿಡ್‌ನಲ್ಲೂ ಅವರು ದುಡ್ಡು ಮಾಡಿದ್ದಾರೆ. ಆಗಿನ ಸಿಎಂ ಯಡಿಯೂರಪ್ಪನವರೇ ಕಾರಣ ಅಂತ ಹೇಳಿದ್ದಾರೆ. ಈ ಖರೀದಿ ನಂತರವೂ ಮತ್ತೆ ಖರೀದಿಸಿದ್ದಾರೆ. ನಮ್ಮ ದೇಶದಲ್ಲೇ ಕಡಿಮೆ ಬೆಲೆಗೆ ಸಿಗುತ್ತಿತ್ತು. ಹಾಗಿದ್ದರೂ ಅವರು ಹೊರದೇಶದಿಂದ ಖರೀದಿಸಿದ್ದಾರೆ. ಇದರ ಬಗ್ಗೆ ಎಸ್‌ಐಟಿ ಮಾಡಬೇಕಾ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ಮಾಡಬೇಕಾ ಎನ್ನುವುದರ ಬಗ್ಗೆ ಸಂಪುಟ ಉಪಸಮಿತಿಯಲ್ಲಿ ಚರ್ಚಿಸುತ್ತೇವೆ ಎಂದರು.

1. ಟೆಂಡರ್ ಕರೆದಿಲ್ಲ, ಖರೀದಿ ನಿಯಮಗಳು, ಕಾರ್ಯವಿಧಾನ ಅನುಸರಿಸಿಲ್ಲ
2. ಅಂದಿನ ಸಿಎಂ ಯಡಿಯೂರಪ್ಪ, ಅಂದಿನ ಆರೋಗ್ಯ ಸಚಿವ ರಾಮುಲು ಅವರ ಆದೇಶದ ಮೇರೆಗೆ ಖರೀದಿ
3. ಅಂದಿನ ಸಿಎಂ, ಆರೋಗ್ಯ ಸಚಿವರ ವಿರುದ್ಧ ಭ್ರಷ್ಟಾಚಾರ ನಿಯಂತ್ರಣ ಕಾಯ್ದೆ, ಸೆಕ್ಷನ್ 7ರ ಅಡಿ ತನಿಖೆ ನಡೆಸಬೇಕು, ಕ್ರಿಮಿನಲ್ ಕೇಸ್ ದಾಖಲಿಸಬೇಕು ಎಂದು ಉಲ್ಲೇಖಿಸಲಾಗಿದೆ.

ಆತ್ಮಾವಲೋಕನ ಮಾಡಿಕೊಳ್ಳಲಿ

ರಾಜಕೀಯ ಪ್ರೇರಿತ ಎಂಬ ಬಿಎಸ್‌ವೈ ಆರೋಪ ವಿಚಾರವಾಗಿ ಪ್ರತಿಕ್ರಿಯಿಸಿ, ನಾನು ಯಡಿಯೂರಪ್ಪಗೆ ರೈಟ್ಸ್ ಇಲ್ಲ ಅಂತ ಹೇಳಲ್ಲ. ಅವರಿಗೂ ಹಕ್ಕುಗಳಿವೆ. ಇದು ರಾಜಕೀಯ ದುರುದ್ದೇಶ ಅಂತ ಹೇಳಲಾಗಲ್ಲ. ಇದು ಆಯೋಗ ಕೊಟ್ಟಿರುವ ವರದಿ. ಇದನ್ನು ನಾವು ಬಿಡುಗಡೆ ಮಾಡಿರಲಿಲ್ಲ. ಮಾಧ್ಯಮಗಳಲ್ಲಿ ಬಂದಿರೋದು. ಯಡಿಯೂರಪ್ಪ ಇದನ್ನು ತಿಳಿದುಕೊಳ್ಳಲಿ. ಅವರು ಹೆದರಿಸಬಹುದು, ಹೋರಾಟ ಮಾಡಲಿ. ಆಗ ಅವರು ಹೇಗೆ ನಡೆದುಕೊಂಡರು, ಆತ್ಮಾವಲೋಕನ ಮಾಡಿಕೊಳ್ಳಲಿ. ಅಂತಹ ಕೆಟ್ಟ ಸಂದರ್ಭದಲ್ಲಿ ಹೇಗೆ ನಡೆದುಕೊಂಡರು. ಇದರ ಬಗ್ಗೆ ಯಡಿಯೂರಪ್ಪ, ಶ್ರೀರಾಮುಲು ಯೋಚಿಸಲಿ ಎಂದು ಪ್ರತಿಕ್ರಿಯೆ ನೀಡಿದರು.

ಕೋವಿಡ್ ಹಗರಣದ ಕುರಿತು ಸರಕಾರ ಪ್ರಾಸಿಕ್ಯೂಶನ್ ಅನುಮತಿಗೆ ಶಿಫಾರಸು ಮಾಡಿರುವುದರ ಹಿಂದೆ ರಾಜಕೀಯ ದುರುದ್ದೇಶವಿದೆ ಎಂದು ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಹೇಳಿದರು. ನನ್ನ ಅಧಿಕಾರ ಅವಧಿಯಲ್ಲಿ ಯಾವ ಹಗರಣವೂ ನಡೆದಿಲ್ಲ. ಎಲ್ಲವೂ ಕಾನೂನು ಚೌಕಟ್ಟಿನಲ್ಲಿ ಮಾಡಿದ್ದೇವೆ. ದುರುದ್ದೇಶ ಪೂರಕವಾಗಿ ಕೇಸ್ ದಾಖಲಿಸುವುದು, ವಿಚಾರಣೆಗೆ ಅನುಮತಿ ನೀಡುವುದು ನಡೆದಿದೆ. ಶ್ರೀರಾಮುಲು ಕೋವಿಡ್ ನಲ್ಲಿ ಯಾವುದೇ ಹಗರಣ ಮಾಡಿಲ್ಲ. ರಾಜಕೀಯ ದ್ವೇಷಕ್ಕೆ ಪ್ರಾಸಿಕ್ಯೂಶನ್ ಅನುನತಿ ನೀಡಿದ್ದಾರೆ. ಯಾವ ತನಿಖೆಗೂ ಬೇಕಿದ್ದರೆ ಕೊಡಲಿ.

-ಯ ಡಿಯೂರಪ್ಪ, ಮಾಜಿ ಮುಖ್ಯಮಂತ್ರಿ

ಬಿಎಸ್ ಯಡಿಯೂರಪ್ಪನವರ ವಿರುದ್ಧ ಕೋವಿಡ್ ಹಗರಣ ತನಿಖೆ ವಿಚಾರಕ್ಕೆ ಸಂಬಂಧಿಸಿದಂತೆ, ಬಿಎಸ್‌ವೈ ವಿರುದ್ಧ ಇದು ಒಂದೇ ಅಲ್ಲ, ಅನೇಕ ಷಡ್ಯಂತ್ರಗಳು ನಡೆದಿವೆ. ಬೈ ಎಲೆಕ್ಷನ್ ಸೋಲಿನ ಭಯದಿಂದ ಈ ರೀತಿ ಮಾಡುತ್ತಿದ್ದಾರೆ

ಕಾಂಗ್ರೇಸ್‌ನ ಭಂಡತನದ ವರ್ತನೆಗೆ ನಾವು ಹೆದರುವುದಿಲ್ಲ. ಇದೆಲ್ಲವನ್ನು ನಾವು ಎದುರಿಸುತ್ತೇವೆ. ಬೈ ಎಲೆಕ್ಷನ್‌ನಲ್ಲಿ ಎಲ್ಲಿ ಸೋತು ಬಿಡುತ್ತೇವೋ ಎಂಬ ಭಯದಿಂದ ಈ ರೀತಿ ಷಡ್ಯಂತ್ರ ಮಾಡುತ್ತಿದ್ದಾರೆ. ಯಾವ ಯಾವ ರೀತಿ ವರದಿಗಳನ್ನು ಕೊಟ್ಟಿದ್ದಾರೆ ಎಂದು ರಾಜ್ಯದ ಜನತೆಗೂ ಗೊತ್ತಿದೆ. ನಮಗೂ ಗೊತ್ತಿದೆ. ಇದೇ ಸಿದ್ದರಾಮಯ್ಯನವರು ಹಿಂದೆ ರಾಜ್ಯದ ಮುಖ್ಯಮಂತ್ರಿಗಳಾಗಿದ್ದಾಗ ಲೋಕಾಯುಕ್ತದ ಬಾಗಿಲನ್ನು ಮುಚ್ಚಿ ಹಾಕಿ ಎಸಿಬಿಯನ್ನು ರಚನೆ ಮಾಡಿಕೊಂಡು ತಮ್ಮನ್ನು ತಾವು ರಕ್ಷಿಸಿಕೊಳ್ಳುವ ಕೆಲಸ ಮಾಡಲಿಲ್ವಾ ತಮ್ಮ ಶಾಸಕರನ್ನು, ಸಚಿವರನ್ನು ರಕ್ಷಣೆ ಮಾಡಿಕೊಳ್ಳುವ ಕೆಲಸವನ್ನು ಮಾಡಲಿಲ್ವಾ ?

-ಬಿ ವೈ ವಿಜಯೇಂದ್ರ, ಬಿಜೆಪಿ ರಾಜ್ಯಾಧ್ಯಕ್ಷ

ಹೆಣ ಹೂಳುವುದರಲ್ಲೂ ಹಣ ಲೂಟಿ

ಕೋವಿಡ್ ಸಂದರ್ಭದಲ್ಲಿ ಸಾವಿರಾರು ಕೋಟಿ ಲೂಟಿ ಹೊಡೆದಿದ್ದಾರೆ. ಎಷ್ಟು ಲೂಟಿ ಹೊಡೆದಿದ್ದಾರೆ ಅಂದ್ರೆ, ಹೆಣ ಹೂಳುವುದರಲ್ಲೂ ಹಣ ಲೂಟಿ ಹೊಡೆದಿದ್ದಾರೆ. ಶ್ರೀರಾಮುಲು ಆಗ ಮಂತ್ರಿ ಇದ್ದರು, ಯಡಿಯೂರಪ್ಪ ಸಿಎಂ ಆಗಿದ್ದರು. ಚೀನಾಕ್ಕೆ ಹೋಗಿ ಪಿಪಿಇ ಕಿಟ್ ತಂದ್ರು. ದೇಶದಲ್ಲಿ ವಸ್ತು ಸಿಗುತ್ತಿದ್ದರೂ ಚೀನಾದಿಂದ ತಂದು ಭ್ರಷ್ಟಾಚಾರ ಮಾಡಿದ್ರು. ಅದರಲ್ಲಿ ಕೋಟಿ ಕೋಟಿ ಹಣ ಲೂಟಿ ಹೊಡೆದಿದ್ದಾರೆ. ಭ್ರಷ್ಟಾಚಾರ ಮಾಡಿದವರ ಮೇಲೆ ಕ್ರಮ ಕೈಗೊಳ್ಳಬೇಕು. ಇವರ ಮೇಲೆ ಕ್ರಮಕ್ಕೆ ಶಿಪಾರಸ್ಸು ಮಾಡಿದ್ದಾರೆ. ಯಡಿಯೂರಪ್ಪ, ಶ್ರೀರಾಮುಲು ಭ್ರಷ್ಟಾಚಾರ ಲೂಟಿ ಮಾಡೋದು ಬಿಟ್ರೆ ಏನೂ ಮಾಡಿಲ್ಲ. ಜನಾರ್ದನ ರೆಡ್ಡಿ ಚುನಾವಣೆ ಉಸ್ತುವಾರಿ ತೆಗೆದುಕೊಂಡಿದ್ದಾರೆ. ಲೂಟಿ ಹೊಡೆದವರಿಗೆ ಮನ್ನಣೆ ನೀಡಬೇಡಿ ಎಂದು ಕರೆ ಕೊಟ್ಟರು.

ಜಮೀರ್ ಒಬ್ಬ ಮತಾಂಧ: ಕನ್ಫ್ಯೂಸ್ ಮಾಡೋ ಡಿಎನ್‌ಎ ಕಾಂಗ್ರೇಸ್‌ನಲ್ಲಿದೆ

• ಉದಯವಾಹಿನಿ, ಹುಬ್ಬಳ್ಳಿ

ವಕ್ಫ್ ಬೋರ್ಡ್ ಮೂಲಕ ರಾಜ್ಯದ ರೈತರು, ಬಡವರು, ಮಠಗಳ ಆಸ್ತಿಯನ್ನು ಅಕ್ರಮವಾಗಿ ತಮ್ಮದಾಸಿಕೊಳ್ಳಲಾಗುತ್ತಿದೆ ಎಂದು ರಾಜ್ಯ ಸರ್ಕಾರದ ವಿರುದ್ಧ ಆರೋಪ ಕೇಳಿ ಬಂದಿದೆ. ಆದರೆ ಕಾಂಗ್ರೇಸ್ ನವರು ಬಿಜೆಪಿಯವರು ವಕ್ಫ ಆಸ್ತಿ ಸಂರಕ್ಷಣೆ ಮಾಡುತ್ತಿದ್ದಾರೆಎಂದು ಹೇಳಿದ್ದಾರೆ. ಇವೆಲ್ಲ ಬುದ್ಧಿಹೀನ ಮಾತುಗಳು ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿಯವರು ತಿಳಿಸಿದ್ದಾರೆ. ಶನಿವಾರ ಹುಬ್ಬಳ್ಳಿಯಲ್ಲಿ ಮಾತನಾಡಿದ ಅವರು, ಕಾಂಗ್ರೇಸ್ ನವರು ಬುದ್ಧಿ ಇದ್ದು ಮಾಡ್ತೀದಾರೋ, ಬುದ್ಧಿ ಇಲ್ಲದೆ ಮಾತಾಡುತ್ತಿದ್ದಾರೆಯೋಗೊತ್ತಿಲ್ಲ.. ಅವರು ದುರುಳ ಬುದ್ಧಿಯಿಂದ ವಕ್ಫ್ ವಿಚಾರದಲ್ಲಿ ಹೀಗೆಲ್ಲ ಮಾಡುತ್ತಿದ್ದಾರೆ ಮತ್ತು ಮಾತನಾಡುತ್ತಿದ್ದಾರೆ ಎಂದು ಪ್ರಹ್ಲಾದ್ ಜೋಶಿ ಲೇವಡಿ ಮಾಡಿದರು. ಕಾಂಗ್ರೇಸ್‌ನವರು ಬಿಜೆಪಿ ವಕ್ಫ ಆಸ್ತಿ ಸಂರಕ್ಷಣೆ ಮಾಡುತ್ತಿದ್ದಾರೆ ಎಂದೊಮ್ಮೆ ಹೇಳುತ್ತಾರೆ. ಅನ್ವರ ಮಾನಪಾಡಿ ವರದಿ ಪ್ರಕಾರ ಕಾಂಗ್ರೇಸ್ ನವರೇ ವಕ್ಫ ಆಸ್ತಿ ಕಬಳಿಕೆ ಮಾಡಿದ್ದಾರೆ ಎಂದು ತಿಳಿದು ಬಂದಿದೆ. ಜನರನ್ನು ಕನ್ಫ್ಯೂಸ್ ಮಾಡುವ ಡಿಎನ್‌ನ ಕಾಂಗ್ರೇಸ್‌ನವರಲ್ಲಿದೆ ಎಂದು ಟೀಕಿಸಿದರು.

ಮೆಜೆಸ್ಟಿಕ್, ಲಾಲ್‌ಬಾಗ್, ಚಿಕ್ಕಪೇಟೆಯೂ ವಕ್ಫ್ ಆಸ್ತಿ

• ಉದಯವಾಹಿನಿ, ಹಾವೇರಿ

ಸತುಷ್ಟೀಕರಣದ ಪಿತಾಮಹ ಭ್ರಷ್ಟಸಿದ್ದರಾಮಯ್ಯ ಅವರ ಕೃಪಾಕಟಾಕ್ಷದಿಂದಾಗಿ ಇಂದು ವಕ್ಫ್ ಅತಿರೇಕದ ಉತ್ತುಂಗಕ್ಕೆ ಏರಿದೆ ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ವಾಗ್ದಾಳಿ ನಡೆಸಿದ್ದಾರೆ. ಹಾವೇರಿಯಲ್ಲಿ ಮಾತನಾಡಿದ ಸಚಿವ ಪ್ರಹ್ಲಾದ್ ಜೋಶಿ, ಬೆಂಗಳೂರಿನ ಮೆಜೆಸ್ಟಿಕ್, ಲಾಲ್‌ಬಾಗ್, ಅವೆನ್ಯೂ ರೋಡ್, ಚಿಕ್ಕಪೇಟೆ ಸೇರಿದಂತೆ ಹಲವು ಪ್ರದೇಶಗಳನ್ನು ವಕ್ಫ್ ತನ್ನದೆಂದು ಘೋಷಿಸಲು ಆರಂಭಿಸಿದೆ. ಕೆಂಪೇಗೌಡರು ಕಟ್ಟಿ ಬೆಳೆಸಿದ ಬೆಂದಕಾಳೂರು ವಕ್ಫ್ ಲ್ಯಾಂಡ್ ಜಿಹಾದ್‌ನ ಕಪಿಮುಷ್ಟಿಯಲ್ಲಿ ಸಿಲುಕಿ ಬೇಯುತ್ತಿದೆ ಎಂದು ಕಿಡಿಕಾರಿದ್ದಾರೆ. ವಕ್ಫ್ ಮೂಲಕ ರಾಜ್ಯ ಸರ್ಕಾರ 9 ಲಕ್ಷ ಎಕರೆ ಜಮೀನು ಕಬಳಿಸಲು ಹೊರಟಿದೆ. ಬೆಂಗಳೂರಿನ ಮೆಜೆಸ್ಟಿಕ್, 175 ಎಕರೆ ಇದೆ. ಇದು ಸಹ ವಕ್ಫ್ ಆಸ್ತಿ ಎಂದು ಹೇಳುತ್ತಿದ್ದಾರೆ. ನಾಳೆ ವಿಧಾನಸೌಧವೂ ವಕ್ಫ್ ಆಸ್ತಿ ಎಂದು ಹೇಳಿದರೆ ಆಶ್ಚರ್ಯವಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಕಾಂಗ್ರೇಸ್ ಸರ್ಕಾರದಲ್ಲಿ ಕಮಿಷನ್ 90% ಗೆ ಹೋಗಿದೆ: ಯತ್ನಾಳ್ ಕಿಡಿ

• ಉದಯವಾಹಿನಿ, ಹುಬ್ಬಳ್ಳಿ

ಶಿಗ್ಗಾಂವಿ ಕ್ಷೇತ್ರದಲ್ಲಿ ಕೇವಲ ಕಾಂಗ್ರೇಸ್ ಮುಖಂಡರು ಮಾತ್ರ ಬಸವರಾಜ ಬೊಮ್ಮಾಯಿ ಬಗ್ಗೆ ಅಪಸ್ವರ ಎತ್ತುತ್ತಿದ್ದಾರೆ. ಈಗಲೂ ಅಲ್ಲಿನ ಕಡು ಬಡವರು ಬೊಮ್ಮಾಯಿ ಬಗ್ಗೆ ನಮಗೆ ಮನೆ ಕಟ್ಟಿಸಿ ಕೊಟ್ಟಿದ್ದಾರೆ ಎಂದು ಕೂಗಿ ಹೇಳುತ್ತಾರೆ ಎಂದು ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಹೇಳಿದ್ದಾರೆ. ನಗರದಲ್ಲಿಂದು ಮಾಧ್ಯಮದವರೊಂದಿಗೆ ಮಾತಾಡಿದ ಯತ್ನಾಳ್, ಬೊಮ್ಮಾಯಿ ಅವರು 13,500 ಮನೆಗಳನ್ನು ಜನರಿಗೆ ನೀಡಿದ್ದಾರೆ. ನನಗೆ 5 ಲಕ್ಷ ರೂ.ಗಳ ಮನೆ ಬೊಮ್ಮಾಯಿ ಕಟ್ಟಿಸಿಕೊಟ್ಟಿದ್ದಾರೆ ಅಂತ ಒಬ್ಬ ದಲಿತ ಕೂಗಿ ಹೇಳುತ್ತಾರೆ. ಆದರೆ ವರುಣಾದಲ್ಲಿ ಸಿದ್ದರಾಮಯ್ಯ ಏನು ಮಾಡಿದ್ದಾರೆ? ಅವರು ಕ್ಷೇತ್ರಕ್ಕೆ ಹೋದಾಗ ಏನೂ ಕೆಲಸವಾಗಿಲ್ಲ ಅಂತ ಜನ ಗಲಾಟೆ ಮಾಡಿದ್ದರು ಎಂದು ತಿಳಿಸಿದರು. ಕಾಂಗ್ರೇಸ್‌ನವರು ಅಧಿಕಾರದ ಒಂದೂವರೆ ವರ್ಷದಿಂದ ತಮ್ಮ ಕ್ಷೇತ್ರದಲ್ಲೇ ಒಂದು ರಸ್ತೆಗೆ ಮಣ್ಣು ಕೂಡಾ ಹಾಕಿಸಿಲ್ಲ, ಬರೀ ಗ್ಯಾರಂಟಿ ಗ್ಯಾರಂಟಿ ಎಂದು ಹೇಳಿ ಹಗಲು ದರೋಡೆ ಮಾಡುತ್ತಿದ್ದಾರೆ. ಡಿಕೆ ಶಿವಕುಮಾರ್ ಪ್ರತಿ ಚದರ ಅಡಿಗೆ 75 ರೂ. ತೆಗೆದುಕೊಳ್ಳುತ್ತಿದ್ದಾರೆ. ಕಮೀಶನ್ ಕೊಡದಿದ್ದರೆ ಸೈಟಿಲ್ಲ ಎಂದರು. ಬಿಜೆಪಿ ಮೇಲೆ 40% ಕಮಿಷನ್ ಆರೋಪ

ಸಿದ್ಧಸೂಕ್ತಿ

ಡಾ ಆರೂಢಭಾರತೀ ಸ್ವಾಮೀಜಿ
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

ನಿಜತತ್ತ್ವವೆನೆ ರಾಜಿಪನು ಕಲ್ಪಿತಾತ್ಮನು

ನಿಜಗುಣರ ಪರಮಾನುಭವ ಬೋಧೆಯ ಮಾತು. ಪರಬ್ರಹ್ಮದಲ್ಲಿ ತೋರಿದ ಕಲ್ಪಿತ ಪುರುಷನು ನಾಮರೂಪಾತ್ಮಕ ಜಗತ್ತಾಗಿ ತೋರಿ ಸತ್ಯದಂತೆ ತೋರುವನು. ಗುರುಶಾಸ್ತ್ರಾದಿಗಳ ಮೂಲಕ ತನ್ನ ನಿಜ ಸ್ವರೂಪದ ಜ್ಞಾನ ಆಗುವವರೆಗೂ ಈ ನಾಮರೂಪಕ್ರಿಯಾತ್ಮಕ ಜಗತ್ತು ಎಂಬ ಕಲ್ಪಿತ ಪುರುಷ ಸತ್ಯದಂತೆ ಕಂಗೊಳಿಸುವನು. ಸ್ವರೂಪ ಜ್ಞಾನ ಆದ ಕೂಡಲೇ ಇದೆಲ್ಲ ಮಿಥ್ಯೆಯಾಗಿ ಪರಬ್ರಹ್ಮಮಾತ್ರ ಸತ್ಯವಾಗಿ ಉಳಿಯುವುದು. ಬೆಜವಾಡ ನ್ಯಾಯ ಇದಕ್ಕೊಂದು ಉದಾಹರಣೆ. ಬೆಜವಾಡ ಪ್ರಾಂತದವನೊಬ್ಬ ಸತಿಯೊಂದಿಗೆ ನಡೆದು ಹೋಗುತ್ತಿರಲು ಬಾಯಾರಿಕೆಯಾಗಿ ಕಂಡ ಬಾವಿಯೊಳಗೆ ಇಳಿದು ನೀರು ಕುಡಿದು ಮೇಲೇರುತ್ತಿರುವಾಗ, ಅಲ್ಲಿ ವಾಸವಿದ್ದ ಬ್ರಹ್ಮರಾಕ್ಷಸವೊಂದು ಆ ದಾರಿಹೋಕನ ಸತಿಗೆ ವ್ಯಾಮೋಹಿತವಾಗಿ ಆ ದಾರಿಹೋಕನ ರೂಪ ತಾಳಿತು. ಇವರೀರ್ವರಲ್ಲಿ ನಿಜ ಪತಿ ಯಾರೆಂದು ಆಕೆ ಗುರುತಿಸದಾದಳು. ನ್ಯಾಯಕ್ಕಾಗಿ ರಾಜನ ಮೊರೆ ಹೋದಳು. ನಿಜ ಪತಿಗಿಂತ ರೂಪಾಂತರ ಪತಿಯೇ ಜೋರಿದ್ದ. ಸೀಸೆಯೊಳಗೆ ಯಾರು ಹೋಗಬಲ್ಲಿರಿ ಎಂದಾಗ ರೂಪಾಂತರ ಪತಿ ಒಳಗೆ ಹೋದ. ಆಗ ಬ್ರಹ್ಮ ರಾಕ್ಷಸನ ಬಣ್ಣ ಬಯಲಾಗಿ ನಕಲಿ ಪತಿ ಎಂಬುದು ಸಾಬೀತಾಯಿತಂತೆ. ಅದರಂತೆ ಕಲ್ಪಿತ ಪುರುಷ.

ಬೆಂಗಳೂರಲ್ಲಿ ತಡರಾತ್ರಿ ಪರಿಚಿತರಿಂದಲೇ ಒಂಟಿ ಮಹಿಳೆಯ ಬರ್ಬರ ಹತ್ಯೆ!

• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನಲ್ಲಿ ಒಂಟಿ ಮಹಿಳೆಯ ಬರ್ಬರವಾಗಿ ಹತ್ಯೆ ನಡೆದಿರುವ ಘಟನೆ ಬೆಂಗಳೂರಿನ ಬೊಮ್ಮನಹಳ್ಳಿಯ ಹೊಂಗಸಂದ್ರ ಮನೆಯಲ್ಲಿ ಈ ಒಂದು ಕೃತ್ಯ ನಡೆದಿದೆ ಎಂದು ತಿಳಿದುಬಂದಿದೆ. ಕಳೆದ ಮಧ್ಯ ರಾತ್ರಿ 1:30 ಗಂಟೆ ಸುಮಾರಿಗೆ ಈ ಒಂದು ಕೊಲೆ ನಡೆದಿದೆ ಎಂದು ತಿಳಿದುಬಂದಿದೆ. ಜಯಮ್ಮ (45) ಕೊಲೆಗೀಡಾದ ಮಹಿಳೆ ಎಂದು ತಿಳಿದು ಬಂದಿದೆ. ಪರಿಚಿತರೇ ಯಾರೋ ಮಹಿಳೆಯನ್ನು ಕೊಲೆ ಮಾಡಿದ್ದಾರೆ ಎಂದು ಮೇಲ್ನೋಟಕ್ಕೆ ಕಂಡು ಬಂದಿದೆ. ಸದ್ಯ ಮಹಿಳೆಯ ಮೃತ ದೇಹವನ್ನು ಬೆಂಗಳೂರಿನ ಸೈನ್ಸ್ ಜಾನ್ಸ್ ಆಸ್ಪತ್ರೆಗೆ ಮರಣೋತ್ತರ ಪರೀಕ್ಷೆಗಾಗಿ ರವಾನಿಸಲಾಗಿದೆ. ಒಂದು ಹತ್ಯೆ ಕುರಿತಂತೆ ಬೊಮ್ಮನ ಹಳ್ಳಿಯ ಪೊಲೀಸ್ ಠಾಣೆಯಲ್ಲಿ ಈ ಕುರಿತು ಕೇಸ್ ದಾಖಲಾಗಿದೆ.

ವಿಮಾ ಮೊತ್ತ 50 ಲಕ್ಷಕ್ಕೆ ಹೆಚ್ಚಳ!

• ಉದಯವಾಹಿನಿ, ಬೆಂಗಳೂರು

ಪೊಲೀಸ್ ಇಲಾಖೆಯ ಫಾಲೋಯರ್ ಹುದ್ದೆಯಿಂದ ಮಹಾ ನಿರ್ದೇಶಕರು ಹಾಗೂ ಆರಕ್ಷಕ ಮಹಾ ನಿರೀಕ್ಷಕರು ಹುದ್ದೆಯಲ್ಲಿನ 93,449 ಅಧಿಕಾರಿ / ಸಿಬ್ಬಂದಿಗಳಿಗೆ ವಿಶೇಷ ಗುಂಪು ವಿಮಾ ಮೊತ್ತ ರೂ.20 ಲಕ್ಷದಿಂದ ರೂ.50 ಲಕ್ಷಕ್ಕೆ ಹೆಚ್ಚಳ ಮಾಡಲಾಗಿದೆ. ಎಫ್ಐಆರ್ ನೋಂದಣಿಯಿಂದ ಪ್ರಕರಣದ ವಿಲೇವಾರಿ ವರೆಗಿನ ಕಾರ್ಯ ಶೀಘ್ರವಾಗಿ ನಿರ್ವಹಿಸಲು ಮತ್ತು ನಾಗರಿಕರಿಗೆ ಹೆಚ್ಚಿನ ಸೇವೆಗಳನ್ನು ಒದಗಿಸಲು ಪೊಲೀಸ್ ಐ.ಟಿ.ವಿ2 ತಂತ್ರಾಂಶ ವಿನ್ಯಾಸ ಸುಳ್ಳು ಸುದ್ದಿಗಳ ಮೇಲೆ ನಿಗಾ ವಹಿಸಲು ವಿವಿಧ ಇಲಾಖೆಗಳ ಮತ್ತು ಸಾಮಾಜಿಕ ವಲಯಗಳ ಪ್ರತಿನಿಧಿಗಳನ್ನು ಒಳಗೊಂಡ MDCC ಸಮಿತಿ ರಚನೆ ಸಂಪುಟದ ಸಚಿವರನ್ನು ಒಳಗೊಂಡಂತೆ ಸೈಬರ್ ಕ್ರೈಮ್‌ಗಳ ನಿರ್ವಹಣೆಯ ಮೇಲುಸ್ತುವಾರಿಗಾಗಿ ವಿಶೇಷ ಅಧಿಕಾರಿ ಸಮಿತಿ (SPECIAL EMPOWERED COMMITTEE) ರಚನೆ ಮಾಡಲಾಗಿದೆ.

ವಕ್ಫ್ ವಿವಾದ ಕೊತ-ಕೊತ, ಬಿಜೆಪಿ ವಿರುದ್ಧ ಕಾಂಗ್ರೇಸ್ ಪ್ರತಿಭಟನೆ

• ಉದಯವಾಹಿನಿ, ಬೆಂಗಳೂರು

ವಕ್ಫ್ ಬೋರ್ಡ್ ವಿಚಾರವನ್ನು ಮುಂದಿಟ್ಟುಕೊಂಡು ಬಿಜೆಪಿಯವರು ರೈತರ ಹೆಸರನ್ನು ದುರ್ಬಳಕೆ ಮಾಡುತ್ತಿರುವುದು ಖಂಡನೀಯ ಎಂದು ಕಾಂಗ್ರೇಸ್ ವತಿಯಿಂದ ಇಂದು ಸಂಸದ ತೇಜಸ್ವಿ ಸೂರ್ಯ ಪ್ರತಿಕೃತಿ ದಹಿಸಿ ಆಕ್ರೋಶ ಹೊರಹಾಕಲಾಯಿತು. ನಗರದ ಕಾಂಗ್ರೇಸ್ ಭವನದ ರೇಸ್ ಕೋರ್ಸ್ ರಸ್ತೆಯಲ್ಲಿ ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಎಸ್.ಮನೋಹರ್ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ, ಬಿಜೆಪಿ ರಾಜ್ಯಧ್ಯಕ್ಷ ಬಿ.ವೈ.ವಿಜಯೇಂದ್ರ, ವಿಪಕ್ಷನಾಯಕ ಆರ್ ಅಶೋಕ್ ಅವರ ಭಾವಚಿತ್ರಗಳಿಗೆ ಬೆಂಕಿ ಹಚ್ಚಿ ಕೈನಾಯಕರು ಕಿಡಿಕಾರಿದರು. ವಕ್ಫ್ ವಿಚಾರದಲ್ಲಿ ಸುಳ್ಳು ಸುದ್ದಿ ಹರಡಿಸಿರುವ ತೇಜಸ್ವಿ ಸೂರ್ಯರನ್ನು ಕೂಡಲೇ ಬಂಧಿಸಿ ಎಂದು ಒತ್ತಾಯಿಸಿದರು. ಬಿಜೆಪಿಯವರು ಸುಳ್ಳು ಹೇಳುವುದರಲ್ಲಿ ನಿಸ್ಸೀಮರು. ವಕ್ಫ್ ಬೋರ್ಡ್ ನಿಂದ ಬಿಜೆಪಿ ಆಡಳಿತದಲ್ಲೂ ರೈತರಿಗೆ ನೋಟಿಸ್ ನೀಡಲಾಗಿತ್ತು. ಅದನ್ನು ಮರೆಮಾಚುತ್ತಿದ್ದಾರೆ ಎಂದು ಕೈ ಮುಖಂಡರು ವಾಗ್ದಾಳಿ ನಡೆಸಿದರು.

ಜೆಪ್ಟೋ, ಬ್ಲಿಂಕಿಟ್‌ಗಳಿಗೆ ಬೀದಿಬದಿ ಎಳನೀರು ವ್ಯಾಪಾರಿಯಿಂದ ಟಕ್ಕರ್!

• ಉದಯವಾಹಿನಿ, ಬೆಂಗಳೂರು

ಆಧುನಿಕತೆ ಮುಂದುವರಿದಂತೆ ಆನ್ ಲೈನ್ ವ್ಯಾಪಾರ ಹೆಚ್ಚಾಗುತ್ತಿದೆ. ಬೀದಿಬದಿ ವ್ಯಾಪಾರಿಗಳು ಸಂಕಷ್ಟದಲ್ಲಿದ್ದಾರೆ. ಈ ನಡುವೆ ಬೆಂಗಳೂರಿನ ಎಳನೀರು ವ್ಯಾಪಾರಿಯ ಪೋಸ್ಟ್ ವೊಂದು ಸೋಷಿಯಲ್ ಮೀಡಿಯಾದಲ್ಲಿ ಹಲ್ ಚಲ್ ಸೃಷ್ಟಿಸುತ್ತಿದೆ.ಬೆಂಗಳೂರು ಮೂಲದ ಎಳನೀರು ಮಾರುವ ವ್ಯಕ್ತಿಯೊಬ್ಬನ ಜಾಹೀರಾತು ಸಿಕ್ಕಾಪಟ್ಟೆ ಸದ್ದು ಮಾಡುತ್ತಿದೆ. ಕ್ವಿಕ್ ಕಾಮರ್ಸ್ ಪ್ಲಾಟ್ ಫಾರ್ಮ್ ಕಂಪನಿಗಳಾದ ಜೆಪ್ಟೋ , ಬ್ಲಿಂಕಿಟ್, ಬಿಗ್ ಬ್ಯಾಸ್ಕೆಟ್‌ನಲ್ಲಿರುವ ಎಳನೀರು ರೇಟ್ ನ ಉಲ್ಲೇಖಿಸಿ ತಾನು ಮಾರುವ ಎಳನೀರು ಬೆಲೆಯನ್ನು ಪೋಸ್ಟ್‌ನಲ್ಲಿ ನಮೂದಿಸಿದ್ದಾನೆ. ನೀವು ಕೊಳ್ಳುವ ಆನ್ ಲೈನ್ ಸಂಸ್ಥೆಗಳಲ್ಲಿ ಎಳನೀರು ಬೆಲೆ 70-80 ಇದೆ. ಗ್ರಾಹಕರಿಗೆ ದುಬಾರಿಯಾಗಲಿದೆ. ನಮ್ಮ ಅಂಗಡಿಯಲ್ಲಿ ಕೇವಲ 55 ರೂ ಗೆ ಎಳನೀರು ನೀಡಲಾಗುತ್ತದೆ ಎಂದು ಜಾಹೀರಾತು ಪೋಸ್ಟ್ ನೀಡಿದ್ದಾನೆ. ಆನ್ ಲೈನ್ ವ್ಯಾಪಾರಕ್ಕೆ ಸೆಡ್ಡುಹೊಡೆಯಲು ಲೋಕಲ್ ಎಳನೀರು ವ್ಯಾಪಾರಿಯ ಜಾಹೀರಾತು ಪೋಸ್ಟ್‌ಗೆ ನೆಟ್ಟಿಗರು ಕಮೆಂಟ್ಸ್ ಮೂಲಕ ಭರ್ಜರಿ ರೆಸ್ಪಾನ್ಸ್ ನೀಡಿದ್ದಾರೆ. ವಿವಿಧ ರೀತಿಯಲ್ಲಿ ಮೆಸೇಜ್ ಮಾಡಿ ಬೀದಿಬದಿಯ ಸಣ್ಣ ಅಂಗಡಿ ವ್ಯಾಪಾರಿಗೆ ಬೆಂಬಲ ಸೂಚಿಸಿದ್ದಾರೆ

ಈರುಳ್ಳಿ ಬೆಲೆಯಲ್ಲಿ ಮತ್ತೆ ಏರಿಕೆ, ಶತಕದತ್ತ ದಾಪುಗಾಲು!

• ಉದಯವಾಹಿನಿ, ಬೆಂಗಳೂರು

ಬೆಲೆ ಏರಿಕೆಯಿಂದ ತತ್ತರಿಸಿರುವ ಜನಸಾಮಾನ್ಯರಿಗೆ ಮತ್ತೊಂದು ಶಾಕ್ ಎದುರಾಗಿದ್ದು, ಇದೀಗ ಈರುಳ್ಳಿ ಬೆಲೆಯಲ್ಲಿ ಭಾರೀ ಏರಿಕೆಯಾಗುವ ಸಾಧ್ಯತೆ ಇದೆ. ಹೌದು, ರಾಜ್ಯದಲ್ಲಿ ಅಕಾಲಿಕ ಮಳೆಗೆ ಈರುಳ್ಳಿ ಬೆಳೆ ನೀರುಪಾಲಾಗಿದ್ದು, ಮಳೆಯಿಂದ ರಕ್ಷಿಸಿದ ಈರುಳ್ಳಿ ಇಟ್ಟಲ್ಲೇ ಕೊಳೆತು ಹೋಗುತ್ತಿದೆ. ಹೀಗಾಗಿ ದರ ಏರಿಕೆಯಾಗಿದೆ. ಕೆಜಿಗೆ 50 ರೂ. ಇದ್ದ ಈರುಳ್ಳಿಯ ಬೆಲೆ ಇದೀಗಾ 60 ರಿಂದ 80 ರೂಪಾಯಿ ವರೆಗೆ ಮಾರಾಟ ಮಾಡಲಾಗುತ್ತಿದೆ. ಕಳೆದ ಮೂರು ತಿಂಗಳಿನಿಂದ ಈರುಳ್ಳಿಯ ಬೆಲೆ ಏರಿಕೆಯಾಗುತ್ತಲೇ ಇದೆ. ಮಳೆ ಇಲ್ಲದಿದ್ದರೂ ಬೆಲೆ 70 ರ ಗಡಿ ದಾಟಿದೆ. ಕಳೆದ ತಿಂಗಳು ಸುರಿದ ಭಾರಿ ಮಳೆಯ ಪರಿಣಾಮ ನಿರೀಕ್ಷೆಯಷ್ಟು ಈರುಳ್ಳಿ ಮಾರುಕಟ್ಟೆಗೆ ಬಂದಿಲ್ಲ.ಹಾಗೂ ಹೊರ ರಾಜ್ಯಗಳಲ್ಲಿ ನಿರೀಕ್ಷಿತ ಪ್ರಮಾಣದಲ್ಲಿ ಈರುಳ್ಳಿ ಪೂರೈಕೆಯಾಗುತ್ತಿಲ್ಲ.ಈ ಹಿನ್ನೆಲೆಯಲ್ಲಿ ಈರುಳ್ಳಿ ಬೆಲೆ ಏರಿಕೆಗೆ ಕಾರಣ ಎನ್ನಲಾಗಿದೆ.

ಉಪಚುನಾವಣೆ: ಸಂವಾದ, ಸಮೀಕ್ಷೆಗಳಿಗೆ ನಿರ್ಬಂಧ

ಮತದಾನದ ಹಿನ್ನಲೆಯಲ್ಲಿ ಚನ್ನಪಟ್ಟಣ, ಸಂಡೂರು ಮತ್ತು ಶಿಗ್ಗಾಂವಿಯಲ್ಲಿ ಸಿದ್ಧತೆಗಳನ್ನು ಮಾಡಿಕೊಳ್ಳಲಾಗುತ್ತಿದೆ

• ಉದಯವಾಹಿನಿ, ಬೆಂಗಳೂರು

ಕರ್ನಾಟಕದ ಮೂರು ವಿಧಾನಸಭಾ ಕ್ಷೇತ್ರಗಳಿಗೆ ನವೆಂಬರ್ 13ರಂದು ಉಪ ಚುನಾವಣೆ ನಡೆಯಲಿದೆ. ಮತದಾನದ ಹಿನ್ನಲೆಯಲ್ಲಿ ಚನ್ನಪಟ್ಟಣ, ಸಂಡೂರು ಮತ್ತು ಶಿಗ್ಗಾವಿಯಲ್ಲಿ ಸಿದ್ಧತೆಗಳನ್ನು ಮಾಡಿಕೊಳ್ಳಲಾಗುತ್ತಿದೆ. ಮತದಾನ ನಡೆಯಲಿರುವ ಹಿನ್ನೆಲೆಯಲ್ಲಿ ಸಂವಾದ, ಸಮೀಕ್ಷೆಗಳಿಗೆ ನಿರ್ಬಂಧ ಹೇರಲಾಗಿದೆ.

ಚುನಾವಣಾ ಫಲಿತಾಂಶ ನವೆಂಬರ್ 23ರಂದು ಪ್ರಕಟ ವಾಗಲಿದೆ. ಮೂರು ಕ್ಷೇತ್ರಗಳಲ್ಲಿ ಉಪ ಚುನಾವಣೆಗೆ ನವೆಂಬರ್ 13ರಂದು ನಡೆಯಲಿದೆ. ಈ ಹಿನ್ನಲೆಯಲ್ಲಿ ನವೆಂಬರ್ 11ರ ಸಂಜೆ 6 ಗಂಟೆಗೆ ಬಹಿರಂಗ ಪ್ರಚಾರ ಅಂತ್ಯವಾಗಲಿದೆ. ಮತದಾನ ಮುಕ್ತಾಯ ಸಮಯದ ಪೂರ್ವ 48 ಗಂಟೆ ಅವಧಿಯಲ್ಲಿ ಅಂದರೆ, ನವೆಂಬರ್ 11ರ ಸಂಜೆ 6 ಗಂಟೆಯಿಂದ ನವೆಂಬರ್ 13ರ ಸಂಜೆ 6.30ರ ತನಕ ನಿರ್ಬಂಧ ಹೇರಲಾಗಿದೆ. ಈ ಸಮಯದಲ್ಲಿ ಚುನಾವಣೆಗೆ ಸಂಬಂಧಿಸಿದಂತೆ ಮತದಾರರ ಮೇಲೆ ಪ್ರಭಾವ ಬೀರುವ ರೀತಿ, ಮಾಧ್ಯಮಗಳು, ಟಿವಿ ವಾಹಿನಿಗಳಲ್ಲಿ ಜಾಹೀರಾತು, ಚರ್ಚೆ, ಸಂವಾದ, ಸಂದರ್ಶನ, ವಿಶ್ಲೇಷಣೆ, ಚುನಾವಣೋತ್ತರ ಸಮೀಕ್ಷೆ ಹೀಗೆ ಯಾವುದೇ ಜಾಹೀರಾತು ಹಾಗೂ ಸುದ್ದಿಯನ್ನು ವಿದ್ಯುನ್ಮಾನ ವಾಹಿನಿ, ಕೇಬಲ್ ಟಿವಿ, ರೇಡಿಯೊ, ಸಾಮಾಜಿಕ ಜಾಲತಾಣ ಹಾಗೂ ಡಿಜಿಟಲ್ ಮಾಧ್ಯಮಗಳಲ್ಲಿ ಪ್ರಸಾರ ಮಾಡುವುದು, ಬಿತ್ತರಿಸುವುದು ನಿರ್ಬಂಧಿಸಲಾಗಿದೆ.

ಚುನಾವಣಾ ಆಯೋಗದ ಈ ನಿರ್ಬಂಧ

2024ರ ಲೋಕಸಭೆ ಚುನಾವಣೆ ಫಲಿತಾಂಶದ ಬಳಿಕ ಶಾಸಕರ ರಾಜೀನಾಮೆಯಿಂದ ತೆರವಾದ ಮೂರು ಕ್ಷೇತ್ರಗಳಿಗೆ ಉಪ ಚುನಾವಣೆ ನಡೆಯಲಿದೆ. ಉಪ ಚುನಾವಣೆ ಕಣದಲ್ಲಿ ಒಟ್ಟು 45 ಅಭ್ಯರ್ಥಿಗಳಿದ್ದಾರೆ. ನವೆಂಬರ್ 13ರಂದು ಮತದಾನ ನಡೆಯಲಿದ್ದು, ನವೆಂಬರ್ 23ರಂದು ಮತ ಎಣಿಕೆ ನಡೆಯಲಿದೆ.

ಎಕ್ಸಿಟ್ ಪೋಲ್ ನಿಷೇಧ: ಮತದಾನದ ಪೂರ್ವ 48 ಗಂಟೆ ಮತ್ತು ಮತದಾನದ ಸಮಯ ಮುಗಿದ ನಂತರದ ಅರ್ಧ ಗಂಟೆವರೆಗೂ ಯಾವುದೇ ಸುದ್ದಿ ವಾಹಿನಿ, ಕೇಬಲ್ ಟಿವಿ ಸೇರಿದಂತೆ ಇನ್ನಿತರ ಡಿಜಿಟಲ್ ಮಾಧ್ಯಮಗಳು ಎಕ್ಸಿಟ್ ಪೋಲ್ ಪ್ರಸಾರ ಮಾಡುವುದನ್ನು ನಿಷೇಧಿಸಲಾಗಿದೆ.

ಕಠಿಣ ಕ್ರಮ: ಚುನಾವಣಾ ಆಯೋಗದ ಈ ನಿರ್ಬಂಧ ನಿಯಮ ಉಲ್ಲಂಘಿಸಿ ಚುನಾವಣಾ ಫಲಿತಾಂಶದ ಮೇಲೆ ಪ್ರಭಾವ ಬೀರುವ ಸುದ್ದಿ ಬಿತ್ತರಿಸಿದಲ್ಲಿ ಅಂತಹವರ ವಿರುದ್ಧ ಪ್ರಜಾ ಪ್ರಾತಿನಿಧ್ಯ ಕಾಯ್ದೆ-1951ರ ಕಲಂ 126ರ ಅನ್ವಯ 2 ವರ್ಷಗಳ ಶಿಕ್ಷೆ ಅಥವಾ ದಂಡ, ಇಲ್ಲವೆ ಶಿಕ್ಷೆ ಮತ್ತು ದಂಡ ಎರಡನ್ನೂ ವಿಧಿಸಲಾಗುವುದು ಎಂದು ಎಚ್ಚರಿಕೆ ನೀಡಲಾಗಿದೆ.

ಮತದಾನ ಪೂರ್ವ 48 ಗಂಟೆ ಅವಧಿಯಲ್ಲಿ ಮಾಧ್ಯಮಗಳು, ವಿದ್ಯುನ್ಮಾನ ವಾಹಿನಿ, ಕೇಬಲ್ ಟಿವಿ, ರೇಡಿಯೊ, ಸಾಮಾಜಿಕ ಜಾಲತಾಣ ಹಾಗೂ ಡಿಜಿಟಲ್ ಮಾಧ್ಯಮಗಳು ಚುನಾವಣಾ ಆಯೋಗವು ಕಾಲ ಕಾಲಕ್ಕೆ ಹೊರಡಿಸುವ ಎಲ್ಲಾ ಮಾರ್ಗದರ್ಶನಗಳನ್ನು ಪಾಲಿಸಬೇಕೆಂದು ಜಿಲ್ಲಾ ಚುನಾವಣಾಧಿಕಾರಿಗಳು ತಿಳಿಸಿದ್ದಾರೆ.

ಜಾಲತಾಣ ಹಾಗೂ ಡಿಜಿಟಲ್ ಮಾಧ್ಯಮ ಸಂಸ್ಥೆಗಳು ಬಿತ್ತರಿಸುವ ಚುನಾವಣಾ ಸುದ್ದಿಯಲ್ಲಿ ಯಾವುದೇ ಅಭ್ಯರ್ಥಿ ಅಥವಾ ರಾಜಕೀಯ ಪಕ್ಷದ ಪರವಾಗಿರುವ ಮತ್ತು ಚುನಾವಣಾ ಫಲಿತಾಂಶದ ಮೇಲೆ ಪ್ರಭಾವ ಬೀರುವಂತಹ ಪ್ಯಾನಲಿಸ್ಟ್ ಅಭಿಪ್ರಾಯಗಳು, ಮನವಿಗಳು ಇಲ್ಲದಿರುವುದನ್ನು ಖಚಿತಪಡಿಸಿಕೊಳ್ಳಬೇಕು. ಇದಲ್ಲದೆ ಯಾವುದೇ ಅಭಿಪ್ರಾಯ ಸಂಗ್ರಹದ ಫಲಿತಾಂಶ ಪ್ರಕಟ, ವಿಶ್ಲೇಷಣೆ, ಪ್ರದರ್ಶನ ಮಾಡುವುದನ್ನು ಸಹ ನಿರ್ಬಂಧಿಸಲಾಗಿದೆ.

ಮೂರು ಕ್ಷೇತ್ರಗಳ ಪೈಕಿ ಶಿಗ್ಗಾವಿಯಲ್ಲಿ 8, ಸಂಡೂರಿನಲ್ಲಿ 6 ಮತ್ತು ಚನ್ನಪಟ್ಟಣದಲ್ಲಿ ಅತಿ ಹೆಚ್ಚು ಎಂದರೆ 31 ಅಭ್ಯರ್ಥಿಗಳು ಕಣದಲ್ಲಿದ್ದಾರೆ. ಚನ್ನಪಟ್ಟಣ ಕ್ಷೇತ್ರದಲ್ಲಿ ಅತಿ ಹೆಚ್ಚು ಎಂದರೆ 50 ಅಭ್ಯರ್ಥಿಗಳು ನಾಮಪತ್ರ ಸಲ್ಲಿಸಿದ್ದರು. ಅಂತಿಮವಾಗಿ ಅಂತಿಮವಾಗಿ 31 ಅಭ್ಯರ್ಥಿಗಳು ಕಣದಲ್ಲಿ ಉಳಿದಿದ್ದಾರೆ.

ಕೋವಿಡ್ ಹಗರಣ ಮಾಜಿ ಬಿಎಸ್‌ವೈ, ಶ್ರೀ ರಾಮುಲು ತನಿಖೆಗೆ ಆಯೋಗ ಶಿಫಾರಸು!

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ಬಿಜೆಪಿ ಅಧಿಕಾರದಲ್ಲಿ ಇದ್ದ ಸಂದರ್ಭ ಕೋವಿಡ್ 19 ಚಿಕಿತ್ಸೆ ಹಾಗೂ ನಿರ್ವಹಣೆ ಹೆಸರಿನಲ್ಲಿ ನಡೆದಿದೆ ಎನ್ನಲಾದ ಹಗರಣಕ್ಕೆ ಸಂಬಂಧಿಸಿ ನಿವೃತ್ತ ನ್ಯಾಯಮೂರ್ತಿ ಜಾನ್ ಮೈಕಲ್ ಡಿ ಕುನ್ಹಾ ಅವರ ನೇತೃತ್ವದಲ್ಲಿ ರಚಿಸಿದ್ದ ಆಯೋಗವು ಅಂದಿನ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಚಿವರನ್ನು ತನಿಖೆ ನಡೆಸಲು ಶಿಫಾರಸ್ಸು ಮಾಡಿದೆ.

ಉದಯವಾಹಿನಿ ಚಿತ್ರ

ಏಪ್ರಿಲ್ 2020ರಲ್ಲಿ ಚೀನಾದ ಎರಡು ಕಂಪನಿಗಳಿಂದ 3 ಲಕ್ಷ ಪಿಪಿಇ ಕಿಟ್‌ಗಳನ್ನು ಅತ್ಯಂತ ದುಬಾರಿ ದರಗಳಲ್ಲಿ ಖರೀದಿಸಿದ್ದಕ್ಕೆ ಯಾವುದೇ ನಿಖರವಾದ ಕಾರಣವಿಲ್ಲ ಎಂಬುದು 'ದಿ ಹಿಂದೂ'ಗೆ ಲಭ್ಯವಿರುವ ಡಿ ಕುನ್ಹಾ ಅವರ ವರದಿಯಲ್ಲಿ ಉಲ್ಲೇಖಿಸಲಾಗಿದೆ. ಪಿಪಿಇ ಕಿಟ್ ಖರೀದಿ ಪ್ರಕ್ರಿಯೆ ಸಂದರ್ಭ ಬಿ. ಎಸ್. ಯಡಿಯೂರಪ್ಪ ಮುಖ್ಯಮಂತ್ರಿಯಾಗಿದ್ದರು ಮತ್ತು ಬಿ. ಶ್ರೀರಾಮುಲು ಆರೋಗ್ಯ ಸಚಿವರಾಗಿದ್ದರು. 1988ರ ಭ್ರಷ್ಟಾಚಾರ ತಡೆ ಕಾಯ್ದೆ ಮತ್ತು ವಿಶ್ವಾಸಾರ್ಹತೆ ಉಲ್ಲಂಘನೆ ಅಪರಾಧದ ಅನ್ವಯ ಸೆಕ್ಷನ್ 7 ಮತ್ತು 11ರ ಅಡಿ ತನಿಖೆ ನಡೆಸುವಂತೆ ಆಯೋಗವು ಶಿಫಾರಸು ಮಾಡಿದೆ. ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳುವಂತೆ ಹೇಳಿದೆ. ಆಗಸ್ಟ್ 31ರಂದು ಡಿ ಕುನ್ಹಾ ಆಯೋಗವು ತನ್ನ ಮಧ್ಯಂತರ ವರದಿಯನ್ನು ರಾಜ್ಯ ಸರ್ಕಾರಕ್ಕೆ ಸಲ್ಲಿಸಿತ್ತು. ಪ್ರಸ್ತುತ ಸಂಪುಟದ ಉಪ ಸಮಿತಿಯು ವರದಿಯನ್ನು ಪರಿಶೀಲಿಸುತ್ತಿದೆ.

ಚೀನಾದ ಡಿಎಚ್‌ಬಿ ಗ್ಲೋಬಲ್ ಹಾಂಗ್ ಕಾಂಗ್, ಬಿಗ್ ಫಾರ್ಮಾಸ್ಯೂಟಿಕಲ್ಸ್ ನಿಂದ ಪ್ರತಿ ಯನಿಟ್‌ಗೆ 2,000 ರೂ. ನಂತೆ 3 ಲಕ್ಷ ಪಿಪಿಇ ಕಿಟ್‌ಗಳನ್ನು ಖರೀದಿಸಲಾಗಿದೆ. ಈ ಖರೀದಿ ಪ್ರಕ್ರಿಯೆಯು ಯಾವುದೇ ಟೆಂಡರ್ ಕರೆಯದೆ ಅಥವಾ 1999ರ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ಕಾಯ್ದೆಯ ವಿನಾಯಿತಿಯನ್ನು ಪಡೆಯದೆ ನೇರವಾಗಿ ನಡೆದಿದೆ.

ಬಿಜೆಪಿ ನಾಯಕರ ಕೋವಿಡ್ ಹಗರಣ ಬಟಾಬಯಲಾಗಿದೆ

• ಉದಯವಾಹಿನಿ, ಬೆಂಗಳೂರು

ಹೆಣ ಇಟ್ಟು ಹಣ ಮಾಡಿದ ಬಿಜೆಪಿ ನಾಯಕರ ಕೋವಿಡ್ ಹಗರಣ ಬಟಾಬಯಲಾಗಿದೆ ಎಂಬುದಾಗಿ ಕೆಪಿಸಿಸಿ ಮಾಧ್ಯಮ ವಿಭಾಗದ ಅಧ್ಯಕ್ಷ ರಮೇಶ್ ಬಾಬು ಅವರು ಹೇಳಿದ್ದಾರೆ. ಇಂದು ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವಂತ ಅವರು, ಹೆಣ ಇಟ್ಟು ಹಣ ಮಾಡಿದ ಬಿಜೆಪಿ ನಾಯಕರ ಕೋವಿಡ್ ಹಗರಣ ಬಟಾಬಯಲಾಗಿದೆ! ಪಿಪಿಪಿ ಕಿಟ್ಗಳ ಹತ್ತಾರು ಪಟ್ಟು ಹೆಚ್ಚು ದರಕ್ಕೆ ಚೀನಾ/ಖಾಸಗಿಯಿಂದ ಖರೀದಿಸಿ ಧೋಖ ಮಾಡಿ ಜನರ ಪ್ರಾಣ ದೊಂದಿಗೆ ಆಟವಾಡಿದ್ದಾರೆ ಸರ್ಕಾರ ವರದಿ ಮೇಲೆ ಕ್ರಿಮಿನಲ್ ಕೇಸು ಧಾಖಲಿಸಿ ಜನರಿಗೆ ನ್ಯಾಯ ನೀಡಲಿ ಕೊಳ್ಳೆ ಹಣ ವಸೂಲಿ ಮಾಡಲಿ ಎಂದಿದ್ದಾರೆ.

ನಿಖಿಲ್ ಕುಮಾರಸ್ವಾಮಿ ಕಟ್ಟಿ ಹಾಕಲು ದಂಡೆತ್ತಿ ಬಂದ ಸಿಎಂ, ಡಿಸಿಎಂ

ಪ್ರತಿ ಹಳ್ಳಿಯಲ್ಲಿಯೂ 8ರಿಂದ 10 ಕೋಟಿ ಮೌಲ್ಯದ ಅಭಿವೃದ್ಧಿ ಕಾರ್ಯಗಳು ಆಗಿವೆ: ಹೆಚ್.ಡಿ.ಕುಮಾರಸ್ವಾಮಿ

• ಉದಯವಾಹಿನಿ. ಚನ್ನಪಟ್ಟಣ

ಕೇವಲ ಒಬ್ಬ ಯುವಕನನ್ನು ಕಟ್ಟಿ ಹಾಕಲು ಚನ್ನಪಟ್ಟಣ ದಲ್ಲಿ ಸರಕಾರದ ಸಚಿವರ ದಂಡು ದಂಡೆತ್ತಿ ಬಂದಿದೆ ಎಂದು ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರು ಆಕ್ರೋಶ ವ್ಯಕ್ತಪಡಿಸಿದರು.

ಪ್ರಚಾರದ ನಡುವೆ ಕಲ್ಲಾಪುರ ಗ್ರಾಮದಲ್ಲಿ ಭಾಷಣ ಮಾಡಿದ ಮಾಜಿ ಸಿಎಂ ಹಾಗೂ ಕೇಂದ್ರ ಸಚಿವ ಹೆಚ್ ಡಿ ಕುಮಾರಸ್ವಾಮಿ ಅವರು, 13ನೇ ತಾರೀಕು ನಡೆಯುವ ಉಪಚುನವಣೆಯಲ್ಲಿ ನಿಖಿಲ್ ಕುಮಾರಸ್ವಾಮಿ ಕಣದಲ್ಲಿ ಇದ್ದಾರೆ.

ಅವರನ್ನು ಕಟ್ಟಿ ಹಾಕಲು ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿ ಕೆ ಶಿವಕುಮಾರ್ ಕೂಡ ಬಂದಿದ್ದಾರೆ. ಹದಿನೈದಕ್ಕೂ ಹೆಚ್ಚು ಸಚಿವರು, ಮೂವತ್ತಕ್ಕೂ ಹೆಚ್ಚು ಶಾಸಕರು ದಂಡೆತ್ತಿ ಬಂದಿದ್ದಾರೆ. ಆದರೆ, ಜನರು ನಮ್ಮ ಜತೆ ಇದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಕ್ಷೇತ್ರಕ್ಕೆ ನಾನು ಮಾಡಿರುವ ಕೆಲಸಗಳ ಬಗ್ಗೆ ಕಾಂಗ್ರೇಸ್ ನಾಯಕರು ಪ್ರಶ್ನೆ ಮಾಡುತ್ತಾರೆ. ಅವರಿಗೆ ಕಣ್ಣಿಲ್ಲವೇ? ಪ್ರತಿ ಹಳ್ಳಿಯಲ್ಲಿಯೂ 8ರಿಂದ 10 ಕೋಟಿ ಮೌಲ್ಯದ ಅಭಿವೃದ್ಧಿ ಕಾರ್ಯಗಳು ಆಗಿವೆ. ಇವೆಲ್ಲವನ್ನೂ ಕಣ್ಣಿಗೆ ಕಾಣುತ್ತಿಲ್ಲವೇ? ಎಂದು ಹೆಚ್ ಡಿ ಕುಮಾರಸ್ವಾಮಿ ಅವರು ಆಕ್ರೋಶ ವ್ಯಕ್ತಪಡಿಸಿದರು. ಕಾಂಕ್ರೀಟ್ ರೋಡ್, ಹೈಮಾಸ್ಕ್ ಲೈಟ್ ಕೊಟ್ಟಿದ್ದೇನೆ ಸೇರಿದಂತೆ ಸಾಕಷ್ಟು ಮೂಲ ಸೌಕರ್ಯ ಕಲ್ಪಿಸಿದ್ದೇನೆ. ಬೆಂಗಳೂರಿನಲ್ಲೂ ಇಂತಹ ಉತ್ತಮ ರಸ್ತೆಗಳು ಇಲ್ಲ. ಕೇವಲ 8-10 ಹಳ್ಳಿಗೆ ಅಷ್ಟೇ ಕೆಲಸ ಆಗಿಲ್ಲ. ಇಡೀ ಕ್ಷೇತ್ರದಲ್ಲಿ ಅಭಿವೃದ್ಧಿ ಕೆಲಸ ಆಗಿದೆ. ಎಷ್ಟು ಕೊಳವೆ ಬಾವಿ ಕೊಟ್ಟಿದ್ದೇವೆ ಎನ್ನುವುದಕ್ಕೆ ಲೆಕ್ಕ ಇದೆ.

ಇವರ ಕಥೆ ಹೇಳುವ ಹಾಗೆಯೇ ಇಲ್ಲ. ದಲಿತ ಸಮುದಾಯದ ಅಭಿವೃದ್ಧಿಗೆ ಇಟ್ಟ ಹಣವನ್ನು ಗ್ಯಾರಂಟಿಗೆ ಹಾಕೊಂಡಿದ್ದಾರೆ.

ಹೊಸದಾಗಿ 1.05 ಲಕ್ಷ ಕೋಟಿ ಸರ್ಕಾರ ಸಾಲ ಮಾಡಿ ಜನರ ಮೇಲೆ ಹೊರೆ ಹಾಕುತ್ತಿದೆ.

ಇದನ್ನು ಸೇರಿಸಿದರೆ ರಾಜ್ಯದ ಒಟ್ಟು ಸಾಲ 7.5. ಲಕ್ಷ ಕೋಟಿ ಆಗುತ್ತದೆ. ಅದನ್ನು ತೀರಿಸೋಕೆ ಜನರ ಜೇಬಿಗೆ ಕೈ ಹಾಕುತ್ತಿದ್ದಾರೆ ಎಂದು ಕಿಡಿಕಾರಿದರು.

ಈಗ ಟಿಸಿ ಹಾಕಿಸೋಕೆ 2.5 ಲಕ್ಷ ಬೇಕು. ಜನರ ದುಡ್ಡು ಕಿತ್ಕೊಂಡು 2 ಸಾವಿರ ಕೊಟ್ಟರೆ ಏನು ಪ್ರಯೋಜನ ಮುಂದೆ ಈ ಸರ್ಕಾರ ದಿವಾಳಿ ಆಗೋದ್ರಲ್ಲಿ ಅನುಮಾನ ಇಲ್ಲ. ರಸ್ತೆ ಗುಂಡಿ ಮುಚ್ಚೋಕೆ ಕೂಡ ಇವರ ಬಳಿ ಹಣ ಇಲ್ಲ.

ಕ್ಷೇತ್ರದಲ್ಲಿ ಅಭಿವೃದ್ಧಿ ಕೆಲಸ

> ನನ್ನಿಂದ ನಿಮಗೆ ಅನ್ಯಾಯ ಆಗಿಲ್ಲ. ಒಬ್ಬ ರೈತನ ಜಮೀನಲ್ಲಿ ಇದ್ದ ಬಂಡೆ ಹೊಡೆದು ಅವನಿಗೆ ಅನ್ಯಾಯ ಮಾಡಿದರು ಅವರು ಎಂದು ಡಿಕೆ ಸಹೋದರರ ಮೇಲೆ ಹರಿಹಾಯ್ದ ಅವರು ನಾನು ಅವರ ಹಾಗೆ ಮಾಡಿಲ್ಲ. ನಿಖಿಲ್ ಕುಮಾರಸ್ವಾಮಿ ಒಂದು ಅವಕಾಶ ಕೊಡಿ. ಈ ಕೆಟ್ಟ ಕಾಂಗ್ರೇಸ್ ಆಡಳಿತಕ್ಕೆ ಅಂಕುಶ ಹಾಕಬಹುದು ಎಂದು ಹೆಚ್ ಡಿ ಕುಮಾರಸ್ವಾಮಿ ಅವರು ಮನವಿ ಮಾಡಿದರು.


ಉದಯವಾಹಿನಿ ಚಿತ್ರ

ಕೈಗಾರಿಕೆಗಳನ್ನು ತರುವ ಬಗ್ಗೆ ಪ್ರಾಮಾಣಿಕ ಪ್ರಯತ್ನ

ಚನ್ನಪಟ್ಟಣ - ರಾಮನಗರ ಅವಳಿ ನಗರ ಆಗುವ ದಿನಗಳು ದೂರವಿಲ್ಲ. ಬೃಹತ್ ಕಾರ್ಖಾನೆ ತಂದು ಸ್ಥಳೀಯ ಯುವ ಜನರಿಗೆ ಉದ್ಯೋಗ ಕೊಡುವ ಕೆಲಸ ಮಾಡುತ್ತೇನೆ. ಈ ಬಗ್ಗೆ ನಾನು ಹಲವರ ಜತೆ ಸಮಾಲೋಚನೆ ನಡೆಸಿದ್ದೇನೆ. ಮಂಡ್ಯ, ಚನ್ನಪಟ್ಟಣ, ರಾಮನಗರ ಭಾಗದಲ್ಲಿ ಕೈಗಾರಿಕೆಗಳನ್ನು ತರುವ ಬಗ್ಗೆ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ ಎಂದು ಭರವಸೆ ನೀಡಿದರು. ಆನೆ ಕಾಟಕ್ಕೆ ತಾಲ್ಲೂಕಿನ ಜನರನ್ನು ಪಾರು ಮಾಡುಲು ತಡೆಗೋಡೆ ನಿರ್ಮಿಸಲು ರೈಲ್ವೆ ಸಚಿವರ ಮಾತನಾಡಿದ್ದೇನೆ. ಅವರು ಅತ್ಯಂತ ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ. ನನ್ನದು ಜವಾಬ್ದಾರಿ ಇದೆ ಎಂದು ಹೇಳಿದರು.

ಗೃಹ ಸಚಿವರ ಸ್ವಕ್ಷೇತ್ರದಲ್ಲೇ ಮಲ ಹೊತ್ತ 10 ವರ್ಷದ ಬಾಲಕ

• ಉದಯವಾಹಿನಿ ಕೊರಟಗೆರೆ

ಪಟ್ಟಣದ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದಲ್ಲಿನ ಶೌಚದ ಗುಂಡಿಯಿಂದ ತುಂಬಿ ಹರಿಯುತ್ತಿದ್ದ ಮಲವನ್ನು ಬಾಲಕನಿಂದ ಸ್ವಚ್ಛ ಗೊಳಿಸಿರುವ ಅಮಾನವೀಯ ಘಟನೆ ಗೃಹ ಸಚಿವ ಡಾ. ಜಿ.ಪರಮೇಶ್ವರ್ ಸ್ವಕ್ಷೇತ್ರ ಕೊರಟಗೆರೆಯಲ್ಲಿ ಬೆಳಕಿಗೆ ಬಂದಿದೆ. ನಿಲ್ದಾಣದ ಒಳಗಿರುವ ಸಾರ್ವಜನಿಕ ಶೌಚಾಲಯದ ಪಿಟ್ ತುಂಬಿ ಹರಿಯುತ್ತಿದ್ದು ತುಮಕೂರು ಮೂಲದ 10 ವರ್ಷದ ಬಾಲ ಕಾರ್ಮಿಕ ಹಾಗೂ ಓರ್ವ ವ್ಯಕ್ತಿ ಮಲ ವನ್ನು ಸ್ವಚ್ಛಗೊಳಿಸುತ್ತಿದ್ದ ವಿಡಿಯೋ ವೈರಲ್ ಆಗಿದೆ.

ಶೌಚಾಲಯದ ನಿರ್ವಹಣೆ ಮಾಡುತ್ತಿದ್ದ ಗುತ್ತಿಗೆದಾರ ಕುಮಾರಣ್ಣ ಎಂಬವರು ನಮಗೆ ಈ ಕೆಲಸ ಮಾಡುವಂತೆ ಹೇಳಿದ್ದಾರೆ ಎಂದು ಬಾಲಕ ಹೇಳಿದ್ದಾನೆ.

ಘಟನೆ ಬಗ್ಗೆ ಪ್ರತಿಕ್ರಿಯಿಸಿರುವ ತಾಲ್ಲೂಕು ಸಮಾಜ ಕಲ್ಯಾಣ ಇಲಾಖೆ ಅಧಿಕಾರಿ ಜಿ.ಯಮುನಾ, ಪಟ್ಟಣ ಪಂಚಾಯಿತಿ ಸಿಬ್ಬಂದಿಯೊಂದಿಗೆ ತೆರಳಿ ಸ್ಥಳ ಪರಿಶೀಲಿಸಿದ್ದೇವೆ. ಕೆಎಸ್‌ಆರ್‌ಟಿಸಿಗೆ ನೋಟಿಸ್ ಕೊಡಲಾಗಿದ್ದು, ಏಜೆನ್ಸಿಯವರು ಬಾಲಕ ಯಾರೆಂದೇ ಗೊತ್ತಿಲ್ಲ ಎಂದಿದ್ದಾರೆ. ಈ ಕುರಿತು ಸಿಸಿ ಕ್ಯಾಮೆರಾ ಪರಿಶೀಲಿಸಿ ತಹಶೀಲ್ದಾರ್‌ರ ಜತೆ ಚರ್ಚಿಸಿ ಮುಂದಿನ ಕ್ರಮ ಕೈಗೊಳ್ಳುತ್ತೇವೆ ಎಂದು ತಿಳಿಸಿದ್ದಾರೆ.

ಉದಯವಾಹಿನಿ ಚಿತ್ರ

> ಇಂತಹ ಘಟನೆ ರಾಜ್ಯದ ಯಾವುದೇ ಗ್ರಾಮಗಳಲ್ಲೂ ಸಂಭವಿಸಬಾರದು. ಈ ಘಟನೆ ನಾಗರಿಕ ಸಮಾಜದ ತಲೆ ತಗ್ಗಿಸುವಂತದ್ದು, ಸ್ವಾತಂತ್ರ್ಯ ಬಂದು 75 ವರ್ಷ ಕಳೆದರೂ ಮಲ ಹೊರುವ ಪದ್ಧತಿ ಜಾತಿ ಪದ್ಧತಿ ಜೀವಂತವಾಗಿ ರುವುದಕ್ಕೆ ಘಟನೆಯೇ ಸಾಕ್ಷಿ. ನಾನು ಈ ಘಟನೆಯ ತೀವ್ರವಾಗಿ ಖಂಡಿಸುತ್ತೇನೆ ಹಾಗೂ ಸಮಾಜ ಕಲ್ಯಾಣ ಇಲಾಖೆಯು ಇಂತಹ ಘಟನೆಗಳಿಗೆ ಅಂತ್ಯ ಕಾಣಿಸಲು ಇನ್ನೂ ಕಠಿನ ಕಾನೂನು ತರುವುದು ಅನಿವಾರ್ಯವಾಗಿದೆ -ನಾಗರಾಜು, ಜೆಟ್ಟಿ
ಸಾಮಾಜಿಕ ಹೋರಾಟಗಾರ, ಅಗ್ರಹಾರ

ಸಿದ್ದರಾಮಯ್ಯ ಸರಕಾರ ಕಿತ್ತೊಗೆಯುವವರೆಗೂ ಹೋರಾಟ ನಿಲ್ಲಲ್ಲ

• ಉದಯವಾಹಿನಿ ಮಂಡ್ಯ

ಹೋರಾಟ ದೇವೇಗೌಡರ ಹುಟ್ಟುಗುಣ, ನನ್ನ ದೇಹದಲ್ಲಿ ಕೊನೇ ಉಸಿರಿರುವವರೆಗೂ ಹೋರಾಟ ಮಾಡುತ್ತೇನೆ. ಇಂದು ರಾಜ್ಯದಲ್ಲಿ ಇರುವಂತಹ ಕೆಟ್ಟ ಸರಕಾರವನ್ನು ನನ್ನ 62 ವರ್ಷದ ರಾಜಕೀಯ ಇತಿಹಾಸದಲ್ಲಿ ಎಂದೂ ಕಂಡಿಲ್ಲ ಎಂದು ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ ರಾಜ್ಯ ಸರಕಾರದ ವಿರುದ್ಧ ವಾಗ್ದಾಳಿ ನಡೆಸಿದರು.

ಪಾಂಡವಪುರ ತಾಲ್ಲೂಕಿನ ಚಿನಕುರಳಿ ಗ್ರಾಮದ ಶ್ರೀರಾಮೇಶ್ವರ ದೇವಸ್ಥಾನಕ್ಕೆ ಭೇಟಿ ಕೊಟ್ಟು ಪೂಜೆ ಸಲ್ಲಿಸಿದ ಸುದ್ದಿಗಾರರೊಂದಿಗೆ ಮಾತನಾಡಿ, ದೇವೇಗೌಡರಿಗೆ 92 ವರ್ಷ ವಯಸ್ಸಾಗಿದೆ.

ಮೊಮ್ಮಗನನ್ನು ಗೆಲ್ಲಿಸಿ ಅನಂತರ ಮನೆ ಸೇರಿಕೋಳ್ಳುತ್ತಾರೆ ಎಂದುಕೊಂಡಿದ್ದಾರೆ. ನಾನು ಮನೆ ಸೇರುವ ಜಯಮಾನದವನಲ್ಲ, ಕೊನೆಯವರೆಗೂ ಹೋರಾಟ ಮಾಡುತ್ತೇನೆ. ಈ ಸರಕಾರವನ್ನು ಕಿತ್ತೊಗೆಯುವರೆಗೂ ಹೋರಾಟ ನಿಲ್ಲುವುದಿಲ್ಲ ಎಂದು ಗುಡುಗಿದರು.

ಎಚ್‌ಡಿಕೆ ವರ್ಸಸ್ ಡಿಕೆ ಎಂದು ಹೋಲಿಕೆ ಮಾಡಬೇಡಿ. ಎಚ್.ಡಿ. ಕುಮಾರಸ್ವಾಮಿ ದೇವೇಗೌಡರ ಮಗ ಎಂದಲ್ಲ, ದೇಶದಲ್ಲಿ ಜೆಡಿಎಸ್ ಕೇವಲ 2 ಸ್ಥಾನಗಳಿದ್ದರೂ ದೇಶದ ಎರಡು ಪ್ರಮುಖ ಸ್ಥಾನದ ಹುದ್ದೆಯ ಜವಾಬ್ದಾರಿ ನೀಡಿದ್ದಾರೆ.

ಇದು ಕುಮಾರಸ್ವಾಮಿ ಬೆಳೆಸಿಕೊಂಡಿರುವ ವ್ಯಕ್ತಿತ್ವ ಎಂದು ಎಚ್.ಡಿ. ದೇವೇಗೌಡ ಹೇಳಿದರು. ಪ್ರಧಾನಿ ಮೋದಿ ಅವರಿಗೆ ಸರಿಸಾಟಿಯಾಗುವ ನಾಯಕ ಇಂಡಿಯಾ ಒಕ್ಕೂಟದಲ್ಲಿ ಒಬ್ಬ ನಾಯಕನಿಲ್ಲ. ದೇಶದ ಪ್ರಗತಿಗಾಗಿ ಎನ್‌ಡಿಎ ಜತೆಗೆ ಮೈತ್ರಿ ಮಾಡಿಕೊಂಡಿದ್ದೇವೆ ಎಂದರು.

ಪಾಂಡವಪುರ: ದೇಶಕ್ಕೆ ಅನ್ನ ನೀಡುವ ರೈತನಿಗೆ ನೋವಾದರೆ ಹೃದಯ ಮರುಗಿ ಕಣ್ಣೀರು ಬರುತ್ತದೆ.

ನಮ್ಮ ವಂಶ ಬಡತನವನ್ನು ಅನುಭವಿಸಿ ಮೇಲೆ ಬಂದಿದ್ದು, ನಮಗೆ ಬಡವರ ಕಷ್ಟ, ಸುಖದ ಬಗ್ಗೆ ಅರಿವಿದೆ. ಕಣ್ಣೀರು ಹಾಕುವುದು ನಮ್ಮ ತಂದೆಯಿಂದಲೇ ಬಂದಿರುವ ಬಳುವಳಿ ಎಂದು ದೇವೇಗೌಡ ಹೇಳಿದರು.

ಕೊನೇ ಉಸಿರಿರುವವರೆಗೂ ಹೋರಾಟ: ಎಚ್.ಡಿ. ದೇವೇಗೌಡ

ಉದಯವಾಹಿನಿ ಚಿತ್ರ

> ಡಿ.ಕೆ. ಶಿವಕುಮಾರ್ ಎಂದಾದರೂ ಕಣ್ಣೀರು ಹಾಕಿದ್ದಾರಾ ರೌಡಿ ಕೊತ್ವಾಲ್ ರಾಮಚಂದ್ರನ ಹತ್ತಿರ 100 ರೂ. ಗೆ ಕೆಲಸ ಮಾಡುತ್ತಿದ್ದ ಶಿವಕುಮಾರ್ ಇಂದು ನೆಹರು, ಇಂದಿರಾ ಗಾಂಧಿ ಆಳ್ವಿಕೆ ಮಾಡಿದ ಪಕ್ಷದ ಅಧ್ಯಕ್ಷನಾಗಿದ್ದಾನೆಂದು ಕುಟುಕಿದರು.

ಮರೆಯಾದ ಗರಡಿ ಮನೆ: ಚಿಂತಾಜನಕ ಸ್ಥಿತಿಯಲ್ಲಿ ಕುಸ್ತಿ ಅಖಾಡ

• ಉದಯವಾಹಿನಿ ತುಮಕೂರು

ಒಲಂಪಿಕ್ಸ್‌ನಲ್ಲಿ ಭಾರತದ ಕುಸ್ತಿಪಟುಗಳು ಪದಕಗಳ ಬೇಟೆಯಾಡುತ್ತಿದ್ದರೆ, ಜಿಲ್ಲೆಯಲ್ಲಿ ಮಾತ್ರ ಕುಸ್ತಿ 'ಚಿಂತಾಜನಕ' ಸ್ಥಿತಿಗೆ ತಲುಪಿದೆ. 'ತುಮಕೂರು ದಸರಾ' ಹೊರೆತುಪಡಿಸಿದರೆ ಕಳೆದ ಹಲವು ವರ್ಷಗಳಿಂದ ಜಿಲ್ಲೆಯಲ್ಲಿ ಒಂದೇ ಒಂದು ಕುಸ್ತಿ ಪಂದ್ಯಾವಳಿ ನಡೆದಿಲ್ಲ.

ಇದೇ ಮೊದಲ ಬಾರಿಗೆ ಜಿಲ್ಲಾ ಆಡಳಿತದಿಂದ ಅದ್ದೂರಿಯಾಗಿ 'ತುಮಕೂರು ದಸರಾ' ನಡೆಯಿತು. ಎಲ್ಲಾ ಕ್ರೀಡೆಗಳಂತೆ ಕುಸ್ತಿಗೂ ಅವಕಾಶ ನೀಡಲಾಯಿತು. ಇದನ್ನು ಬಿಟ್ಟರೆ ಬೇರೆಲ್ಲೂ ಪ್ರತ್ಯೇಕವಾಗಿ ಪಂದ್ಯಾವಳಿಗಳು ನಡೆದಿಲ್ಲ. ಕನಿಷ್ಠ ಆರು ತಿಂಗಳಿಗೆ ಒಮ್ಮೆಯಾದರೂ ಪಂದ್ಯಾವಳಿ ಏರ್ಪಡಿಸಿದರೆ ಕುಸ್ತಿಪಟುಗಳಿಗೆ ಪ್ರೋತ್ಸಾಹ ನೀಡಿದಂತಾಗುತ್ತದೆ.

ಅಳಿವಿನ ಅಂಚಿನಲ್ಲಿ ಸಾಗುತ್ತಿರುವ ಕುಸ್ತಿ ಉಳಿವಿಗೆ ಯಾರೊಬ್ಬರೂ ಇಚ್ಛಾಶಕ್ತಿ ತೋರುತ್ತಿಲ್ಲ ಎಂಬುವುದು ಕುಸ್ತಿ ತರಬೇತಿದಾರರ ಅಭಿಪ್ರಾಯ.

ಉದಯವಾಹಿನಿ ಚಿತ್ರ

ವಿನೇಶ್ ಪೋಗಾಟ್, ಸಾಕ್ಷಿ ಮಲಿಕ್ ಮುಂತಾದವರು ಒಲಂಪಿಕ್ಸ್‌ನಲ್ಲಿ ಪದಕ ಪಡೆದ ನಂತರ ಯುವತಿಯರು ಕುಸ್ತಿಯ ಕಡೆಗೆ ಒಲವು ತೋರುತ್ತಿದ್ದಾರೆ. ಜಿಲ್ಲೆಯಲ್ಲಿ ಪ್ರಸ್ತುತ 14 ಮಂದಿ ಯುವತಿಯರು ಕುಸ್ತಿ ಅಭ್ಯಾಸದಲ್ಲಿ ತೊಡಗಿಸಿಕೊಂಡಿದ್ದಾರೆ. ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ನಡೆಯುವ ಪಂದ್ಯಾವಳಿ ಗಳಲ್ಲಿ ಭಾಗವಹಿಸಿ ಗಮನ ಸೆಳೆಯುತ್ತಿದ್ದಾರೆ.

ಜಿಲ್ಲಾ ಕ್ರೀಡಾಂಗಣದಲ್ಲಿ ಅಭ್ಯಾಸಕ್ಕೆ ಅನುವು ಮಾಡಿಕೊಡಲಾಗಿದೆ. ಅವರ ಸಾಮರ್ಥ್ಯ ಪರಿಶೀಲನೆಗೆ ವೇದಿಕೆ ಸಿಗುತ್ತಿಲ್ಲ.

> ಕುಸ್ತಿ ಇತರೆ ಕ್ರೀಡೆಗಳಂತಲ್ಲ. ಶಕ್ತಿ, ಯುಕ್ತಿ, ದಮ್ಮು, ತಾಕತ್ತು ಎಲ್ಲವನ್ನು ಹೊಂದಿರುವವರು ನಿರಂತರವಾಗಿ ಅಖಾಡದಲ್ಲಿ ಉಳಿಯಲು ಸಾಧ್ಯ. ಒಮ್ಮೆ ಅಖಾಡಕ್ಕೆ ಇಳಿದರೆ ಕನಿಷ್ಠ 2 ಗಂಟೆಯ ಕಾಲ ಎದುರಾಳಿಯನ್ನು ಬಗ್ಗಿ ಬಡಿಯುವ ಧೈರ್ಯ, ಸ್ಥೈರ್ಯ ಇರಬೇಕು. ಇಂದಿನ ಯುವಕರಲ್ಲಿ ಇಂತಹ ಸಾಮರ್ಥ್ಯ ಕಡಿಮೆ ಇದ್ದರೂ ಬೆರಳೆಣಿಕೆಯಷ್ಟು ಜನ ಕುಸ್ತಿಯಲ್ಲಿ ಉಳಿಯುತ್ತಿದ್ದಾರೆ. ತುಂಬಾ ಜನ ಅಭ್ಯಾಸದ ನಂತರ ಪೌಷ್ಟಿಕ ಆಹಾರ ಸೇವನೆ ಸಾಧ್ಯವಾಗದೆ ಕುಸ್ತಿಯ ಕಡೆ ಬರುತ್ತಿಲ್ಲ. ಅಂತವರಿಗೆ ಉತ್ತೇಜನ ನೀಡಲು ಕುಸ್ತಿ ಬಗ್ಗೆ ಆಸಕ್ತಿ ಇರುವವರು ಮುಂದೆ ಬರಬೇಕಿದೆ
-ಸಾಲುಮಾನ್ ವಿಕ್ಟರ್,
ಕುಸ್ತಿ ತರಬೇತುದಾರ

ಬೆಳಗದ ಬೀದಿದೀಪ: ಸಾರ್ವಜನಿಕರಿಗೆ ಸಮಸ್ಯೆ

• ಉದಯವಾಹಿನಿ ಕೊಳ್ಳೇಗಾಲ

ಸ್ಥಳೀಯ ಆಡಳಿತ ಬೀದಿದೀಪಗಳ ನಿರ್ವಹಣೆ ಮಾಡದ ಪರಿಣಾಮ ನಗರ ಕತ್ತಲಲ್ಲಿ ಮುಳುಗಿದೆ. ನಗರದ ಅಲ್ಲಲ್ಲಿ ಬೀದಿದೀಪಗಳು ಬೆಳಗದೆ ಪ್ರಮುಖ ರಸ್ತೆ ಹಾಗೂ ಹೆದ್ದಾರಿಗಳಲ್ಲಿ ಗಾಢ ಕತ್ತಲು ಕವಿದಿದೆ. ರಾತ್ರಿಯ ಹೊತ್ತು ಬೀದಿದೀಪಗಳು ಉರಿಯದೆ ಸಾರ್ವಜನಿಕರ ಸಂಚಾರ ದುಸ್ತರವಾಗಿದೆ.

ಮಹಿಳೆಯರು, ಮಕ್ಕಳು ಕತ್ತಲಲ್ಲಿ ಭೀತಿಯಲ್ಲಿ ಓಡಾಡಬೇಕಾಗಿದೆ. ರಸ್ತೆಯ ಮೇಲೆ ಅಲ್ಲಲ್ಲಿ ಬಿದ್ದಿರುವ ಹೊಂಡಗುಂಡಿಗಳು ಕಾಣದೆ ನಿತ್ಯ ವಾಹನ ಸವಾರರು, ಪಾದಚಾರಿಗಳು ಬಿದ್ದು ಗಾಯ ಮಾಡಿಕೊಳ್ಳುತ್ತಿದ್ದಾರೆ.

ನಗರದ ಆಯಕಟ್ಟಿನ ಜಾಗಗಳಲ್ಲಿಯೇ ಬೀದಿದೀಪಗಳು ಕೆಟ್ಟುನಿಂತಿರುವುದು ನಗರಸಭೆಯ ಆಡಳಿತ ವ್ಯವಸ್ಥೆಯ ವೈಫಲ್ಯಕ್ಕೆ ಹಿಡಿದ ಕೈಗನ್ನಡಿ ಎಂದು ಸಾರ್ವಜನಿಕರು ಟೀಕಿಸುತ್ತಿದ್ದಾರೆ. ಹಾಳಾದ ಬೀದಿದೀಪಗಳನ್ನು ದುರಸ್ತಿ ಪಡಿಸುವಂತೆ ಸಾರ್ವಜನಿಕರು ಹಾಗೂ ಬಡಾವಣೆಯ ನಿವಾಸಿಗಳು ನಗರಸಭೆ ಅಧಿಕಾರಿಗಳಿಗೆ, ವಾರ್ಡ್ ಕೌನ್ಸಿಲರ್‌ಗಳಿಗೆ ಮನವಿ ಮಾಡಿದರೂ ಪ್ರಯೋಜನವಾಗಿಲ್ಲ. ನಗರಸಭೆಗೆ 'ಗ್ರಹಣ' ಹಿಡಿದಿದೆ ಎಂದು ದೂರುತ್ತಾರೆ ನಾಗರಿಕ ತರುಣ್.

ಉದಯವಾಹಿನಿ ಚಿತ್ರ

ಎಲ್ಲೆಲ್ಲಿ ಕತ್ತಲು: ನಗರದ ನ್ಯಾಯಾಲಯದ ರಸ್ತೆ, ಜೆಎಸ್‌ಎಸ್ ಕಾಲೇಜು ರಸ್ತೆ, ಆರ್‌ಸಿಎಂ ಶಾಲೆ ಸಮೀಪ, ಶಿವಕುಮಾರ ಸ್ವಾಮೀಜಿ ಬಡಾವಣೆ, ಮಹದೇಶ್ವರ ಕಾಲೇಜು ಸಮೀಪ, ಜಿಪಿ ಮಲ್ಲಪ್ಪ ಪುರಂ, ಆರ್‌ಎಮ್ ಕಲ್ಯಾಣ ಮಂಟಪ ರಸ್ತೆ, ಹೀಗೆ ನಗರದ ಪ್ರಮುಖ ರಸ್ತೆಗಳಲ್ಲಿ ಬೀದಿದೀಪಗಳ ಸಮಸ್ಯೆ ಇದೆ. ಈ ರಸ್ತೆಗಳಲ್ಲಿ ಸಂಚರಿಸುವರು ನಿತ್ಯ ಸಮಸ್ಯೆ ಅನುಭವಿಸುತ್ತಿದ್ದಾರೆ.

ನಾನು ಎಂದೂ ಮಂಡ್ಯ ಕ್ಷೇತ್ರ ಬಿಡುವುದಿಲ್ಲ: ಸುಮಲತಾ

• ಉದಯವಾಹಿನಿ, ಮಂಡ್ಯ

ನಾನು ಬಿಜೆಪಿಯಲ್ಲಿ ಸೈಡ್‌ಲೈನ್ ಆಗಿಲ್ಲ. ಐದು ವರ್ಷಗಳಲ್ಲಿ ಸಾಕಷ್ಟು ಹಳ್ಳಿಗಳಿಗೆ ಹೋಗಿದ್ದೆ. ಆದ್ದರಿಂದ ಸ್ವಲ್ಪ ವಿಶ್ರಾಂತಿ ಪಡೆಯುತ್ತಿದ್ದೇನೆ. ನರೇಂದ್ರ ಮೋದಿ ಅವರ ಮಾತಿಗೆ ಬೆಲೆಕೊಟ್ಟು ಕ್ಷೇತ್ರ ತ್ಯಾಗ ಮಾಡಿದೆ.

ನಾನೆಂದೂ ಮಂಡ್ಯ ಕ್ಷೇತ್ರವನ್ನು ಬಿಡುವುದಿಲ್ಲ, ಜನವರಿಯಿಂದ ಸಕ್ರಿಯವಾಗಿ ಮಂಡ್ಯದಲ್ಲಿ ಓಡಾಡುತ್ತೇನೆ ಎಂದು ಮಾಜಿ ಸಂಸದೆ ಸುಮಲತಾ ಹೇಳಿದರು. ಮಂಡ್ಯದ ಚಾಮುಂಡೇಶ್ವರಿ ನಗರದಲ್ಲಿರುವ ತಮ್ಮ ನಿವಾಸದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ, ಬಿಜೆಪಿಯವರು ನನ್ನನ್ನು ಚುನಾವಣೆ ಪ್ರಚಾರಕ್ಕೆ ಕರೆಯದೇ ಇರುವ ಬಗ್ಗೆ ಅಷ್ಟಾಗಿ ನಾನು ಗಮನ ಕೊಟ್ಟಿಲ್ಲ.

ನನ್ನ ಅಗತ್ಯ ಎಲ್ಲಿದೆ ಅನಿಸುತ್ತದೆಯೋ ಅಲ್ಲಿಗೆ ಕರೆಯುತ್ತಾರೆ ಎಂದು ಸ್ಪಷ್ಟಪಡಿಸಿದರು.

ಕಳೆದ ಚುನಾವಣೆಯಲ್ಲಿ ಮಂಡ್ಯದಲ್ಲಿ ಯಾರೂ ಇಂತಹ ಡೇಟ್‌ನಲ್ಲಿ ಪ್ರಚಾರಕ್ಕೆ ಬರಬೇಕು ಅಂತಾ ಹೇಳಲಿಲ್ಲ. ನಾನು ಇದನ್ನು ದೊಡ್ಡ ವಿಷಯ ಅಂದುಕೊಂಡಿಲ್ಲ. ಚನ್ನಪಟ್ಟಣ ಕ್ಷೇತ್ರದಲ್ಲಿ ಬಿಜೆಪಿ ಅಭ್ಯರ್ಥಿ ಇದ್ದಿದ್ದರೆ ನನ್ನನ್ನ ಕರೆಯುತ್ತಿದ್ದರು ಅನಿಸುತ್ತಿದೆ. ಆದರೆ ಮೈತ್ರಿ ಅಭ್ಯರ್ಥಿ ಇರುವುದರಿಂದ ಮಂಡ್ಯ ಲೋಕಸಭಾ ಚುನಾವಣೆ ನೋಡಿ ಕರೆದಿಲ್ಲ. ನಮಗೆ ಜೆಡಿಎಸ್ ನವರ ಮೇಲೆ ದ್ವೇಷವಿಲ್ಲ. ಹಳೆಯ ಕಥೆ ಮುಗಿದಿದೆ. ಈಗಾಗಲೇ ಹೈಕಮಾಂಡ್‌ಗೆ ಈ ಬಗ್ಗೆ ಹೇಳಿದ್ದೇನೆ ಎಂದರು.

ಅಂತರಾಳದಿಂದ... EDITORIAL

ÃñÃ ÖÓÃ®È ¹h² ¿á pãÙá&ÓáÙá ÖãàÃYo

ವಕ್ಫ್ ಬೋರ್ಡ್ ರೈತರ ಆಸ್ತಿಯನ್ನು ಕಬಳಿಸುತ್ತಿದೆ' ಎನ್ನುವ ಹೊಸತೊಂದು ಗುಮ್ಮನನ್ನು ಸೃಷ್ಟಿಸಿ ಆ ಗುಮ್ಮನ ಮೂಲಕ ರೈತರ ಹೊಲದಲ್ಲಿ ಕೇಸರಿ ಬೆಳೆಯನ್ನು ಕೊಯ್ಯಲು ಬಿಜೆಪಿ ರಾಜ್ಯದಲ್ಲಿ ಮುಂದಾಗಿದೆ. ತಾನು ಹಬ್ಬಿಸುತ್ತಿರುವ ವದಂತಿಗಳಿಗೆ ಸರಿಯಾದ ಸಾಕ್ಷ್ಯವನ್ನು ಒದಗಿಸುವಲ್ಲಿ ಮಾತ್ರ ಬಿಜೆಪಿ ನಾಯಕರು ವಿಫಲರಾಗುತ್ತಿದ್ದಾರೆ. ಬದಲಾಗಿ, ಕಾಂಗ್ರೇಸ್ ಮೇಲೆ ಮಾಡಿರುವ ಆರೋಪಗಳು ನಿಧಾನಕ್ಕೆ ಬಿಜೆಪಿಯ ಕೊರಳಿಗೂ ಸುತ್ತಿಕೊಳ್ಳಲಾರಂಭಿಸಿವೆ. ಇದರಿಂದ ಹತಾಶೆಗೊಂಡಿರುವ ಬಿಜೆಪಿ ನಾಯಕರು, ಪ್ರಕರಣವನ್ನು ಇನ್ನಷ್ಟು ಉದ್ವಿಗ್ನಗೊಳಿಸುವ ಉದ್ದೇಶದಿಂದ, ರೈತರ ಕೊರಳಿಗೆ ನೇಣು ಬಿಗಿಯಲು ಮುಂದಾಗಿದ್ದಾರೆ. ಸುಳ್ಳು ಹೇಳಿಕೆಗಳಿಗೆ ಈಗಾಗಲೇ ಕುಖ್ಯಾತರಾಗಿರುವ, ಕೊರೋನ ವಾರ್ ರೂಂನ ಅಕ್ರಮಗಳಲ್ಲಿ ಗುರುತಿಸಿಕೊಂಡಿದ್ದ ತೇಜಸ್ವಿ ಸೂರ್ಯ ವಕ್ಫ್ ಬೋರ್ಡ್ ಆಸ್ತಿ ಕಿರಿಕಿರಿಗೆ ಬೇಸತ್ತು ಹಾವೇರಿ ಜಿಲ್ಲೆಯ ಹರನಗಿ ಗ್ರಾಮದ ರುದ್ರಪ್ಪ ಎಂಬ ರೈತ ಆತ್ಮಹತ್ಯೆ ಮಾಡಿಕೊಂಡಿದ್ದರು' ಎಂದು ಸಾಮಾಜಿಕ ಜಾಲತಾಣದಲ್ಲಿ ವದಂತಿ ಹಬ್ಬಿಸಿದ್ದಾರೆ. ಇದೀಗ ಕಮೆಂಟ್ ಬಾಕ್ಸ್‌ನಲ್ಲಿ ಬಂದ ಮಾಹಿತಿಯ ಆಧಾರದಲ್ಲಿ ಟ್ವಿಟ್ ಮಾಡಿದ್ದೆ ಎಂದು ಸಂಸದ ನುಣುಚಿಕೊಳ್ಳಲು ಮುಂದಾಗಿದ್ದಾರೆ. ಬಿಜೆಪಿ ನಾಯಕರು ಕಳೆದ ಒಂದು ತಿಂಗಳಿಂದ ರಾಜ್ಯಾದ್ಯಂತ ವಕ್ಸ್ ಬೋರ್ಡ್ ವಿರುದ್ಧ ಪ್ರತಿಭಟನೆಗಳನ್ನು ಆಂದೋಲನ ರೂಪದಲ್ಲಿ ಹಮ್ಮಿಕೊಂಡಿದ್ದಾರೆ. ರೈತರನ್ನು ವಕ್ಫ್ ನ ವಿರುದ್ಧ ಮತ್ತು ಸರಕಾರದ ವಿರುದ್ಧ ಎತ್ತಿಕಟ್ಟುತ್ತಿದ್ದಾರೆ. ಆದರೆ ಈವರೆಗೆ ಇದಕ್ಕೆ ಸಂಬಂಧಿಸಿ ಅಧಿಕೃತವಾದ ಯಾವುದೇ ದಾಖಲೆಗಳನ್ನು ಬಹಿರಂಗಪಡಿಸಲು ಅವರಿಗೆ ಸಾಧ್ಯವಾಗಿಲ್ಲ. ಇಷ್ಟೇ ಅಲ್ಲದೆ, ಕಮೆಂಟ್ ಬಾಕ್ಸ್‌ನಲ್ಲಿ ಬಂದ ಯಾವುದೋ ಮಾಹಿತಿಯನ್ನು ಯಾವುದೇ ವಿಚಾರಣೆ ನಡೆಸದೆಯೇ ಬಿಜೆಪಿಯ ಪ್ರತಿಭಟನೆಗಳಿಗೆ ಸಮರ್ಥನೆಯಾಗಿ ಟ್ವಿಟ್ ಮಾಡಿದ್ದಾರೆ. ಈ ರೀತಿ ಸಾಮಾಜಿಕ ಜಾಲತಾಣದಲ್ಲಿ ಬಂದ ಅನಾಮಿಕ ಕಮೆಂಟ್‌ಗಳ ಆಧಾರದಲ್ಲಿ ಪ್ರತಿಭಟನೆ ನಡೆಸುವುದು, ಆರೋಪಗಳನ್ನು ಹೊರಿಸುವುದು ಎಷ್ಟು ಸರಿ ಬಿಜೆಪಿ ನಡೆಸುತ್ತಿರುವ ಪ್ರತಿಭಟನೆಗಳ ಬೊಳ್ಳುತನವನ್ನು ಸಂಸದ ಸೂರ್ಯ ಅವರ ಟ್ವಿಟ್ ಬಹಿರಂಗ ಪಡಿಸಿದೆ. ತಮ್ಮ ಅಧಿಕಾರಾವಧಿಯಲ್ಲಿ ತಳೆದ ರೈತ ವಿರೋಧಿ ನಿಲುವುಗಳನ್ನು ಚರ್ಚೆಗೆ ತರಲು ಈ ಮೂಲಕ ಬಿಜೆಪಿಯೇ ವೇದಿಕೆಯನ್ನು ಹಾಕಿಕೊಟ್ಟಂತಾಗಿದೆ. ಕೇಂದ್ರ ಸರಕಾರದ ರೈತ ವಿರೋಧಿ ನಿಲುಗಳನ್ನು ವಿರೋಧಿಸಿ ದೇಶಾದ್ಯಂತ ರೈತರು ಮಹಾ ಆಂದೋಲನವನ್ನು ನಡೆಸುತ್ತಿದ್ದಾಗ ಮೋದಿಯವರ ಕೃಷಿ ನೀತಿಗಳನ್ನು ಬೆಂಬಲಿಸಿದವರು ಬಿಜೆಪಿ ಸಂಸದರು. ಅನಾವೃಷ್ಟಿ, ಅತಿವೃಷ್ಟಿಯಿಂದ ರಾಜ್ಯದ ರೈತರು ತಮ್ಮ ಬೆಳೆ ನಷ್ಟದಿಂದ ಕಂಗಾಲಾಗಿದ್ದಾಗ ಕೇಂದ್ರದಿಂದ ಬರಬೇಕಾದ ಪರಿಹಾರವನ್ನು ದೊಡ್ಡ ಧ್ವನಿಯಲ್ಲಿ ಕೇಳುವುದಕ್ಕೆ ಹಿಂದೇಟು ಹಾಕಿದವರು ಈ ಬಿಜೆಪಿ ನಾಯಕರು. ಈ ಹಿಂದೆ ಯಡಿಯೂರಪ್ಪ ಮುಖ್ಯಮಂತ್ರಿಯಾಗಿದ್ದ ಅವಧಿಯಲ್ಲಿ ಮಳೆ ಪರಿಹಾರ ನಿಧಿಗಾಗಿ ದಿಲ್ಲಿಗೆ ಅಲೆದಾಡುತ್ತಿದ್ದಾಗ ಪರಿಹಾರ ನೀಡುವ ಅಗತ್ಯವೇ ಇಲ್ಲ ಎಂದು ಹೇಳಿಕೆ ನೀಡಿ ಸ್ವತಃ ರಾಜ್ಯದ ಬಿಜೆಪಿ ಮುಖಂಡರಿಂದ ಛೀಮಾರಿ ಹಾಕಿಸಿಕೊಂಡವರು ಇದೇ ಸಂಸದ ತೇಜಸ್ವಿ ಸೂರ್ಯ. ಇಂತಹ ನಾಯಕರು ರೈತರ ಪರವಾಗಿ ಮಾತನಾಡುವುದೆಂದರೆ, ತೋಳ ಕುರಿಗಳ ಹಕ್ಕುಗಳಿಗಾಗಿ ಬೀದಿಗಿಳಿದ ಕತೆಯಂತಾಗುತ್ತದೆ.

ಹಾಗೆಂದು ವಕ್ಫ್ ಕಾರಣದಿಂದ ರೈತರು ಸಮಸ್ಯೆಗಳಿಗೆ ಸಿಕ್ಕಿ ಹಾಕಿಕೊಂಡಿಲ್ಲ ಎಂದಲ್ಲ. ವಕ್ಫ್‌ನ ವ್ಯಾಪ್ತಿಯಲ್ಲಿರುವ ಬರುವ ರೈತರ ಭೂಮಿಗಳು ಬಹಳಷ್ಟಿವೆ. ಆದರೆ ಅದಕ್ಕಾಗಿ ವಕ್ಸ್ ಬೋರ್ಡ್ ಮತ್ತು ಈಗಿನ ಕಾಂಗ್ರೇಸ್ ಸರಕಾರವನ್ನು ಹೊಣೆ ಮಾಡುವ ಮೂಲಕ ಬಿಜೆಪಿ ರೈತರಿಗೆ ವಂಚಿಸುತ್ತಿದೆ. ಇಂದಿನ ಸಮಸ್ಯೆ ಹುಟ್ಟಿಕೊಂಡಿರುವುದು ಈಗಾಗಲೇ ನ್ಯಾಯಾಲಯ ನೀಡಿರುವ ಆದೇಶಗಳಿಂದಲೇ ಹೊರತು, ಈಗ ಇರುವ ಕಾಂಗ್ರೇಸ್ ಸರಕಾರದಿಂದ ಅಲ್ಲ. ಈ ಆದೇಶದ ಪ್ರಕಾರ ಈ ಹಿಂದಿನ ಬಿಜೆಪಿ ಸರಕಾರವೂ ನೂರಾರು ರೈತರಿಗೆ ವಕ್ಫ್ ಒತ್ತುವರಿಯ ಬಗ್ಗೆ ನೋಟಿಸ್ ನೀಡಿತ್ತು. ರೈತರು ತಲೆತಲಾಂತರಗಳಿಂದ ಉಳುಮೆ ಮಾಡಿಕೊಂಡು ಬಂದಿರುವ ಯಾವುದೇ ಭೂಮ್ರಿಯನ್ನು ಏಕಾಏಕಿ ವಕ್ಫ್ ಬೋರ್ಡ್ ತನ್ನದೆಂದು ಹೇಳಿಕೊಳ್ಳಲು ಸಾಧ್ಯವಿಲ್ಲ. ನೂರಾರು ವರ್ಷಗಳ ಹಿಂದೆ ದಾನಿಗಳು ಧಾರ್ಮಿಕ ಕಾರಣಗಳಿಗಾಗಿ ವಕ್ಫ್ ಮಾಡಿದ ಜಮೀನನ್ನು ರೈತರು ಒತ್ತುವರಿ ಮಾಡಿಕೊಂಡು ಬಂದಿದ್ದರೆ, ಅದಕ್ಕೆ ಸಂಬಂಧಿಸಿದ ಸೂಕ್ತ ದಾಖಲೆಗಳು ವಕ್ಫ್ ಬೋರ್ಡ್ ಬಳಿ ಇದ್ದರೆ ನೋಟಿಸ್‌ಗಳನ್ನು ಸರಕಾರ ಕಳುಹಿಸುತ್ತದೆ. ಈ ಹಿಂದೆ ಬಿಜೆಪಿ ಸರಕಾರ ಹೀಗೆ ವಕ್ಫ್ ಒಡತನದಲ್ಲಿರುವ ಹಲವು ಜಮೀನುಗಳಿಗೆ ನೋಟಿಸ್‌ಗಳನ್ನು ನೀಡಿತ್ತು. ಅಷ್ಟೇ ಅಲ್ಲ ರಾಜ್ಯದಲ್ಲಿ ಪ್ರಥಮ ಬಾರಿಗೆ ಬಿಜೆಪಿ ಸರಕಾರ.ವಕ್ಫ್ ನ ಒತ್ತುವರಿ ಜಮೀನಿನ ಬಗ್ಗೆ ವರದಿ ತಯಾರಿಸಲು, ಒಂದು ಸಮಿತಿಯನ್ನು ನೇಮಕ ಮಾಡಿತ್ತು. ಈ ಸಮಿತಿಯು ಹಲವು ರಾಜಕೀಯ ನಾಯಕರು ಸಾವಿರಾರು ಎಕರೆ ವಕ್ಸ್ ಭೂಮಿಯನ್ನು ಅಕ್ರಮವಾಗಿ ಒತ್ತುವರಿ ಮಾಡಿರುವುದನ್ನು ಬಹಿರಂಗ ಪಡಿಸಿತ್ತು. ತಲೆತಲಾಂತರಗಳಿಂದ ಅನುಭವಿಸುತ್ತಿರುವ ಭೂಮಿ ವಕ್ಫ್‌ಗೆ ಸೇರಿರುವುದೇ ಆಗಿದ್ದರೆ ಅದಕ್ಕೆ ಸಂಬಂಧಿಸಿ ವಕ್ಫ್ ಬೋರ್ಡ್‌ನ ಬಳಿ ಸ್ಪಷ್ಟ ದಾಖಲೆಗಳಿದ್ದಾಗ ಮಾತ್ರ ರೈತರಿಗೆ ಸಮಸ್ಯೆಯಾಗುತ್ತದೆ. ವಕ್ಫ್ ಬೋರ್ಡ್ ಇದು ತನ್ನ ಭೂಮಿ ಎಂದಾಕ್ಷಣ ರೈತರ ಜಮೀನು ವಕ್ಫ್‌ಗೆ ಸೇರಿ ಬಿಡುತ್ತದೆ ಎನ್ನುವುದು ಬಿಜೆಪಿ ಹರಿಯ ಬಿಡುತ್ತಿರುವ ವದಂತಿಯಾಗಿದೆ. ಭೂಸುಧಾರಣೆಯ ಕಾಯ್ದೆಯ ಅನುಷ್ಠಾನದ ಲಕ್ಷಾಂತರ ಎಕರೆ ವಕ್ಫ್ ಭೂಮಿ ರೈತರ ಪಾಲಾಗಿರುವುದನ್ನು ನಾವು ನೆನಪಿಸಿಕೊಳ್ಳಬೇಕಾಗಿದೆ.

ಈ ಸುಳ್ಳು ಸುದ್ದಿ ವೈರಲ್ ಆಗುತ್ತಿರುವಂತೆಯೇ ಎಚ್ಚೆತ್ತುಕೊಂಡ ಜಿಲ್ಲಾ ಪೊಲೀಸರು, ತಕ್ಷಣ ಸ್ಪಷ್ಟಿಕರಣ ನೀಡಿದರು. ತೇಜಸ್ವಿ ಸೂರ್ಯ ಉಲ್ಲೇಖಿಸಿದ ಪ್ರಕರಣ ನಡೆದಿರುವುದು ಬಿಜೆಪಿ ಆಡಳಿತದ ಕಾಲದಲ್ಲಿ ಲಕ್ಷಾಂತರ ರೂ. ಸಾಲ ಮಾಡಿ ಬೆಳೆದ ಬೆಳೆ ಮಳೆಯಿಂದ ಹಾನಿಗೀಡಾದ ಕಾರಣದಿಂದ ಆತ ಆತ್ಮಹತ್ಯೆ ಮಾಡಿಕೊಂಡಿದ್ದ ಪೊಲೀಸ್ ತನಿಖೆಯಿಂದ ಇದು ಸ್ಪಷ್ಟವಾಗಿತ್ತು ಮಾತ್ರವಲ್ಲ, ಮೃತರ ಕುಟುಂಬಕ್ಕೆ 5 ಲಕ್ಷ ರೂ. ಪರಿಹಾರವನ್ನು ನೀಡಲಾಗಿತ್ತು ಎನ್ನುವ ಅಂಶವನ್ನು ಪೊಲೀಸರು ಬಹಿರಂಗಪಡಿಸಿದ್ದಾರೆ. ಪೊಲೀಸರು ಸ್ಪಷ್ಟನೆ ನೀಡುತ್ತಿದ್ದಂತೆಯೇ ಸಂಸದ ತೇಜಸ್ವಿ ಸೂರ್ಯ ತನ್ನ ಟ್ವೀಟ್‌ನ್ನು ಅಳಿಸಿದ್ದಾರೆ. ಇದೀಗ ವದಂತಿಗಳನ್ನು ಹರಡಿ ಉದ್ವಿಗ್ನ ವಾತಾವರಣ ನಿರ್ಮಿಸಲು ಪ್ರಯತ್ನಿಸಿದ ಕಾರಣಕ್ಕೆ ಅವರ ಮೇಲೆ ದೂರುಗಳು ದಾಖಲಾಗಿವೆ.

3,300ಕಿಮೀ ಕ್ರಮಿಸಿ ವಾಗ್ ಗಡಿ ಪ್ರವೇಶ

ಕೆಲವರು ಬೇರೆ ಬೇರೆ ಸಾರಿಗೆ ವ್ಯವಸ್ಥೆಗಳ ಮೂಲಕ ಪವಿತ್ರ ಸ್ಥಳಕ್ಕೆ ಭೇಟಿ ನೀಡುತ್ತಾರೆ

■ ಇಲ್ಯಾಸ್ ಪಟೇಲ್. ಬಳಗಾನೂರ
• ಉದಯವಾಹಿನಿ, ಬೆಂಗಳೂರು

ನಮ್ಮಲ್ಲಿ ಜನರು ಅನೇಕ ಧರ್ಮಗಳನ್ನು (Religion) ಆಚರಣೆ ಮಾಡುತ್ತಿದ್ದರೂ ಸಹ ಆ ಧರ್ಮದಲ್ಲಿರುವ ನಂಬಿಕೆ ಮಾತ್ರ ಒಂದೇ ಅಂತ ಹೇಳಬಹುದು. ದೇವರಿಗೆ ಕಾಲ್ನಡಿಗೆಯಲ್ಲಿ ಹೋಗಿ ದೇವರಿಗೆ ಪೂಜೆ ಸಲ್ಲಿಸುವುದು ಬಹುತೇಕವಾಗಿ ಎಲ್ಲಾ ಧರ್ಮದವರು ಮಾಡುವಂತಹ ಒಂದು ಭಕ್ತಿಯ (Devotion) ಕೆಲಸ ಅಂತ ಹೇಳಿದರೆ ತಪ್ಪಾಗುವುದಿಲ್ಲ. ಜನರು ದಸರಾ ಹಬ್ಬಕ್ಕೆ ದೂರ ದೂರದ ದೇವಸ್ಥಾನಗಳಿಗೆ ತಾವು ಎಷ್ಟೋ ದಿನಗಳ ಕಾಲದವರೆಗೆ ಬಿಸಿಲು, ಮಳೆ ಮತ್ತು ಚಳಿ ಎನ್ನದೆ ಕಾಲ್ನಡಿಗೆಯಲ್ಲಿ ಹೋಗಿ ಪೂಜೆ ಸಲ್ಲಿಸಿ ಬರುವುದನ್ನು ನಾವು ನೋಡುತ್ತೇವೆ. ಮುಸ್ಲಿಂ ಬಾಂಧವರು ಮೆಕ್ಕಾದಲ್ಲಿರುವ ಹಜ್ ಯಾತ್ರೆಗೆ ಹೋಗಲು ಇಡೀ ವಿಶ್ವದಾದ್ಯಂತದಿಂದ ಬರುವುದನ್ನು ನಾವು ನೋಡುತ್ತೇವೆ. ಕೆಲವರು ವಿಮಾನದಲ್ಲಿ ಬಂದರೆ, ಕೆಲವರು ಬೇರೆ ಬೇರೆ ಸಾರಿಗೆ ವ್ಯವಸ್ಥೆಗಳ ಮೂಲಕ ಪವಿತ್ರ ಸ್ಥಳಕ್ಕೆ ಭೇಟಿ ನೀಡುತ್ತಾರೆ. ಆದರೆ ಯಾದಗಿರಿ ಜಿಲ್ಲೆಯ 35 ವರ್ಷದ ವ್ಯಕ್ತಿಯು ಈ ಬಾರಿಯ ಹಜ್ 2025 ಯಾತ್ರೆಗೆ ನಡೆದುಕೊಂಡು ಹೋಗಲು ನಿರ್ಧರಿಸಿ 8,640 ಕಿಲೋಮೀಟರ್ ಕಾಲ್ನಡಿಗೆಯ ಮಕ್ಕಾ ಪ್ರಯಾಣವನ್ನು ಶುರು ಮಾಡಿದ್ದಾರೆ. ಹಜ್ ಯಾತ್ರೆ ಮುಸ್ಲಿಮರಿಗೆ ಕಡ್ಡಾಯವಾಗಿರುದರಿಂದ.

ಇಸ್ಲಾಂ ಧರ್ಮದಲ್ಲಿ ಜೀವನದಲ್ಲಿ ಒಮ್ಮೆಯಾದರೂ ಮೆಕ್ಕಾ, ಮದೀನಾಕ್ಕೆ ಹೋಗಿ ಹಜ್ ಕರ್ಮಗಳನ್ನು ಮುಗಿಸಬೇಕೆಂಬುದು ಪ್ರತಿಯೊಬ್ಬ ಮುಸಲ್ಮಾನ ವ್ಯಕ್ತಿಯ ಇಚ್ಛೆ, ಹಜ್ ಇಸ್ಲಾಂ ಧರ್ಮದ ಐದು ಆಚರಣೆಗಳ ಪೈಕಿ ಒಂದಾಗಿದೆ. ಹೌದು, ಇದೀಗ ಕರ್ನಾಟಕದ ಗಿರಿನಾಡು ಯಾದಗಿರಿ ಜಿಲ್ಲೆಯ ಶಹಾಪುರ ತಾಲ್ಲೂಕಿನ ಹಳಿ ಸಗರ್ ಗ್ರಾಮದ ಸಯೇದ್ ಜಿಲ್ಹಾನಿ 35ವರ್ಷದ ಯುವಕ ಹಜ್ ಯಾತ್ರೆಯನ್ನು ಕಾಲ್ನಡಿಗೆ ಮೂಲಕವೇ ಕೈಗೊಳ್ಳುವ ನಿರ್ಧಾರ ಮಾಡಿದ್ದು, ಈಗಾಗಲೇ ಕರ್ನಾಟಕದಿಂದ ಪ್ರಾರಂಭವಾಗಿ, ಮಹಾರಾಷ್ಟ್ರ, ಮಧ್ಯಪ್ರದೇಶ್, ರಾಜಸ್ತಾನ್, ಉತ್ತರ ಪ್ರದೇಶ, ಹರಿಯಾಣ, ದಿಲ್ಲಿ, ಪಂಜಾಬ್ ಹೀಗೆ ಹಲವು ರಾಜ್ಯಗಳ ಮೂಲಕ ವಾಗ್ ಗಡಿಗೆ ತಲುಪಿದ್ದಾರೆ. ಸೌದಿ ಅರೇಬಿಯಾದ ಪವಿತ್ರ ನಗರ ಮೆಕ್ಕಾಕ್ಕೆ ಕಾಲ್ನಡಿಗೆ ಮೂಲಕವೇ ಪ್ರಯಾಣ ಬೆಳೆಸಿಲ್ಲಿರುವ ಸಯೇದ್ ಜಿಲ್ಹಾನಿ ಹಳಿ ಸಗರ್ ರಾಜ್ಯ ಮುಸ್ಲಿಂ ಸಮುದಾಯದ ಪ್ರಶಂಸೆಗಳಿಸಿದ್ದಾರೆ. ಈ ಸುದೀರ್ಘ ಪಯಣದಲ್ಲಿ ಅವರು ಹಲವು ದೇಶಗಳನ್ನು ಸುತ್ತಬೇಕಿದೆ. ಒಟ್ಟಾರೆ 2025ನೇ ಹಜ್ ಯಾತ್ರೆಯಲ್ಲಿ ತಮ್ಮ ಹಜ್ ಯಾತ್ರೆಮಾಡಿ ವಿಶಿಷ್ಟ ಸಾಧನೆ ಪೂರ್ಣಗೊಳಿಸುವ ಪ್ರತಿಜ್ಞೆ ಅವರದ್ದು. ಈ ವರ್ಷದ ಜೂನ್ 28ರಂದು ತಮ್ಮ ಸಹ ಗ್ರಾಮವಾದ ಶಹಾಪುರ ತಾಲ್ಲೂಕಿನ ಹಳಿ ಸಗರ್ ಯಿಂದ ತಮ್ಮ ಅದ್ಭುತ ಪ್ರಯಾಣವನ್ನು ಪ್ರಾರಂಭಿಸಿದರು. ಪ್ರತಿದಿನ, ಅವರು ಕನಿಷ್ಠ ಎಂದರೂ 30ಕಿಲೋ ಮೀಟರ್ ನಡೆಯುತ್ತಾರೆ ಅಂತ ಹೇಳಬಹುದು. ಭಾರತ, ಪಾಕಿಸ್ತಾನ, ಇರಾನ್, ಇರಾಕ್ ಮತ್ತು ಕುವೈತ್‌ನಲ್ಲಿ ಸಂಚರಿಸಿದ ನಂತರ ಅವರು 2025ರಲ್ಲಿ ಹಜ್ ಯಾತ್ರೆಗಾಗಿ ಮೆಕ್ಕಾವನ್ನು ತಲುಪಲಿದ್ದಾರೆ. ಅಂತಿಮವಾಗಿ ಫೆಬ್ರವರಿ –ಮಾರ್ಚ್ 2025ರ ಆರಂಭದಲ್ಲಿ ಸೌದಿ ಅರೇಬಿಯಾವನ್ನು ತಲುಪಲಿದ್ದಾರೆ. ಸೌದಿ ಅರೇಬಿಯಾಕ್ಕೆ ಆಗಮಿಸಿದ ನಂತರ ಅವರು ಹಜ್ ಯಾತ್ರೆಗೆ ಅರ್ಜಿ ಸಲ್ಲಿಸಲ್ಲಿದ್ದಾರೆ. ಈ ಸಂಧರ್ಭದಲ್ಲಿ **ಉದಯ ವಾಹಿನಿ** ಪತ್ರಿಕೆ ಜೊತೆ ಮಾತನಾಡಿದ ಅವರು ವರ್ಷಾರಂಭದಲ್ಲಿ ಕೇರಳದ ವ್ಯಕ್ತಿಯೊಬ್ಬರು ಶಿಹಾಬ್ ಚೋಟ್ಟೂರ್ ಎಂಬವರು ಕಾಲ್ನಡಿಗೆಯಲ್ಲಿ ಹಜ್ ಯಾತ್ರೆ ಮುಗಿಸಿದ್ದು ನನಗೆ ಸ್ಫೂರ್ತಿಯಾಗಿದೆ. ಈ ಹಿಂದೆ ಸೈಕಲ್ ಮೂಲಕ ಹಜ್ ಯಾತ್ರೆ ಮುಗಿಸಿದ ಕೆಲವರು ನನಗೆ ಸ್ಫೂರ್ತಿ. ಶಿಹಾಬ್ ಚೋಟ್ಟೂರ್ ಕಾಲ್ನಡಿಗೆ ಮೂಲಕ ಹಜ್ ಯಾತ್ರೆ ಮಾಡುವ ಸಂಧರ್ಭದಲ್ಲಿ ಅವರಿಗೂ ಕೂಡ ಬೇಟಿ ಮಾಡಿ ಹಲವಾರು ವಿಷಯಗಳನ್ನು ಅವರ ಜೊತೆ ಚರ್ಚೆ ಮಾಡಿದ್ದೆ, ಅವರು ಕಳೆದ ವರ್ಷ ಯಾತ್ರೆಗಾಗಿ ಶಿಹಾಬ್ ಚೋಟ್ಟೂರ್ ಎಂಬವರು ಕೇರಳದಿಂದ ಸೌದಿ ಅರೇಬಿಯಾದವರೆಗೆ ನಡೆದುಕೊಂಡು ಬಂದಿದ್ದರು ಹಲವಾರು ಕಡೆ ಸ್ಥಳೀಯ ಮುಸ್ಲಿಮರು ಅದ್ದೂರಿ ಸ್ವಾಗತ ಕೋರಿ, ಸನ್ಮಾನಿಸಿದರು, ಉಟೋಪಚಾರ, ವಿವಿಧ ಹಣ್ಣಿನ ರಸಗಳನ್ನು ಒದಗಿಸಿದ್ದಾರೆ ಎಂದು ಹೇಳಿದರು.

ಉದಯವಾಹಿನಿ ಚಿತ್ರ

ಕಾಲ್ನಡಿಗೆ ಮೂಲಕ ಹಜ್ ಯಾತ್ರೆ ಮಾಡುತ್ತಿರುವುದು ವಿಶಿಷ್ಟ ಸಾಧನೆಯಾಗಿದೆ, ಅವರದು ಒಂದು ಕನಸು ಕೂಡ ಆಗಿತ್ತು ಕಾಲ್ನಡಿಗೆ ಮೂಲಕ ಹಜ್ ಯಾತ್ರೆ ಮಾಡಬೇಕು ಅನ್ನುವುದು, ಅವರು ಈಗಾಗಲೇ 130ದಿನಗಳಲ್ಲಿ ಅವರು 3,300 ಕಿ. ಮೀ ಕ್ರಮಿಸಿದ್ದಾರೆ. ನಮ್ಮ ಗಿರಿನಾಡು ಯಾದಗಿರಿ ಜಿಲ್ಲೆಗೆ ಹೆಮ್ಮೆಯ ವಿಷಯವಾಗಿದೆ, ಅವರ ಮುಂದಿನ ಹಾದಿ ಸುಗಮವಾಗಿ ಸಾಗಲಿ ಎಂದು ಕೆಂಭಾವಿ ಗೆಳೆಯರ ಬಳಗ ಹಾಗೂ ಮುಸ್ಲಿಂ ಭಾಂದವರು ಹರ್ಷ ವ್ಯಕ್ತ ಪಡಿಸಿದರು.
ಸಯೇದ್ ಜಿಲ್ಹಾನಿ ಹಳಿ ಸಗರ್

ನಡೆದುಕೊಂಡು ಹೋಗುವುದಕ್ಕೆ ಪ್ರೇರಣೆ ಯಾರು?

ಪ್ರಾಚೀನ ಕಾಲದಿಂದಲೂ ಹಲವಾರು ಕಡೆಯಿಂದ ಮೆಕ್ಕಾದ ಪವಿತ್ರ ಭೂಮಿಗೆ ಕಾಲ್ನಡಿಗೆಯಲ್ಲಿ ಪ್ರಯಾಣಿಸುವ ಜನರ ಕಥೆಗಳನ್ನು ಕೇಳಿ ಬೆಳೆದವರು, ಕಳೆದ ವರ್ಷ ಕೇರಳದ ಶಿಹಾಬ್ ಚೋಟ್ಟೂರ್ ಕಾಲ್ನಡಿಗೆ ಮೂಲಕ ಹಜ್ ಯಾತ್ರೆ ಮುಗಿಸಿದರು. ಸಯೇದ್ ಜಿಲ್ಹಾನಿ ಹಳಿ ಸಗರ್ ಅವರು ಮೆಕ್ಕಾಗೆ ಅವರು ಸಹ ನಡೆದುಕೊಂಡು ಹೋಗುವುದಕ್ಕೆ ಪ್ರೇರಣೆ ಆಯಿತು ಮತ್ತು ಇದು ಅವರ ಜೀವನದ ಒಂದು ದೊಡ್ಡ ಕನಸಾಗಿ ಬೆಳೆಯಿತು. ಅದನ್ನು ಈಗ ನನಸು ಮಾಡಿಕೊಳ್ಳಲು ಪ್ರಯಾಣ ಶುರು ಮಾಡಿದ್ದಾರೆ ಅಂತ ಹೇಳಬಹುದು

ಯಶವಂತಪುರ ಕಸಾಪದಿಂದ ವಿಶೇಷ, ವಿಶಿಷ್ಟ ರಾಜ್ಯೋತ್ಸವ

• ಉದಯವಾಹಿನಿ, ಬೆಂಗಳೂರು

ಯಶವಂತಪುರ ವಿಧಾನಸಭಾ ಕ್ಷೇತ್ರ ಕನ್ನಡ ಸಾಹಿತ್ಯ ಪರಿಷತ್ತು ಕನ್ನಡ ರಾಜ್ಯೋತ್ಸವದ ಅಂಗವಾಗಿ ವಿವಿಧ ಕಾಲೇಜುಗಳಲ್ಲಿ ನಾಟಕೋತ್ಸವವನ್ನ ಆಚರಿಸುವ ಮೂಲಕ ವಿಶೇಷ ವಿಶಿಷ್ಟ ರೀತಿಯಲ್ಲಿ ಆಚರಿಸಲಾಗುತ್ತಿದೆ ಎಂದು ಸಾಹಿತ್ಯ ಪರಿಷತ್ ಅಧ್ಯಕ್ಷ ಹೆಚ್ ಎಸ್ ಸುಧೀಂದ್ರ ಕುಮಾರ್ ತಿಳಿಸಿದ್ದಾರೆ.

ಈ ತಿಂಗಳ 11ರ ಸೋಮವಾರದಿಂದ 16ರ ಶನಿವಾರದವರೆಗೆ ನಾಟ ಕೋತ್ಸವವನ್ನು ಆಚರಿಸುವ ಮೂಲಕ ರಾಜ್ಯೋತ್ಸವವನ್ನು ನಡೆಸಲಾಗುತ್ತಿದ್ದು ನಾಟಕೋತ್ಸವದ ಉದ್ಘಾಟನೆಯನ್ನು ಕೆಂಗೇರಿ ಉಪನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಆಯೋಜಿಸಲಾಗಿದ್ದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ನಿರ್ದೇಶಕರಾದ ಡಾಕ್ಟರ್ ಧರಣಿ ದೇವಿ ಮಾಲಗತ್ತಿ ನಡೆಸಿಕೊಡಲಿದ್ದಾರೆ

ಯಶವಂತಪುರ ಕ್ಷೇತ್ರ ಶಾಸಕ ಮಾಜಿ ಸಚಿವ ಎಸ್ ಟಿ ಸೋಮಶೇಖರ್ ಭುವನೇಶ್ವರಿ ಭಾವಚಿತ್ರಕ್ಕೆ ಪುಷ್ಪಾರ್ಚನೆ ನಡೆಸಲಿದ್ದು ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಡಾ. ಬೈರಮಂಗಲ ರಾಮಯ್ಯಗೌಡ ಅವರನ್ನು ಈ ಸಂದರ್ಭದಲ್ಲಿ ಅಭಿನಂದಿಸಲಾಗುತ್ತಿದೆ ಯಶವಂತಪುರ ಶಾಪ ಅಧ್ಯಕ್ಷ ಎಚ್‌ಎಸ್ ಸುಧೀಂದ್ರ ಕುಮಾರ್ ಅಧ್ಯಕ್ಷತೆ ವಹಿಸಲಿದ್ದು ಜಿಲ್ಲಾ ಕಸಾಪ ಅಧ್ಯಕ್ಷ ಎಂ ಪ್ರಕಾಶಮೂರ್ತಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಪ್ರಾಂಶುಪಾಲ ಡಾ. ಲಕ್ಷ್ಮೀನಾರಾಯಣ, ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ.

11ರ ಸೋಮವಾರ ಸಂಜೆ 4 ಗಂಟೆಗೆ ಕೆಂಗೇರಿ ಉಪನಗರದ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ 36 ಅಲ್ಲ 63 ಹಾಸ್ಯ ನಾಟಕ 12ರ ಮಂಗಳವಾರ ಸಂಜೆ 4:00ಗೆ ಉಲ್ಲಾಳ ಮುಖ್ಯ ರಸ್ತೆಯ ಆಕ್ಸ್‌ಫರ್ಡ್ ಕಾಲೇಜಿನಲ್ಲಿ ಸಾಲದ ಮಗು ಜಾನಪದ ನಾಟಕ 13ರ ಬುಧವಾರ ಸಂಜೆ 4:00ಗೆ ಬ್ಯಾಡರಹಳ್ಳಿಯ ಬ್ಲೂಬೆಲ್ ಪಬ್ಲಿಕ್ ಶಾ

ಭೋರ್ಗರೆಯುವ ಕಾಗೇದಹಳ್ಳ: ಮಳೆ ಬಂದರೆ ದ್ವೀಪವಾಗುವ ಹೊಲಬಗೆರೆ

ಈ ಭಾಗದ ಜನರು, ಹಳ್ಳ ದಾಟಿಕೊಂಡು ನಗರ ಪಟ್ಟಣಗಳಿಗೆ ಹೋಗಿ ಬರಲು ಜಲಸಾಹಸ ಮಾಡುವ ಪರಿಸ್ಥಿತಿ

• ಉದಯವಾಹಿನಿ, ಹಳೇಬೀಡು

ದ್ವಾರಸಮುದ್ರ ಸೇರಿದಂತೆ ದೊಡ್ಡಕೆರೆಗಳಿಗೆ ನೀರು ತುಂಬಿಸುವ ಪ್ರಮುಖ ಹಳ್ಳವಾದ ಕಾಗೇದಹಳ್ಳಕ್ಕೆ, ಹೊಲ ಬಗೆರೆ ಬಳಿ ರಸ್ತೆಗೆ ಅಡ್ಡಲಾಗಿ ಸೇ ತುವೆ ಇಲ್ಲದಾಗಿದೆ. ಇದರಿಂದಾಗಿ ಮಳೆಗಾಲದಲ್ಲಿ ಇಲ್ಲಿಯ ಜನರು ಕಷ್ಟ ಅನುಭವಿಸುವಂತಾಗಿದೆ.ಮಳೆಗಾಲದಲ್ಲಿ ಹಳ್ಳದಲ್ಲಿ ಭೋರ್ಗರೆಯುತ್ತಿದ್ದು, ಹಳ್ಳದ ಬಳಿ ಎತ್ತಿನಹೊಳೆ ನಾಲೆ ಕಾಮಗಾರಿ ನಡೆಯುತ್ತಿದೆ.

ನಿರ್ಮಾಣ ಹಂತದ ಎತ್ತಿಹೊಳೆ ನಾಲೆಯಲ್ಲಿ ಮಳೆ ನೀರು ನಿಂತು, ಕಾಮಗಾರಿಗೆ ತೊಡಕಾದಾಗ ಹಳ್ಳಕ್ಕೆ ಬಿಡಲಾಗುತ್ತದೆ. ಇದರಿಂದ ಈ ಭಾಗದ ಜನರು, ಹಳ್ಳ ದಾಟಿಕೊಂಡು ನಗರ ಪಟ್ಟಣಗಳಿಗೆ ಹೋಗಿ ಬರಲು ಜಲಸಾಹಸ ಮಾಡುವ ಪರಿಸ್ಥಿತಿ ಬಂದಿದೆ ಎನ್ನುತ್ತಾರೆ ಇಲ್ಲಿಯ ರೈತರು.

ರಭಸದ ಮಳೆ ಬಂದರೆ ಹಳ್ಳ ತುಂಬಿ ಹರಿಯುತ್ತಿದ್ದು, ಹೊಲಬಗೆರೆ ಗ್ರಾಮ ದ್ವೀಪದಂತಾಗುತ್ತದೆ. ಗ್ರಾಮದ ಬಹುತೇಕ ಕುಟುಂಬಗಳು ತೋಟದ ಮನೆಗಳಲ್ಲಿ

ಉದಯವಾಹಿನಿ ಚಿತ್ರ

ಪ್ರತಿನಿಧಿಗಳಂತೂ ಹಳ್ಳದತ್ತ ಸುಳಿದಿಲ್ಲ

ವಾಸಿಸುತ್ತಿದ್ದೇವೆ. ಹೊಲಬಗರೆ ಮಾತ್ರವಲ್ಲದೇ ಸವಾಸಿಹಳ್ಳಿ, ಬೆಟ್ಟದಾಲೂರು, ಅಡವಿಬಂಟೇನಹಳ್ಳಿ ಮೊದಲಾದ ಗ್ರಾಮದವರಿಗೂ ಈ ಭಾಗದಲ್ಲಿ ಜಮೀನುಗಳಿವೆ ಎಂದು ರೈತ ವಡ್ಡರಹಳ್ಳಿಯ ಸದಾಶಿವಯ್ಯ ಹೇಳಿದರು.

ತೋಟದ ಮನೆಯಲ್ಲಿ ವಾಸವಾಗಿರುವ ಸಾಕಷ್ಟು ಮಂದಿ ಬೈಕ್, ಕಾರು ಮೊದಲಾದ ವಾಹನ ಹೊಂದಿದ್ದೇವೆ. ಹಳ್ಳದಲ್ಲಿ ಹರಿಯುವ ನೀರಿನ ವೇಗ ಹೆಚ್ಚಾದಾಗ ಸ್ವಂತ ವಾಹನ ಇದ್ದರೂ ಆಸ್ಪತ್ರೆ, ವ್ಯಾಪಾರ ವ್ಯವಹಾರ, ಕಚೇರಿ ಮೊದಲಾದ ಕೆಲಸಗಳಿಗೆ ನಗರಗಳಿಗೆ ಹೋಗಿ ಬರಲು ಪರದಾಡುವಂತಾಗಿದೆ. ಕೃಷಿ ಉತ್ಪನ್ನಗಳನ್ನು ಸಾಗಾಟ ಮಾಡುವುದು ಸುಲಭವಾಗಿಲ್ಲ.

> ಹಳ್ಳದಲ್ಲಿ ಒಮ್ಮೊಮ್ಮೆ ಮರಗಳು ಬುಡಸಮೇತ ಹರಿದು ಬರುತ್ತವೆ. ಹೀಗಾಗಿ ದೊಡ್ಡ ಕಿಂಡಿಯ ಸೇತುವೆ ಅಗತ್ಯವಿದೆ. ಆದರೆ ಎಂಜಿನಿಯರ್‌ಗಳು ಪೈಪ್ ಅಳವಡಿಸಲಾಗುವುದು ಎನ್ನುತ್ತಿದ್ದಾರೆ. ಆದರೆ ಕೆಲಸ ಮಾತ್ರ ಕಾರ್ಯಗತವಾಗುತ್ತಿಲ್ಲ. ಕಾಮಗಾರಿ ವಿಳಂಬವಾದಷ್ಟು ರೈತರಿಗೆ ಆಗುವ ನಷ್ಟದ ಮೊತ್ತ ಏರಿಕೆಯಾಗುತ್ತಿದೆ ಎಂದು ಸತೀಶ್ ಹೇಳಿದರು.

ಕೈಗೆ ಫಸಲು ಸಿಕ್ಕಿದರೂ ಒಮ್ಮೊಮ್ಮೆ ಊರಿಗೆ ಬಂದು ಖರೀದಿಸಲು ವರ್ತಕರು ಮುಂದೆ ಬರುವುದಿಲ್ಲ. ನಗರದ ಮಾರುಕಟ್ಟೆಗೆ ನಾವೇ ಸಾಗಿಸುವುದು ಸಹ ಕಷ್ಟವಾಗಿದೆ ಎಂದು ರೈತ ಸತೀಶ್ ಹೇಳಿದರು.

ಕಾಗೇದಹಳ್ಳ ಭೋರ್ಗರೆಯುವಂತೆ ಹರಿಯುವುದು ಇಂದು, ನಿನ್ನೆಯ ಸಮಸ್ಯೆ ಅಲ್ಲ. ರಸ್ತೆಗೆ ಅಡ್ಡಲಾಗಿ ಹರಿಯುತ್ತಿರುವ ಹಳ್ಳಕ್ಕೆ ಸೇತುವೆ ನಿರ್ಮಾಣ ಮಾಡಲು ಯಾವ ಇಲಾಖೆಯೂ ಮುಂದಾಗಿಲ್ಲ.

ಸಾರ್ವಜನಿಕರಿಗೆ ಅನುಕೂಲ ಕಲ್ಪಿಸಿ

> ಕಾಗೇದಹಳ್ಳಕ್ಕೆ ಸೇತುವೆ ನಿರ್ಮಿಸಲು ಅಂದಾಜು ಸಿದ್ದವಾಗಿದೆ. ಕಾಮಗಾರಿಗೆ ಮಳೆ ಬಿಡುವು ಕೊಡುತ್ತಿಲ್ಲ. ಗುತ್ತಿಗೆದಾರರಿಗೆ ಅನಾರೋಗ್ಯ ಆಗಿರುವುದರಿಂದ ಕಾಮಗಾರಿ ತಡವಾಗಿದೆ. ಮಳೆಗಾಲ ಮುಗಿದ ತಕ್ಷಣ ಕಾಮಗಾರಿ ಕೈಗೊಳ್ಳುತ್ತೇವೆ. ವಡ್ಡರಹಳ್ಳಿ ರೈತಈ ವರ್ಷ ಭಾರಿ ಪ್ರಮಾಣದ ಮಳೆ ಸುರಿದಿರುವುದರಿಂದ ಹಳ್ಳ ನಿರಂತರವಾಗಿ ಹರಿಯುತ್ತಿದೆ. ಇದು ನಿತ್ಯದ ಸಮಸ್ಯೆ ಆಗಿರುವುದರಿಂದ ಎತ್ತಿನಹೊಳೆ ಯೋಜನೆಯವರು ಬೇಗ ಕಾಮಗಾರಿ ಕೈಗೊಂಡು ಸಾರ್ವಜನಿಕರಿಗೆ ಅನುಕೂಲ ಕಲ್ಪಿಸಬೇಕು.

ತಾತ, ಮುತ್ತಾತನ ಕಾಲದಿಂದಲೂ ಹಳ್ಳದ ಸಮಸ್ಯೆ ಇದ್ದರೂ, ಜನ ಪ್ರತಿನಿಧಿಗಳಂತೂ ಹಳ್ಳದತ್ತ ಸುಳಿದಿಲ್ಲ'

> ಕಾಗೇದಹಳ್ಳ ಎತ್ತಿನಹೊಳೆ ಯೋಜನೆಗೆ ಒಳಪಡುವುದಿಲ್ಲ. ಸಮೀಪದಲ್ಲಿಯೇ ಕಾಮಗಾರಿ ನಡೆಯುತ್ತಿದ್ದು ನಾಲೆಯಲ್ಲಿ ತುಂಬಿದ್ದ ನೀರನ್ನು ಹಳ್ಳಕ್ಕೆ ಹೊರಹಾಕಲು ಬಳಕೆ ಮಾಡಿಕೊಂಡಿದ್ದೇವೆ. ಹೀಗಾಗಿ ಎತ್ತಿನ ಹೊಳೆ ಯೋಜನೆಯಿಂದ ಸೇತುವೆ ನಿರ್ಮಾಣದ ಜವಾಬ್ದಾರಿ ಪಡೆಯಲಾಗಿದೆ ಎಂದು ಎಂಜಿನಿಯರ್ ಈರಯ್ಯ ಹೇಳಿದರು.

ಎಂದು ಸುರೇಶ್ ಹೇಳಿದರು.

ಹೊಲಬಗೆರೆ ಮೊದಲಾದ ಗ್ರಾಮದವರಿಗೆ ಹತ್ತಿರದ ದೊಡ್ಡ ಗ್ರಾಮ ಹಗರೆ ನಗರ, ಪಟ್ಟಣಗಳ ಸಂಪರ್ಕ ಕೇಂದ್ರವಾಗಿದೆ. ಮಳೆಗಾಲದಲ್ಲಿ ಬೇರೆ ಊರಿಗೆ ಹೋದವರು, ಬಸ್‌ನಲ್ಲಿ ಹಗರೆ ಗ್ರಾಮಕ್ಕೆ ಬಂದಿಳಿದರೆ ಊರಿಗೆ ಹೋಗಲು ಆಟೋದವರು ಬರುವುದಿಲ್ಲ. ಊರು ಸೇರಲು ಪಡಬಾರದ ಕಷ್ಟ ಅನುಭವಿಸುವಂತಾಗಿದೆ' ಎನ್ನುತ್ತಾರೆ ಹೊಲಬಗೆರೆಯ ಗೋವಿಂದನಾಯ್ಕ.

ಅಂಗಡಿಗಳ ತೆರವಿಗೆ ವ್ಯಾಪಾರಸ್ಥರು ವಿರೋಧ ಸಂಘಟನೆ ಬೆಂಬಲ

• ಉದಯವಾಹಿನಿ, ಸಿಂಧನೂರು

ನಗರದ ರಸ್ತೆ ಬದಿಯಲ್ಲಿರುವ ಅಂಗಡಿಗಳನ್ನು ತೆರವುಗೊಳಿಸುವ ನಿಟ್ಟಿನಲ್ಲಿ ನಗರ ಸಭೆಯ ತಮಗೆ ನೆನಪು ಆದಾಗ ಮಾತ್ರ ಎಲ್ಲರಿಗೂ ನೋಟಿಸ್ ಜಾರಿ ಮಾಡಿ ಎಲ್ಲಾ ಅಂಗಡಿಗಳನ್ನು ತೆರವುಗೊಳಿಸಬೇಕೆಂದು. ಸಾಕಷ್ಟು ಬಾರಿ ಪ್ರಯತ್ನ ಮಾಡಿದ್ದಾರೆ ವರಿತು ಎಂದೆಂದಿಗೂ ಕಾರ್ಯರೂಪಕ್ಕೆ ಬರಲಾರದೆ ಸಮಸ್ಯೆಯಾಗಿದೆ ಎಂದು ಸಾರ್ವಜನಿಕರು ಮಾತನಾಡುತ್ತಿರುತ್ತಾರೆ. ಅದರಂತೆಯೇ ನಗರದ ಶ್ರೀ ಶಕ್ತಿ ಭವನದ ಮುಂಭಾಗದಲ್ಲಿ ಸಹ ಸಣ್ಣ ಪುಟ್ಟ ಅಂಗಡಿಗಳ ತಾಲ್ಲೂಕು ಪಂಚಾಯಿತಿ ವ್ಯಾಪ್ತಿಯಲ್ಲಿ ಭವನದ ಮುಂದೆ. ಸಣ್ಣ ಸಣ್ಣ ಡಬ್ಬಿ ಅಂಗಡಿಗಳು ಸುಮಾರು ವರ್ಷಗಳಗಳಿಂದ ವ್ಯಾಪಾರ ಮಾಡುತ್ತಾ ಬಂದಿದ್ದಾರೆ. ಅಂಗಡಿಗಳ ತೆರವು ಕಾರ್ಯಾಚರಣೆ ಇದು ಸಾಧ್ಯವಾಗಬಹುದೇ.....? ಶುಕ್ರವಾರ ಸಂಜೆ ತಾಲ್ಲೂಕು ಪಂಚಾಯಿತಿ ಯೋಜನೆ ಅಧಿಕಾರಿ ಅಮರ್ ಗುಂಡಪ್ಪ, ಶ್ರೀ ಶಕ್ತಿ ಒಕ್ಕೂಟದ ಅಧ್ಯಕ್ಷೆ ಶ್ರೀದೇವಿ ಶ್ರೀನಿವಾಸ ಮತ್ತು ಸಿಡಿಪಿಒ ಲಿಂಗನಗೌಡ ಒಕ್ಕೂಟದ ಮಹಿಳೆಯರ ಸೇರಿ ತಾಲ್ಲೂಕು ಪಂಚಾಯಿತಿ ವ್ಯಾಪ್ತಿಯಗೆ ಬರುವ ಜಾಗವನ್ನು ಬೀದಿ ವ್ಯಾಪಾರ ಮಾಂಸ. ಕಾಯಿಪಲ್ಲೆ. ಚಪ್ಪಲಿ. ಹೆಣ್ಣಿನ . ಬೀದಿ

ಉದಯವಾಹಿನಿ ಚಿತ್ರ

ಬಂಡಿಗಳು ಸೇರಿದಂತೆ ಇತರ ಬಿದಿ ಅಂಗಡಿಗಳನ್ನು ತೆಗೆಸಿ ಮಹಿಳಾ ಒಕ್ಕೂಟದ ಮಹಿಳೆಯರಿಗಾಗಿ ಮೀಸಲು ಇರುವ ಈ ಭವನ ಸುತ್ತ ತಂತಿ ಬೇಲಿ ಹಾಕಬೇಕು ಎಂದು ಹಿನ್ನೆಲೆಯಲ್ಲಿ ಶುಕ್ರವಾರ ಸಂಜೆ ತೆರವು ಕಾರ್ಯಾಚರಣೆಯಲ್ಲಿ.ವ್ಯಾಪಾರಸ್ಥರಿಗೆ. ಅಧಿಕಾರಿಗಳಿಗೆ ವಾದ ವಿವಾದಗಳು ನಡೆದಿದ್ದು. ಅಲ್ಲಿರುವ ವ್ಯಾಪಾರಸ್ಥರು ಆಕ್ರೋಶಕ್ಕೆ ಕಾರಣವಾಗಿತ್ತು.

ವ್ಯಾಪಾರಸ್ಥರ ಬೆಂಬಲಕ್ಕೆ ವೀರ ಮದಕರಿ ನಾಯಕ ತಾಲ್ಲೂಕು ಅಧ್ಯಕ್ಷ ವಿಶ್ವನಾಥ ನಾಯಕ್, ಕೆಲವು ಕನ್ನಡ ಪರ ಸಂಘಟನೆಗಳು ಘಟನೆ ಸ್ಥಳಕ್ಕೆ ಆಗಮಿಸಿ ಈಗ ಏಕಾಏಕಿ ಅಂಗಡಿಗಳನ್ನು ತೆಗೆಯಬೇಕೆಂದು ಅಧಿಕಾರಿಗಳು ಮುಂದಾದರೆ ಅವರನ್ನು ಎಲ್ಲಿಗೆ ಹೋಗಬೇಕು. ಅವರಿಗೆ ನೋಟಿಸ್ ನೀಡಿ. ಇಷ್ಟು

ತೆರವು ಕಾರ್ಯಚರಣೆ ನಿಲ್ಲಲಿ

> ನಿಮ್ಮ ತಾಲ್ಲೂಕು ವ್ಯಾಪ್ತಿಯಲ್ಲಿ ಬರುವ ಜಾಗವನ್ನು ಮೊದಲ ಗುರುತಿಸಿ. ನಂತರ ರಸ್ತೆ ಮದ್ಯದಿಂದ 75 ಫೀಟ್ ವರಿಗೆ ನಗರ ಸಭೆ ರಸ್ತೆ ಜಾಗ ಇರುತ್ತದೆ. ರಸ್ತೆಯ ಬದಿಯಲ್ಲಿ ವ್ಯಾಪಾರಸ್ಥ ಇದ್ದಾರೆ. ಸಂಘಟನೆಗಳು ವಾದವಾಗಿದ್ದು. ಯಾವುದೇ ಕಾರಣಕ್ಕೂ ಶಾಸಕರು ಬರುವರೆಗೂ ಯಾವುದೇ ಸಮಸ್ಯೆ ಹಾಗೂ ಕೂಡದು ತೆರವು ಕಾರ್ಯಚರಣೆ ಮೊದಲು ಇಲ್ಲಿಗೆ ನಿಲ್ಲಲಿ.

ದಿನದಲ್ಲಿ ನಿಮ್ಮ ಅಂಗಡಿಗಳನ್ನು ತೆಗೆಯಬೇಕು. ಇದು ಜಾಗ ಭವನಕ್ಕೆ ಕಾಂಪ್ಲೆಕ್ಸ್ ಅಥವಾ ಏನಾದರೂ ಮಾಡುತ್ತವೆ ಎಂದು ತಿಳಿಸಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಸ್ಥಳಕ್ಕೆ ಪಿಎಸ್‌ಐ ದುರುগಪ್ಪ ಡೊಳ್ಳಿನ ಆಗಮಿಸಿದ ಎಲ್ಲರನ್ನೂ ಮನವೊಲಿಸಿ ಯಾವುದೇ ಸಮಸ್ಯೆ ಉದ್ಭವಿಸುದಂತ ಸಮಾಧಾನ ಗಳಿಸಿದರು. ಈ. ಸಂ. ಸಂಘಟನೆ ಕಾರ್ಯಕರ್ತರು ಹಾಗೂ ಸಾರ್ವಜನಿಕರು ಇದ್ದರು.

ಮಾರುಕಟ್ಟೆಯಲ್ಲೀಗ ಬಂಗುಡೆ ಬಲು ಅಗ್ಗ

• ಉದಯವಾಹಿನಿ, ಮಂಗಳೂರು

ತಿಂಗಳ ಹಿಂದೆ ಕಿಲೋಗೆ 200-250 ರೂ. ದರವಿದ್ದ ಬಂಗುಡೆ ಮೀನು ಈಗ ಬಹಳಷ್ಟು ಅಗ್ಗವಾಗಿದ್ದು, 100-150 ರೂ. ಗಳಲ್ಲಿ ದೊರೆಯುತ್ತಿದೆ. ಕೆಲವು ದಿನಗಳ ಹಿಂದೆ ಮಂಗಳೂರಿನ ಕೇಂದ್ರ ಮೀನು ಮಾರುಕಟ್ಟೆಯಲ್ಲಿ 80 ರೂ.ಗೆ ಮಾರಾಟ ಆಗಿರುವುದೂ ಇದೆ. ವಿದೇಶಗಳಲ್ಲಿ ಬಂಗುಡೆ ಮೀನಿಗೆ ಬೇಡಿಕೆ ಕಡಿಮೆಯಾಗಿ ಸ್ಥಳೀಯ ಮಾರುಕಟ್ಟೆಗೆ ಹೆಚ್ಚು ಪ್ರಮಾಣದಲ್ಲಿ ಪೂರೈಕೆ ಆಗುತ್ತಿರುವುದು ಇದಕ್ಕೆ ಮುಖ್ಯ ಕಾರಣ. ಹೌದು, ಮೀನುಪ್ರಿಯರ ನೆಚ್ಚಿನ ಬಂಗುಡೆ ಮೀನು ಪ್ರಸ್ತುತ ಮಾರುಕಟ್ಟೆಯಲ್ಲಿ ಬಹಳ ಕಡಿಮೆ ದರಕ್ಕೆ ಲಭ್ಯವಾಗುತ್ತಿದೆ. ಹೆದ್ದಾರಿ ಬದಿ ಅಲ್ಲಲ್ಲಿ ವ್ಯಾಪಾರಿಗಳು ಬಂಗುಡೆಯನ್ನೇ ಮಾರಾಟ ಮಾಡುತ್ತಿರುವ ದೃಶ್ಯಗಳು ಕಂಡುಬರುತ್ತಿವೆ. ದೊಡ್ಡ ಗಾತ್ರದ ಬಂಗುಡೆಗಳೂ ಮಾರುಕಟ್ಟೆಗೆ ಬಂದಿವೆ.

ವಿದೇಶಿ ಮಾರುಕಟ್ಟೆಯಲ್ಲಿ ಬೇಡಿಕೆ ಇಳಿಕೆ: ಪ್ರಸ್ತುತ ವಿದೇಶಿ ಮಾರುಕಟ್ಟೆಯಲ್ಲಿ ಇತರ ತಳಿಯ ಮೀನಿಗೆ ಬೇಡಿಕೆ ಹೆಚ್ಚಿದ್ದು, ಬಂಗುಡೆಗೆ ಕೆಲವು ಸಮಯದಿಂದ ಬೇಡಿಕೆ ಕಡಿಮೆಯಾಗಿದೆ. ಇದರಿಂದ ಮೀನು ರಫ್ತು ಸಂಸ್ಥೆಗಳು ಬಂಗುಡೆ ನಿರ್ಯಾತ ಪ್ರಮಾಣವನ್ನು

> ಬಂಗುಡೆಗಳಿಗೆ ಅವುಗಳ ಗಾತ್ರ ಮತ್ತು ಗುಣಮಟ್ಟವನ್ನು ಅನುಸರಿಸಿ ಬೆಲೆ ಇರುತ್ತದೆ. ಪಶ್ಚಿಮ ಕರಾವಳಿಯಲ್ಲಿ ಸಿಕ್ಕಿದ ಬಂಗುಡೆಗಳಿಗೆ ಮುಖ್ಯವಾಗಿ ಚೀನ ಅತೀ ದೊಡ್ಡ ಮಾರುಕಟ್ಟೆ ಯಾಗಿದೆ. ಉಳಿದಂತೆ ಬ್ಯಾಂಕಾಕ್, ಥ್ರಾಲಂಡ್, ವಿಯೆಟ್ನಾಂ ಮೊದಲಾದೆಡೆಗೆ ರಫ್ತಾಗುತ್ತದೆ ಎನ್ನುತ್ತಾರೆ ಮೀನುಗಾರರು.

ಕಡಿಮೆ ಮಾಡಿವೆ.

ಹಾಗಾಗಿ ಬಂಗುಡೆ ಮೀನುಗಳು ಸ್ಥಳೀಯ ಮಾರುಕಟ್ಟೆಗೇ ಬರುತ್ತಿದೆ ಎನ್ನುತ್ತಾರೆ ಮೀನುಗಾರರು.

ಮೀನುಗಾರರಿಗೆ ನಷ್ಟ: ಕರಾವಳಿಯ ಮೀನುಗಾರರಿಗೆ ಸಾಮಾನ್ಯವಾಗಿ ಬಂಗುಡೆ ಮೀನು ಹೆಚ್ಚು ಸಿಗುತ್ತದೆ. ಇದಕ್ಕೆ ಉತ್ತಮ ಧಾರಣೆ ಇದ್ದರಷ್ಟೇ ಅನುಕೂಲ. ಧಾರಣೆ ಇಲ್ಲದೆ ಬೋಟ್ ಮಾಲಕರಿಗೆ ನಷ್ಟವಾಗುತ್ತಿದೆ. ಡೀಸೆಲ್‌ಗೆ ಹಾಕಿದ ಹಣವೂ ವಾಪಸು ಬರುತ್ತಿಲ್ಲ ಎನ್ನುತ್ತಾರೆ ಮೀನುಗಾರ ಮುಖಂಡ, ಪರ್ಸಿನ್ ಮೀನುಗಾರರ ಸಂಘದ ಮಾಜಿ ಅಧ್ಯಕ್ಷ ಮೋಹನ್ ಬೆಂಗ್ರೆ.

ಅತಿಕ್ರಮಣ ನೆಪದಲ್ಲಿ ದೌರ್ಜನ್ಯ; ತುಷ್ಟಿಕರಣ

• ಉದಯವಾಹಿನಿ, ಮುದ್ದೇಬಿಹಾಳ

ಬಡವರು, ದಲಿತರು, ರೈತರು, ಹಿಂದುಗಳ ಮೇಲೆ ದೌರ್ಜನ್ಯ ನಡೆಯುತ್ತಿದೆ. ಸ್ಥಳೀಯ ಶಾಸಕರು, ಕಳೆದ ಚುನಾವಣೆಯಲ್ಲಿ ನನ್ನ ವಿರುದ್ಧ ಕೆಲಸ ಮಾಡಿದ್ದ ಕಾಂಗ್ರೇಸ್ ಮುಖಂಡರು ಇದರ ವಿರುದ್ಧ ಧ್ವನಿ ಎತ್ತದೆ ತುಷ್ಟೀಕರಣ ಪಾಲಿಸುತ್ತಿದ್ದಾರೆ ಎಂದು ಮಾಜಿ ಶಾಸಕ, ಬಿಜೆಪಿ ರೈತ ಮೋರ್ಚಾ ರಾಜ್ಯಾಧ್ಯಕ್ಷ ಎ.ಎಸ್.ಪಾಟೀಲ ನಡಹಳ್ಳಿ ವಾಗ್ದಾಳಿ ನಡೆಸಿದರು. ರೈತರ ಹೋರಾಟದಲ್ಲಿ ಭಾಗವಹಿಸಲು ಬಂದಿದ್ದ ಅವರು, ಪಟ್ಟಣದಲ್ಲಿ ಬಡವರು, ದಲಿತರು, ಹಿಂದು ಗಳ ಮೇಲೆ ದೌರ್ಜನ್ಯ ನಡೆಯುತ್ತಿದೆ.

ಅತಿಕ್ರಮಣ ತೆರವು ನೆಪದಲ್ಲಿ ಧ್ವನಿ ಇಲ್ಲದವರಿಗೆ ತೊಂದರೆ ಕೊಡಲಾಗುತ್ತಿದೆ. ಬಡವರು, ದಲಿತರಿಗೆ ಒಂದು ನ್ಯಾಯ, ಮತ್ತೊಂದು ಸಮುದಾಯಕ್ಕೆ ಇನ್ನೊಂದು ನ್ಯಾಯದಂತೆ ನಡೆದುಕೊಳ್ಳಲಾಗುತ್ತಿದೆ ಎಂದರು.ಕೆರೆ, ಶಾಲೆ, ಸ್ಮಶಾನ ಅತಿಕ್ರಮಣ ತೆರವು ಗೊಳಿಸುವಂತೆ ಸುಪ್ರೀಂಕೋರ್ಟ ಆದೇಶವಿದ್ದರೂ ತಹಶೀಲ್ದಾರ್, ಪುರಸಭೆ ಮುಖ್ಯಾಧಿಕಾರಿ, ಪೊಲೀಸ್ ಅಧಿಕಾರಿಗಳು ಮೌನಕ್ಕೆ ಶರಣಾಗಿದ್ದಾರೆ. ಪಟ್ಟಣದ ಇಂದಿರಾ ವೃತ್ತದಲ್ಲಿರುವ ಕೆರೆಯನ್ನು ಯಾರು ಒತ್ತುವರಿ ಮಾಡಿಕೊಂಡಿದ್ದಾರೆ. ಶಿರೋಳ ರಸ್ತೆ ಅತಿಕ್ರಮಿಸಿ ಯಾರು ಮನೆಗಳನ್ನು ಕಟ್ಟಿಕೊಂಡಿದ್ದಾರೆ. ಹಿಂದು ಗಳ 10 ಎಕರೆ ಸ್ಮಶಾನವನ್ನು ಯಾರು ಅತಿಕ್ರಮಿಸಿದ್ದಾರೆ ಅನ್ನೋದು ಗೊತ್ತಿದ್ದರೂ ಯಾವುದೇ ಕ್ರಮ ಕೈಕೊಳ್ಳುತ್ತಿಲ್ಲ ಎಂದು ದೂರಿದರು. ಕಿಲ್ಲಾದಲ್ಲಿ ಕೋಟೆಗೋಡೆ ಹತ್ತಿದ ಹಳೇಯ ದನದ ಕೊಂಡವಾಡೆ ಜಾಗದಲ್ಲಿ ಮದರಸಾ ಕಟ್ಟಿಸಲಾ ಗುತ್ತಿದೆ. ಮುಖ್ಯಾಧಿಕಾರಿಯೇ ದೌರ್ಜನ್ಯ ನಡೆಸಲು, ತುಷ್ಟೀಕರಣ ನೀತಿ ಅನುಸರಿಸಲು ಮುಂದಾದರೆ ಕುರ್ಚಿಯಿಂದ ಇಳಿಸೋದು ಹೇಗಂತ ಗೊತ್ತಿದೆ. ತಹಶೀಲ್ದಾರ್, ಮುಖ್ಯಾಧಿಕಾರಿ ಹಿಂದೆ ಎಂಎಲ್‌ಎ ಇರುವುದೂ ಗೊತ್ತಿದೆ.

> ಇಂದಿರಾನಗರದಲ್ಲಿ ದಲಿತರು ಹಾಕಿಕೊಂಡಿದ್ದ ಶೆಡ್, ತಹಶೀಲ್ದಾರ್ ಕಚೇರಿ ಹತ್ತಿರ ಬಡವರ ಅಂಗಡಿಗಳು, ಪಟ್ಟಣದ ರಸ್ತೆ ಪಕ್ಕದಲ್ಲಿನ ಡಬ್ಬಾ ಅಂಗಡಿ, ರಸ್ತೆ ಪಕ್ಕದಲ್ಲಿ ತರಕಾರಿ ವ್ಯಾಪಾರ ಮಾಡುವವರು ಸೇರಿ ಕೆಳವರ್ಗದವರ ಮೇಲೆ ದೌರ್ಜನ್ಯ ನಡೆಸಿರುವ ಅಧಿಕಾರಿಗಳು ಇಂದಿರಾ ವೃತ್ತ, ಶಿರೋಳ ರಸ್ತೆ, ಕೆರೆ ಅತಿಕ್ರಮಣದಾರರನ್ನು ತೆರವುಗೊಳಿಸುವ ಯಾವುದೇ ಪ್ರಯತ್ನ ನಡೆಸಿಲ್ಲ. ಇದು ಏನನ್ನು ತೋರಿಸುತ್ತದೆ ಅನ್ನೋದನ್ನು ಜನ ಅರ್ಥ ಮಾಡಿಕೊಳ್ಳಬೇಕು
– ಎ.ಎಸ್.ಪಾಟೀಲ ನಡಹಳ್ಳಿ, ಬಿಜೆಪಿ ರೈತ ಮೋರ್ಚಾ ರಾಜ್ಯಾಧ್ಯಕ್ಷ

ಮುಸ್ಲೀಮರು ಶಾಸಕರ ದತ್ತುಪುತ್ರರಾಗಿರುವುದರಿಂದ ಅವರನ್ನು ಮುಟ್ಟೋ ದಮ್ ನಿಮಗಿಲ್ಲದಂತಾಗಿದೆ ಎಂದು ಕುಟುಕಿದರು.

ನಾನು ಶಾಸಕನಾಗಿದ್ದಾಗ ಬೆಂಗಳೂರು ಬೇಕರಿ ಪಕ್ಕ ಪುಢಾರಿಯೊಬ್ಬ ರಸ್ತೆ ಮೇಲೆ ಅಂಗಡಿ ಹಾಕಿದ್ದ. ಇದನ್ನು ಪ್ರಶ್ನಿಸಿದ ರಾವುಸಾಬ್ ದೇಸಾಯಿ ಎನ್ನುವವರ ಮೇಲೆ ದಬ್ಬಾಳಿಕೆ ಮಾಡಿದ್ದ. ಸತ್ಯ ಇದ್ದರೆ ಕಾನೂನು ಪ್ರಕಾರ ಕ್ರಮ ಕೈಕೊಳ್ಳುವಂತೆ ಸಿಪಿಐಗೆ ಹೇಳಿದ್ದೆ. ಆಗ ಇದೇ ಶಾಸಕರು ಆ ಪುಢಾರಿಯನ್ನು ರಕ್ಷಿಸಲು ಪೊಲಿಸ್ ಠಾಣೆಗೆ ಬಂದಿದ್ದರು. ಬಡವರು ಅಂಗಡಿ ಹಾಕೊಂಡ್ರೆ ಏನಾಯ್ತು ಅಂತ ಕೇಳಿದ್ದರು. ಇವತ್ತಿಗೂ ಅವನ ಅಂಗಡಿ ತೆಗೆದಿಲ್ಲ. ಆದರೆ ಸಾವಿರಾರು ಬಡಜನರ ಅಂಗಡಿ ಒಡೆದು ಹಾಕ್ತಿದ್ದೀರಲ್ಲ ನಾಚಿಕೆ ಆಗೊಲ್ವೆ ನಿಮಗೆ. ಇವತ್ಯಾಕೆ ನೀವು ಪೊಲೀಸ್ ಠಾಣೆಗೆ ಬರ್ತಿಲ್ಲ, ಬಡವರ ಪರ ಯಾಕೆ ನಿಲ್ತಿಲ್ಲ ಎಂದು ಚಾಟಿ ಬೀಸಿದರು. ಬಜಾರನ ಕೆಲವು ಪುಢಾರಿಗಳೇ ನನ್ನ ವಿರುದ್ಧ ಅಪಪ್ರಚಾರ ಮಾಡಿ ಕಾಂಗ್ರೆಸ್ ಪರ ಓಟ್ ಹಾಕಿಸಿದ್ದರು.

ಈಗ ಬಡವರ ಮೇಲೆ ಅನ್ಯಾಯ ಆಗ್ತಿದೆ. ಅವರೆಲ್ಲ ಎಲ್ಲಿ ಮಲಕ್ಕೊಂಡಿದ್ದಾರೆ. ನಡಹಳ್ಳಿ ಅಧಿಕಾರಕ್ಕೆ ಬಂದ್ರೆ ಬಜಾರ್ ಕಿತ್ತಿಸ್ತಾರೆ, ಅದು ಕಿತ್ತಿಸ್ತಾರೆ, ಇದು ಕಿತ್ತಿಸ್ತಾರೆ ಎಂದು ಅಪಪ್ರಚಾರ ಮಾಡಿದ್ರಲ್ಲ. ಈಗ ಬಜಾರ್ ಮಾರ್ಕೆಟ್ ಕಿತ್ತಿಸಿದ್ದು ಯಾರು ಎಂದು ಬಿಸಿ ಮುಟ್ಟಿಸಿದರು. ಶಿವಪುರ ಎಂಬಾತ ಕಾಂಗ್ರೇಸ್ ಲೀಡರ್ ಅವನ ವಾರ್ಡನಲ್ಲಿ 30-40 ಜನರಿಗೆ ಶೆಡ್ಡು ಹಾಕಿಸಿದ್ದ. ಅವನ ಮೇಲೆ ಬಹಳಷ್ಟು ಕಂಪ್ಲೆಂಟ್ ನನ್ನತ್ರ ಬಂದಿದ್ದವು. ಅವನಿಗೇನು ತೊಂದರೆ ಕೊಡ್ಲಿಲ್ಲ. ಹೋಗ್ಲಿ ಬಿಡು ಬಡವರಿಗೆ ಅನುಕೂಲ ಆಗ್ತಿದೆ ಎಂದು ಸುಮ್ಮನಿದ್ದೆ. ಈಗೇನಾಯ್ತು. 30-40 ಜನರ ಶೆಡ್ ಒಡೆದು ಹಾಕಿದರಲ್ಲ ಎಂದು ಕುಟುಕಿದರು.

ಹೆದ್ದಾರಿ ದ್ವಿಪಥಗೊಳಿಸಲು 343.74

ದಿನ ಭವಿಷ್ಯ

ರಾಹುಕಾಲ	ಸಾಯಂಕಾಲ	04:30 ರಿಂದ 06:00
ಗುಳಿಕ ಕಾಲ	ಮಧ್ಯಾಹ್ನ	03:00 ರಿಂದ 04:30
ಯಮಗಂಡ ಕಾಲ	ಮಧ್ಯಾಹ್ನ	12:00 ರಿಂದ 01:30

ಮೇಷ ಅನಾವಶ್ಯಕ ಉದ್ವೇಗ ಮತ್ತು ಚಿಂತೆ ನಿಮ್ಮ ಜೀವನದ ರಸ ಹೀರಬಹುದು ಮತ್ತು ನಿಮ್ಮನ್ನು ಖಾಲಿಯಾಗಿಸಬಹುದು. ಇವುಗಳನ್ನು ತೊಡೆದುಹಾಕದಿದ್ದಲ್ಲಿ ಅವು ಕೇವಲ ನಿಮ್ಮ ಸಮಸ್ಯೆಯನ್ನು ಉಲ್ಬಣಗೊಳಿಸುತ್ತವೆ.

ವೃಷಭ ನಿಮ್ಮ ದೈಹಿಕ ಆರೋಗ್ಯವನ್ನು ಸುಧಾರಿಸಲು ಸಮತೋಲಿತ ಆಹಾರ ತೆಗೆದುಕೊಳ್ಳಿ ಇಂದು ಯಾವುದೇ ವಿರುದ್ಧ ಲಿಂಗದ ಸಹಾಯದಿಂದ ವ್ಯಾಪರ ಅಥವಾ ಉದ್ಯೋಗದಲ್ಲಿ ಆರ್ಥಿಕ ಲಾಭವನ್ನು ಪಡೆಯುವ ಸಾಧ್ಯತೆ ಇದೆ.

ಮಿಥುನ ಇಂದು ಆರೋಗ್ಯ ಪರಿಪೂರ್ಣವಾಗಿರುತ್ತದೆ. ನಿಮ್ಮ ಹಳೆಯ ಯಾವುದೇ ರೋಗ ಇಂದು ನಿಮ್ಮನ್ನು ಕಾಡಬಹುದು. ಇದರ ಕಾರಣದಿಂದ ನೀವು ಆಸ್ಪತ್ರೆಗೂ ಹೋಗಬೇಕಾಗಬಹುದು.

ಕರ್ಕಾಟಕ ಈ ದಿನ ತುಂಬಾ ಅದ್ಭುತವಾಗಬಹುದು – ಸ್ನೇಹಿತರು ಅಥವಾ ಸಮಬಂಧಿಕರೊಂದಿಗೆ ಹೊರಗಡೆ ಹೋಗಿ ಚಲನಚಿತ್ರವನ್ನು ನೋಡಲು ಸಹ ಯೋಜಿಸಬಹುದು.

ಸಿಂಹ ನಿಮ್ಮ ಸಂಗಾತಿಯ ಒಂದು ಕೆಲಸದ ಬಗ್ಗೆ ನಿಮಗೆ ಇರುಸುಮುರುಸಾಗಬಹುದು. ನಂತರ ಇದು ಒಳ್ಳೆಯದಕ್ಕೇ ಆಯಿತೆಂದು ಅರಿವಾಗುತ್ತದೆ. ತಮಗಾಗಿ ಒಳ್ಳೆಯ ಸಮಯವನ್ನು ಹೊಂದಿದ್ದರೆ ಚೆನ್ನಾಗಿರುತ್ತದೆ.

ಕನ್ಯಾ ನಿಮ್ಮ ಅತ್ಯಂತ ಪ್ರೀತಿಯ ಕನಸು ನನಸಾಗುತ್ತದೆ. ಆದರೆ ತುಂಬಾ ಸಂತೋಷ ಸ್ವಲ್ಪ ಸಮಸ್ಯೆಗಳನ್ನು ಉಂಟುಮಾಡಬಹುದಾದ್ದರಿಂದ ನಿಮ್ಮ ಉತ್ಸಾಹವನ್ನು ನಿಯಂತ್ರಣದಲ್ಲಿರಿಸಿಕೊಳ್ಳಿ.

ತುಲಾ ನಿಮ್ಮ ಮನೆಯ ಕರ್ತವ್ಯಗಳನ್ನು ನೀವು ನಿರ್ಲಕ್ಷಿಸಿದ್ದಲ್ಲಿ ನಿಮ್ಮ ಜೊತೆಗಿರುವ ಯಾರಾದರೂ ಸಿಟ್ಟಾಗಬಹುದು. ತನ್ನ ಪ್ರೀತಿಪಾತ್ರರಿಂದ ದೂರವಿರುವ ಜನರು, ಇಂದು ಅವರ ಪ್ರೀತಿಪಾತ್ರರನ್ನು ನೆನಪಿಸಿಕೊಳ್ಳಬಹುದು.

ವೃಶ್ಚಿಕ ಒಂದು ಸಾಮಾನ್ಯ ವೈವಾಹಿಕ ಜೀವನದಲ್ಲಿ, ಈ ದಿನ ಒಂದು ರುಚಿಕರವಾದ ಸಿಹಿಯಾಗಿ ಕೆಲಸ ಮಾಡುತ್ತದೆ. ತಾಯಿಯೊಂದಿಗೆ ಇಂದು ನೀವು ನಿಮ್ಮ ಉತ್ತಮ ಸಮಯವನ್ನು ಕಳೆಅಯಬಹದು.

ಧನಸ್ಸು ನಿಮ್ಮ ದೈಹಿಕ ರಚನೆಯನ್ನು ಕಾಯ್ದುಕೊಳ್ಳಲು ನೆರವಾಗುವ ಕೆಲವು ಕ್ರೀಡಾ ಚಟುವಟಿಕೆಗಳನ್ನು ನೀವು ಇಂದು ಆನಂದಿಸಬಹುದು. ನಿಮ್ಮ ನೆರೆ ಹೊರೆಯವರು ಇಂದು ನಿಮ್ಮ ಹತ್ತಿರ ಹಣ ಸಾಲ ಕೇಳಲು ಬರಬಹುದು.

ಮಕರ ಮನೆಯಲ್ಲಿ ಕೆಲಸ ಮಾಡುವಾಗ ವಿಶೇಷ ಎಚ್ಚರ ವಹಿಸಿ. ಮನೆ ಬಳಕೆಯ ವಸ್ತುಗಳ ಯಾವುದೇ ಅಸಡ್ಡೆಯ ಬಳಕೆ ನಿಮಗೆ ಸಮಸ್ಯೆ ಉಂಟುಮಾಡಬಹುದು. ಇಂದು ಹಣ ನಿಮ್ಮ ಕೈಯಲ್ಲಿ ಉಳಿಯುದಿಲ್ಲ.

ಕುಂಭ ಇಂದಿನ ದಿನ, ನಿಮ್ಮ ಬಳಿ ಸಾಲವನ್ನು ಕೇಳುವ ಮತ್ತು ಅದನ್ನು ಹಿಂತಿರುಗಿಸದೆ ಇರುವಂತಹ ಸ್ನೇಹಿತರಿಂದ ನೀವು ನಿಮ್ಮನ್ನು ತಪ್ಪಿಸುವ ಅಗತ್ಯವಿದೆ. ಸಂಬಂಧಿಗಳು / ಸ್ನೇಹಿತರು ಒಂದು ಅದ್ಭುತ ಸಂಜೆಗಾಗಿ ಬರುತ್ತಾರೆ.

ಮೀನ ನೀವು ಇದು ಒಳ್ಳೆಯ ಆರೋಗ್ಯ ಹೊಂದಿರುವುದರಿಂದ ಅದು ನಿಮಗೆ ಯಶಸ್ಸು ನೀಡುವ ಸಾಧ್ಯತೆಯಿದೆ. ಆದರೆ ನಿಮ್ಮ ಶಕ್ತಿಯನ್ನು ನಾಶಪಡಿಸುವ ಎಲ್ಲವನ್ನೂ ನೀವಿಂದು ತಪ್ಪಿಸಬೇಕು.

ಶ್ರೀರಾಮುಲು ಭ್ರಷ್ಟಾಚಾರ ಬಿಚ್ಚಿಟ್ಟ ಸಿಎಂ ಸಿದ್ದರಾಮಯ್ಯ

● ಜನರ ಮೃತದೇಹಗಳ ಹೆಸರಲ್ಲೂ ಭ್ರಷ್ಟಚಾರ ನಡೆಸಿದ ಬಿಜೆಪಿಯವರನ್ನು ಯಾವ ದೇವರೂ ಕ್ಷಮಿಸಲ್ಲ

• ಉದಯವಾಹಿನಿ, ಬಳ್ಳಾರಿ

ಬಿಜೆಪಿ ಮುಖ್ಯಮಂತ್ರಿಯಾಗಿದ್ದ ಯಡಿಯೂರಪ್ಪ ಮತ್ತು ಆರೋಗ್ಯ ಮಂತ್ರಿ ಶ್ರೀ ರಾಮುಲು ಇಬ್ಬರೂ ಕೋವಿಡ್ ಸಂದರ್ಭದಲ್ಲಿ ಚೀನಾದಿಂದ ಪಿಪಿಇ ಕಿಟ್ ತರಿಸಿ ಭ್ರಷ್ಟಾಚಾರ ನಡೆಸಿದ್ದಾರೆ.

ಇವರ ವಿರುದ್ಧ ಭ್ರಷ್ಟಾಚಾರ ನಿಗ್ರಹ ಕಾಯ್ದೆ ಅಡಿಯಲ್ಲಿ ಕ್ರಮ ಕೈಗೊಳ್ಳುವ ಅಗತ್ಯವಿದೆ ಎಂದು ನ್ಯಾ.ಮೈಕೆಲ್ ಕುನ್ಹಾ ಅವರ ತನಿಖಾ ಆಯೋಗ ಪತ್ತೆ ಹಚ್ಚಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದೆ.

ಚೀನಾದಿಂದ ಪಿಪಿಇ ಕಿಟ್ ತರಿಸಿ ಭ್ರಷ್ಟಾಚಾರ

ಸಂಡೂರು ವಿಧಾನಸಭಾ ಕ್ಷೇತ್ರದ ಮೆಟ್ರಿಕಿ ಗ್ರಾಮದಲ್ಲಿ ಬೃಹತ್ ಜನಸಮಾವೇಶವದಲ್ಲಿ ಮಾತನಾಡಿದ ಸಿದ್ದರಾಮಯ್ಯ, ಕೋವಿಡ್ ಸಂದರ್ಭದಲ್ಲಿ ಇಡೀ ರಾಜ್ಯದ ಜನತೆ ಭಯ, ಆತಂಕದಲ್ಲಿ ದೇವರ ಪ್ರಾರ್ಥನೆ ಮಾಡುತ್ತಿದ್ದಾಗ ಬಿಜೆಪಿ ಸರ್ಕಾರ ಮತ್ತು ಸಚಿವ ಶ್ರೀರಾಮುಲು ಅವರು ಹಣ ಲೂಟಿ ಮಾಡುವುದರಲ್ಲಿ ಮುಳುಗಿದ್ದರು. ನಮ್ಮ ಜನರ ಮೃತದೇಹಗಳ ಹೆಸರಲ್ಲೂ ಭ್ರಷ್ಟಚಾರ ನಡೆಸಿದ ಬಿಜೆಪಿ ಯವರನ್ನು ಯಾವ ದೇವರೂ ಕ್ಷಮಿಸಲ್ಲ. ನೀವೂ ಕ್ಷಮಿಸಬೇಡಿ ಎಂದು ಜನರಿಗೆ ಕರೆ ನೀಡಿದರು.

ಬಿಜೆಪಿ ಶ್ರೀಮಂತರ ಮತ್ತು ಮೇಲ್ವರ್ಗದವರ ಪಕ್ಷ. ಕಾಂಗ್ರೇಸ್ ಜಾರಿ ಮಾಡುವ ಎಲ್ಲಾ ಬಡವರ ಪರವಾದ ಕಾರ್ಯಕ್ರಮಗಳನ್ನು ವಿರೋಧಿಸುತ್ತದೆ.

ಅಪಪ್ರಚಾರ ಮಾಡುತ್ತದೆ. ಆಗ ಇಂದಿರಾಗಾಂಧಿಯವರ 20 ಅಂಶಗಳ ಕಾರ್ಯಕ್ರಮಗಳನ್ನು ಬಿಜೆಪಿ ವಿರೋಧಿಸಿ ಅಪಪ್ರಚಾರ ಮಾಡಿತ್ತು. ಈಗ ನಮ್ಮ ಸರ್ಕಾರದ ಐದು ಗ್ಯಾರಂಟಿಗಳನ್ನು ವಿರೋಧಿಸಿ ಅಪಪ್ರಚಾರ ಮಾಡುತ್ತಿದೆ. ಇದೇ ಬಿಜೆಪಿಯ ಜಾಯಮಾನ ಎಂದು ಟೀಕಿಸಿದರು.

ಬಿಜೆಪಿ ರೈತರು, ಕಾರ್ಮಿಕರು, ಮಹಿಳೆಯರು, ಯುವಕರು, ವಿದ್ಯಾರ್ಥಿಗಳು, ದಲಿತರು, ಹಿಂದುಳಿದವರ ಪರವಾಗಿ ಒಂದೇ ಒಂದು ಕಾರ್ಯಕ್ರಮ

ಉದಯವಾಹಿನಿ ಚಿತ್ರ

ಕೊಟ್ಟಿದ್ದರೆ ನೆನಪಿಸಿಕೊಂಡು ಹೇಳಿ ನೋಡೋಣ. ಯಾವ ಕಾರ್ಯಕ್ರಮವನ್ನೂ ಕೊಟ್ಟಿಲ್ಲ. ಅದಕ್ಕೇ ನಿಮಗೆ ನೆನಪಾಗ್ತಿಲ್ಲ.

ಸಂಡೂರಿನಲ್ಲಿರುವ ರಸ್ತೆ, ಶಾಲೆ, ವಸತಿ ಶಾಲೆ, ಅಂಗನವಾಡಿ, ಆಸ್ಪತ್ರೆ, ನೀರು, ನೀರಾವರಿ ಎಲ್ಲವೂ ಆಗಿರುವುದು ಸಂತೋಷ್ ಲಾಡ್ ಮತ್ತು ತುಕಾರಾಮ್ ಅವರ ಅವಧಿಯಲ್ಲಿ. ಬಿಜೆಪಿಯವರು ಕೇವಲ ಸುಳ್ಳು ಹೇಳಿಕೊಂಡು, ಜನರ ನಡುವೆ ದ್ವೇಷ ಬಿತ್ತುತ್ತಾ ರಾಜಕಾರಣ ಮಾಡುತ್ತಿದ್ದಾರೆ ಎಂದರು. ಇನ್ನೂ ಈ ವೇಳೆ ಕಾರ್ಮಿಕ ಸಚಿವ ಸಂತೋಷ್ ಲಾಡ್ ಅವರು ಮಾತನಾಡಿ, 78 ವರ್ಷದ ಸಿದ್ದರಾಮಯ್ಯ ಅವರು 28 ವರ್ಷದ ಯುವಕನ ರೀತಿಯಲ್ಲಿ ದಿನಕ್ಕೆ 12-14 ಗಂಟೆ ಕೆಲಸ ಮಾಡುತ್ತಿದ್ದಾರೆ. ಬೆಂಗಳೂರಿನಲ್ಲಿ ಇದ್ದಾಗಲೂ ದಿನಕ್ಕೆ ಏಳು-ಎಂಟು ಅಧಿಕಾರಿಗಳ ಸಭೆ ನಡೆಸ್ತಾರೆ ಎಂದು ಹೇಳಿದರು.

● ಮೂರು ದಿನಗಳಿಂದ ಬೆಳಗ್ಗೆ 10 ಗಂಟೆಯಿಂದ ರಾತ್ರಿ 10 ಗಂಟೆವರೆಗೂ ಸಂಡೂರು ಕ್ಷೇತ್ರದಲ್ಲೇ , ಸಂಡೂರು ಜನರ ಮನೆ ಬಾಗಿಲಿಗೇ ಬಂದು ಮತ ಕೇಳುತ್ತಿದ್ದಾರೆ. ನಮ್ಮ ತಂದೆ ಸಮಾನರಾದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅನ್ನಪೂರ್ಣಮ್ಮ ಅವರಿಗೆ ಆಶೀರ್ವಾದ ಮಾಡಿ ಅಂತ ಕೇಳುತ್ತಿದ್ದಾರೆ. ಇವರ ಮಾತು ನೆರವೇರಿಸಿ ಅನ್ನಪೂರ್ಣಮ್ಮ ಅವರನ್ನು ಗೆಲ್ಲಿಸಿ. ಸಿದ್ದರಾಮಯ್ಯ ಅವರ ವಿರುದ್ಧ ಕೃತಕ ಪ್ರಕರಣ ಸೃಷ್ಟಿಸಿ ತೊಂದರೆ ಕೊಡುತ್ತಿದ್ದಾರೆ. ಇದಕ್ಕೆ ನಾವು-ನೀವು ಸೇರಿ ಬಿಜೆಪಿಗೆ ಸರಿಯಾದ ಪಾಠ ಕಲಿಸೋಣ. ಅನ್ನಪೂರ್ಣಮ್ಮ ಅವರನ್ನು ಗೆಲ್ಲಿಸಿ ಬಿಜೆಪಿಗೆ ತಕ್ಕ ಪಾಠ ಕಲಿಸೋಣ ಎಂದು ಹೇಳಿದರು –ಮುಖ್ಯಮಂತ್ರಿ ಸಿದ್ದರಾಮಯ್ಯ

ಅಭಿವೃದ್ಧಿಗೆ ಬೆಂಬಲ ನೀಡಿ

ಬಿಜೆಪಿ ಮುಖ್ಯಮಂತ್ರಿಗಳಾದ ಯಡಿಯೂರಪ್ಪ ಮತ್ತು ಆರೋಗ್ಯ ಮಂತ್ರಿ ಶ್ರೀರಾಮುಲು ಚೀನಾದಿಂದ ಪಿಪಿಇ ಕಿಟ್ ತರಿಸಿ ಭ್ರಷ್ಟಾಚಾರ ನಡೆಸಿದ್ದಾರೆ. ಇವರ ವಿರುದ್ಧ ಭ್ರಷ್ಟಾಚಾರ ನಿಗ್ರಹ ಕಾಯ್ದೆ ಅಡಿಯಲ್ಲಿ ಕ್ರಮ ಕೈಗೊಳ್ಳಿ ಎಂದು ನ್ಯಾ.ಕುನ್ಹಾ ಅವರ ತನಿಖಾ ಆಯೋಗ ಪತ್ತೆ ಹಚ್ಚಿದೆ. ಹಿಂದೆ ಜನಾರ್ದನರೆಡ್ಡಿಯವರ ಟೀಮು ನಡೆಸಿದ್ದ ಭ್ರಷ್ಟಾಚಾರವನ್ನು ಲೋಕಾಯುಕ್ತ ಸಂತೋಷ್ ಹೆಗ್ಡೆಯವರು ಬಯಲಿಗೆ ಎಳೆದಿದ್ದರು. ಇವರು ಅಧಿಕಾರಕ್ಕೆ ಬರೋದೇ ಲೂಟಿ ಮಾಡೋದಕ್ಕೆ ಎಂದರು. ಆದ್ದರಿಂದ ಸಂಡೂರಿನಲ್ಲಿ ಅನ್ನಪೂರ್ಣ ತುಕಾರಾಮ್ ಅವರನ್ನು ಗೆಲ್ಲಿಸಿ ಅಭಿವೃದ್ಧಿಗೆ ನಿಮ್ಮ ಬೆಂಬಲ ನೀಡಿ ಎಂದರು.

ಆರೋಗ್ಯ ಕೇಂದ್ರದಿಂದ ಯೋಗ ತರಬೇತಿ ಮತ್ತು ಪ್ರಚಾರ ಜಾಥಾ

• ಉದಯವಾಹಿನಿ, ಚಿತ್ರದುರ್ಗ

ಚಿತ್ರದುರ್ಗ ತಾಲ್ಲೂಕಿನ ಹಿರೇಗುಂಟದೂರು ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ರಾಷ್ಟ್ರೀಯ ಆಯುಷ್ಮಾನ್ ಆರೋಗ್ಯ ಅಭಿಯಾನದ ಅಡಿಯಲ್ಲಿ ಉಚಿತ ಯೋಗ ಚಿಕಿತ್ಸಾ ಸೌಲಭ್ಯ ಪ್ರಾರಂಭಿಸಿದ್ದು ಅದರ ಪ್ರಚಾರದ ಅಂಗವಾಗಿ ಜಿಲ್ಲಾ ಪಂಚಾಯಿತಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಚಿತ್ರದುರ್ಗ ಇವರುಗಳ ಸಹಯೋಗದಲ್ಲಿ ದಿನಾಂಕ:9/11/2024ರ ಶನಿವಾರ ಗ್ರಾಮದ ತರಳಬಾಳು ಶ್ರೀ ದ್ಯಾಮಲಾಂಬಿಕಾ ಪ್ರೌಢಶಾಲಾ ಮಕ್ಕಳಿಗೆ ಉಚಿತ ಯೋಗ ತರಬೇತಿ ಹಮ್ಮಿಕೊಳ್ಳಲಾಗಿತ್ತು ಹಾಗೂ ಇದೇ ಸಂದರ್ಭದಲ್ಲಿ ಗ್ರಾಮದ ಬೀದಿಗಳಲ್ಲಿ ಶಾಲಾ ಮಕ್ಕಳು ಹಾಗೂ ಶಿಕ್ಷಕರ ಸಹಯೋಗದಲ್ಲಿ ಯೋಗ ಪ್ರಚಾರ ಜಾಥಾ ಹಮ್ಮಿಕೊಳ್ಳಲಾಗಿತ್ತು. ಯೋಗ ತರಬೇತಿ ಮತ್ತು ಯೋಗ ಪ್ರಚಾರ ಜಾತದ ನೇತೃತ್ವ ವಹಿಸಿ ಮಾತನಾಡಿದ

ಉದಯವಾಹಿನಿ ಚಿತ್ರ

ಯೋಗ ತರಬೇತಿದಾರ ರವಿ ಕೆ ಅಂಬೆಕರ್ ಮಾತನಾಡಿ ಅಂತರಾಷ್ಟ್ರೀಯ ಯೋಗ ದಿನಾಚರಣೆಯ ಬಳಿಕ ಯೋಗಾಭ್ಯಾಸ ಜಾಗತಿಕವಾಗಿ ಮಾತ್ರವಲ್ಲದೆ , ಭಾರತದಲ್ಲೂ ಹೆಚ್ಚು ಪ್ರಾಮುಖ್ಯ ಪಡೆಯಲಾರಂಭಿಸಿದೆ.

ಉಚಿತ ಯೋಗ ತರಬೇತಿ

ಅಧಿಕ ರಕ್ತದೊತ್ತಡ, ಮಧು ಮೇಹ, ಕ್ಯಾನ್ಸರ್ ಮತ್ತಿತರ ಅಸಾಂಕ್ರಾಮಿಕ ಕಾಯಿಲೆಗಳನ್ನು ತಡೆಯುವುದಕ್ಕಾಗಿ ಉಚಿತ ಯೋಗಾಭ್ಯಾಸವನ್ನು ರಾಜ್ಯದ ಎಲ್ಲಾ ಪ್ರಾಥಮಿಕ ಆರೋಗ್ಯ ಕೇಂದ್ರ (ಪಿಎಚ್‌ಸಿ) ಗಳಲ್ಲಿ ಆರಂಭಿಸಿರುವುದು ಈ ನಿಟ್ಟಿನಲ್ಲಿ ಹೊಸ ಹೆಜ್ಜೆ. ಅದೇ ರೀತಿ ಹಿರೇಗುಂಟನೂರು ಗ್ರಾಮದ ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಗ್ರಾಮ ಸ್ಥರಿಗಾಗಿ ಉಚಿತ ಯೋಗ ತರಬೇತಿ ವಿಭಾಗ ಪ್ರಾರಂಭಿಸಲಾಗಿದೆ.

ಗ್ರಾಮಸ್ಥರು ಹೆಚ್ಚಿನ ಸಂಖ್ಯೆಯಲ್ಲಿ ಇದರ ಪ್ರಯೋಜನ ಪಡೆದುಕೊಳ್ಳಬೇಕಾಗಿದೆ ಎಂದು ತಿಳಿಸಿದರು.

ಹಿರೇಗುಂಟನೂರು ಪ್ರಾಥಮಿಕ ಆರೋಗ್ಯ ಕೇಂದ್ರದ ಯೋಗ ತರಬೇತಿದಾರ ರವಿ ಕೆ ಅಂಬೇಕರ್ ನೇತೃತ್ವ ವಹಿಸಿದ್ದ ಈ ಕಾರ್ಯಕ್ರಮದಲ್ಲಿ ಶ್ರೀ ದ್ಯಾಮಲಬಿಕಾ ಪ್ರೌಢಶಾಲೆಯ ಮುಖ್ಯೋಪಾಧ್ಯಾಯರಾದ ಧನಂಜಯ ಟಿ, ದೈಹಿಕ ಶಿಕ್ಷಕ ಪುರುಷೋತ್ತಮ ಪಿ. ಹಾಗೂ ಸದಾಶಿಕ್ಷಕರಾದ ತಿಪ್ಪೇಸ್ವಾಮಿ ಚಿಕ್ಕುರಪ್ಪನವರ ಸಿದ್ದನಗೌಡ, ವಿದ್ಯಾ ಶ್ರೀ,ಮರುಳಾಸಿದ್ದಯ್ಯ ಭಾಗವಹಿಸಿದ್ದರು.

ಹಿಮ್ಮುಖವಾಗಿ ಚಲಿಸಿ ಗ್ಯಾರೇಜ್‌ಗೆ ನುಗ್ಗಿದ ಲಾರಿ

• ಉದಯವಾಹಿನಿ ಮಣಿಪಾಲ

ಗ್ರಾನೈಟ್ ತುಂಬಿದ ಲಾರಿಯೊಂದು ರಾಷ್ಟ್ರೀಯ ಹೆದ್ದಾರಿಯಲ್ಲಿ ಹಿಮ್ಮುಖವಾಗಿ ಚಲಿಸಿ ಗ್ಯಾರೇಜ್ ಡಿಕ್ಕಿ ಹೊಡೆದ ಪರಿಣಾಮ ಹಲವು ದ್ವಿಚಕ್ರ ವಾಹನಗಳು ಜಖಂಗೊಂಡಿರುವ ಘಟನೆ ಶನಿವಾರ ಮಧ್ಯಾಹ್ನ ಕೆಳ ಪರ್ಕಳದಲ್ಲಿ ಸಂಭವಿಸಿದೆ. ಘಟನೆಯಿಂದ ಕೆಲಪರ್ಕಳದಲ್ಲಿ ಗಣಪತಿ ನಾಯಕ್ ಅವರ ಮಾಲಕತ್ವದ ಗ್ಯಾರೇಜ್ ನಲ್ಲಿ ನಿಲ್ಲಿಸಿದ್ದ ನಾಲ್ಕೈದು ದ್ವಿಚಕ್ರ ವಾಹನಗಳು ಜಖಂಗೊಂಡಿದೆ.

ಬೆಂಗಳೂರಿನಿಂದ ಗ್ರಾನೈಟ್ ತುಂಬಿಕೊಂಡು ಪರ್ಕಳದ ಹೆರ್ಗಾ ಕಡೆಗೆ ತೆರಳುತ್ತಿದ್ದ ಲಾರಿ ಕೆಳಪರ್ಕಳದ ಹಳೆ ಡಾಮರು ರಸ್ತೆಯ ಏರಿನ ಜಾಗದಲ್ಲಿ ಚಾಲಕನ ನಿಯಂತ್ರಣ ತಪ್ಪಿ ಹಿಮ್ಮುಖವಾಗಿ ಚಲಿಸಿ ಗ್ಯಾರೇಜ್ ಗೆ ನುಗ್ಗಿದೆ ಪರಿಣಾಮ ಹಲವು ದ್ವಿಚಕ್ರ ವಾಹನಗಳು


ಉದಯವಾಹಿನಿ ಚಿತ್ರ

ನುಜ್ಜುಗುಜ್ಜಾಗಿದ್ದು ಅಲ್ಲದೆ ಲಾರಿಯಲ್ಲಿದ್ದ ಗ್ರಾನೈನ್ ನೆಲಕ್ಕೆ ಬಿದ್ದಿದೆ. ಲಾರಿ ಹಿಮ್ಮುಖವಾಗಿ ಬರುತ್ತಿದ್ದಂತೆ ಗ್ಯಾರೇಜ್ ನಲ್ಲಿದ್ದವರು ಓಡಿ ತಮ್ಮ ಜೀವ ಉಳಿಸಿಕೊಂಡಿದ್ದಾರೆ. ಹೆದ್ದಾರಿ ಕಾಮಗಾರಿ ಪೂರ್ಣಗೊಳ್ಳದ ಕಾರಣ ಈ ಭಾಗದಲ್ಲಿ ಘನ ವಾಹನಗಳು ಅಪಘಾತಕ್ಕೆ ಒಳಗಾಗುತ್ತಿವೆ, ಇಲ್ಲಿನ ಏರು ಪ್ರದೇಶ ಹೊಂಡ ಗುಂಡಿಗಳಿಂದ ಕೂಡಿರುವುದರಿಂದ ಘನ ವಾಹನಗಳು ಹಿಮ್ಮುಖವಾಗಿ ಚಲಿಸಿ ಹೆಚ್ಚಿನ ಅವಘಡಗಳು ಈ ಹಿಂದೆಯೂ ಸಂಭವಿಸಿವೆ.

ವಿವಿಧ ಕಾಮಗಾರಿಗಳಿಗೆ ಭೂಮಿ ಪೂಜೆ

• ಉದಯವಾಹಿನಿ, ವಡಗೇರಾ

ವಡಗೇರಾ ತಾಲ್ಲೂಕಿನ ಬಿಳಾರ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಗೆ 4 ಕೋಣೆಗಳು ಸುಮಾರು 50 ಲಕ್ಷ ರೂಪಾಯಿಗಳಲ್ಲಿ ನಿರ್ಮಾಣ ಹಾಗೂ ತಾಲ್ಲೂಕಿನ ಕಂದಳ್ಳಿ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ 70 ಲಕ್ಷ ರೂಪಾಯಿಗಳ ವೆಚ್ಚದ ಕಾಮಗಾರಿಗಳಾದ ತಡೆಗೋಡೆ ನಿರ್ಮಾಣ ವಿದ್ಯಾರ್ಥಿಗಳಿಗೆ ಊಟದ ಕೋಣೆ ಮತ್ತು ವಿದ್ಯಾರ್ಥಿಗಳಿಗಾಗಿ ಹೈಟೆಕ್ ಶೌಚಾಲಯ ಕಟ್ಟಡದ ಕಾಮಗಾರಿಗಳ ಭೂಮಿ ಪೂಜೆಯನ್ನು ಯಾದಗಿರಿ ಮತ ಕ್ಷೇತ್ರದ ಶಾಸಕರಾದ ಚನ್ನಾರೆಡ್ಡಿ ಪಾಟೀಲ್ ತುನ್ನೂರ ಅವರು ನೆರವೇರಿಸಿ ಮಾತನಾಡಿದರು.

ಗ್ರಾಮೀಣ ಭಾಗದ ಮಕ್ಕಳ ಶಿಕ್ಷಣಕ್ಕೆ ಹೆಚ್ಚಿನ ಒತ್ತು ಸರಕಾರಿ ಕನ್ನಡ ಶಾಲೆಗಳ ಅಭಿವೃದ್ಧಿಗೆ ನಾನು ಬದ್ಧ ವಿದ್ಯಾರ್ಥಿಗಳು ಕೂಡಾ ಸರಕಾರದ ಸದುಪಯೋಗವನ್ನು ಪಡೆದುಕೊಂಡು ಉತ್ತಮವಾಗಿ ವಿದ್ಯಾಭ್ಯಾಸ ಮಾಡಿ ತಾಲ್ಲೂಕಿಗೂ ಜಿಲ್ಲೆಗೂ ಕೀರ್ತಿ ತರುವಂತೆ ಮಕ್ಕಳಿಗೆ ಕಿವಿಮಾತು ಹೇಳಿದರು. ತಾಲ್ಲೂಕಿನ ಅಭಿವೃದ್ಧಿಗೆ ಹಗಲಿರುಳು ಶ್ರಮಿಸುವುದರ ಜೊತೆಗೆ ನೂತನ ತಾಲ್ಲೂಕಿಗೆ ಹೆಚ್ಚಿನ ಅನುದಾನ ತಂದು ತಾಲ್ಲೂಕಿನಲ್ಲಿ ಸರ್ಕಾರಿ

ಉದಯವಾಹಿನಿ ಚಿತ್ರ

ಕಚೇರಿಗಳ ಆರಂಭಕ್ಕೆ ನಮ್ಮ ಮುಖ್ಯಮಂತ್ರಿಗಳಿಗೆ ಮತ್ತೊಮ್ಮೆ ಭೇಟಿ ಮಾಡಿ ಮನವೊಲಿಸಿ ಆದಷ್ಟು ಬೇಗನೆ ಸರ್ಕಾರಿ ಕಚೇರಿಗಳ ಆರಂಭಕ್ಕೆ ಮುಂದಾಗುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಪಂಚ ಗ್ಯಾರಂಟಿಗಳ ಅನುಷ್ಠಾನ ಸಮಿತಿ ಜಿಲ್ಲಾ ಉಪಾಧ್ಯಕ್ಷ ಬಸ್ಸುಗೌಡ ಬಿಳಾರ,ಗ್ರಾಮೀಣ ಬ್ಲಾಕ್ ಕಾಂಗ್ರೇಸ್ ಅಧ್ಯಕ್ಷ ಲಚಮರೆಡ್ಡಿ ಬೆನಕನಳ್ಳಿ, ಮಲ್ಲಣ್ಣಗೌಡ ರಾಚರೆಡ್ಡಿ ,ಚಂದ್ರುಗೌಡ ಕಂದಳ್ಳಿ, ಗ್ರಾ. ಪಂ. ಸದಸ್ಯ ತಿಪ್ಪಣ್ಣ ಪೂಜಾರಿ, ಮಲ್ಲಣ್ಣಗೌಡ ಗೌಡರೆಡ್ಡಿ, ಬಸವರಾಜ ಗೌಡ ಮಾಚ್ನೂರ, ಮಾಳಿಂಗರಾಯ ಕಂದಳ್ಳಿ, ಅಬ್ದುಲ್ ಚಿಗನೂರ, ನಿಂಗಪ್ಪ ಬಿಳಾರ, ಅಯ್ಯಪ್ಪ, ರೇವಣಸಿದ್ದಪ್ಪ, ಹೂವಣ್ಣ ಪೂಜಾರಿ, ನಿರ್ಮಿತಿ ಕೇಂದ್ರ ಇಲಾಖೆಯ ನಾಗೇಶ್ ರಾವ್ ಕುಲಕರ್ಣಿ, ಪಿಡಿಓ ಹಣಮಂತಪ್ಪ ಮತ್ತು ಗ್ರಾಮಸ್ಥರು ಹಾಗೂ ಇನ್ನಿತರರು ಉಪಸ್ಥಿತರಿದ್ದರು

ಪರಸ್ಪರ ಬಡಿದಾಡಿಕೂಂಡ ಅಂಗನವಾಡಿ ಕಾರ್ಯಕರ್ತೆಯರು

• ಉದಯವಾಹಿನಿ ಮುದ್ದೇಬಿಹಾಳ

ಪಟ್ಟಣದ ಪಿಲೇಕೆಮ್ಮ ನಗರ ಬಡಾವಣೆಯಲ್ಲಿರುವ 1ನೇ ಸಂಖ್ಯೆಯ ಅಂಗನವಾಡಿ ಕೇಂದ್ರದಲ್ಲಿ ಕಾರ್ಯಕರ್ತೆಯರಾದ ಶಾಂತಾ ಮಾಮನಿ, ರೇಣುಕಾ ರಾಮಕೋಟಿ(ಲಮಾಣಿ) ಅವರು ಪರಸ್ಪರ ಸೀರೆ ಎಳೆದಾಡಿ ಬಡಿದಾಡಿಕೊಂಡಿರುವ ಘಟನೆ ನಡೆದಿದೆ.

ಇವರ ಜಗಳ ಕೇಳಿ ಅಕ್ಕಪಕ್ಕದ ಮಹಿಳೆಯರ

ಪಾಕಿಸ್ತಾನದ ರೈಲ್ವೆ ನಿಲ್ದಾಣದಲ್ಲಿ ಭಾರೀ ಸ್ಫೋಟ: 25 ಸಾವು

ಇದು ತನ್ನದೇ ಕೃತ್ಯ ಎಂದು ಹೊಣೆ ಹೊತ್ತುಕೊಂಡ ಬಲೂಚ್ ಲಿಬರೇಷನ್ ಆರ್ಮಿ ಸಂಘಟನೆ, ಕ್ವೆಟ್ಟಾದ ಮುಖ್ಯ ರೈಲ್ವೆ ನಿಲ್ದಾಣದಲ್ಲಿ ಘಟನೆ

ಕ್ವೆಟ್ಟಾ: ಪಾಕಿಸ್ತಾನದ ಬಲೂಚಿಸ್ತಾನ ಪ್ರಾಂತ್ಯದಲ್ಲಿ ಶನಿವಾರ ಬೆಳಿಗ್ಗೆ ಜನಜಂಗುಳಿಯಿಂದ ತುಂಬಿಕೊಂಡಿದ್ದ ರೈಲ್ವೆ ನಿಲ್ದಾಣದಲ್ಲಿ ಸ್ಥಳೀಯ ಭಯೋತ್ಪಾದನಾ ಗುಂಪು ನಡೆಸಿದ ಶಂಕಿತ ಆತ್ಮಾಹುತಿ ದಾಳಿಯಲ್ಲಿ ಕನಿಷ್ಠ 25 ಮಂದಿ ಮೃತಪಟ್ಟಿದ್ದಾರೆ. ಘಟನೆಯಲ್ಲಿ ಇನ್ನೂ 46 ಮಂದಿ ಗಾಯಗೊಂಡಿದ್ದಾರೆ.

ಮೃತರಲ್ಲಿ ಕನಿಷ್ಠ 14 ಮಂದಿ ಸೈನಿಕರು ಸೇರಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಜನರು ರೈಲಿಗಾಗಿ ಪ್ಲಾಟ್‌ಫಾರ್ಮ್‌ನಲ್ಲಿ ಕಾಯುತ್ತಿದ್ದ ವೇಳೆ ಕ್ವೆಟ್ಟಾದ ಮುಖ್ಯ ರೈಲ್ವೆ ನಿಲ್ದಾಣದಲ್ಲಿ ಭಾರಿ ಪ್ರಬಲ ಬಾಂಬ್ ಸ್ಫೋಟಿಸಿದೆ. ಇದರ ದೃಶ್ಯ ಸಿಸಿಟಿವಿ ಕ್ಯಾಮೆರಾದಲ್ಲಿ ಸೆರೆಯಾಗಿದೆ. ಮೃತರ ಛಿದ್ರಗೊಂಡ ಶವಗಳು ಪ್ಲಾಟ್‌ಫಾರ್ಮ್‌ನ ಉದ್ದಗಲಕ್ಕೂ ಹರಡಿ ಬಿದ್ದಿದ್ದು,

ಸಿಸಿಟಿವಿಯಲ್ಲಿ ದೃಶ್ಯ ಸೆರೆ

ಭಯಾನಕ ಸನ್ನಿವೇಶ ಸೃಷ್ಟಿಸಿದೆ. ನಿಲ್ದಾಣದ ಚಾವಣಿ ಹಾರಿ ಹೋಗಿದೆ. ಎಲ್ಲೆಡೆ ನೆತ್ತರು ಚೆಲ್ಲಾಡಿದೆ. ಜನರ ಲಗೇಜುಗಳ ನಡುವೆ ಬದುಕುಳಿದವರಿಗಾಗಿ ಹುಡುಕಾಟ ನಡೆಸಲು ರಕ್ಷಣಾ ಕಾರ್ಯಕರ್ತರು ಪರದಾಡಿದರು. ಕೂಡಲೇ ಸ್ಥಳಕ್ಕೆ ಧಾವಿಸಿದ ಕಾನೂನು ಜಾರಿ ತಂಡಗಳು ರಕ್ಷಣಾ ಕಾರ್ಯದಲ್ಲಿ ತೊಡಗಿದರು. ಗಾಯಾಳುಗಳನ್ನು ಕ್ವೆಟ್ಟಾದ ಸಿವಿಲ್ ಆಸ್ಪತ್ರೆಗೆ ದಾಖಲಿಸಿದರು. ಕನಿಷ್ಠ 46 ಗಾಯಾಳುಗಳನ್ನು ಆಸ್ಪತ್ರೆಗೆ ಕರೆದುಕೊಂಡು ಬರಲಾಗಿದೆ. ಅವರಲ್ಲಿ ಕೆಲವರ ಸ್ಥಿತಿ ಗಂಭೀರವಾಗಿದೆ. ಆಸ್ಪತ್ರೆ ಎಮರ್ಜೆನ್ಸಿ ಘೋಷಣೆ ಮಾಡಿದ್ದು, ಹೆಚ್ಚುವರಿ ಸಿಬ್ಬಂದಿಯನ್ನು ಕರೆಸಿಕೊಂಡಿದೆ.

ಬುಕಿಂಗ್ ಕಚೇರಿಯಲ್ಲಿ ದಾಳಿ

ಜಾಫರ್ ಎಕ್ಸ್‌ಪ್ರೆಸ್ ರೈಲು ಪೇಶಾವರಕ್ಕೆ ಹೊರಡಲು ಅಣಿಯಾಗುತ್ತಿದ್ದಾಗ ಸ್ಫೋಟ ಸಂಭವಿಸಿದೆ. ಇದು ಆತ್ಮಾಹುತಿ ದಾಳಿ ಇರಬಹುದು ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ಶಂಕಿಸಿದ್ದಾರೆ. ಸ್ಥಳೀಯ ಉಗ್ರಗಾಮಿ ಗುಂಪು ಬಲೂಚ್ ಲಿಬರೇಷನ್ ಆರ್ಮಿ (ಬಿಎಲ್‌ಎ) ಸ್ಫೋಟದ ಹೊಣೆ ಹೊತ್ತುಕೊಂಡಿದೆ. ರೈಲ್ವೆ ನಿಲ್ದಾಣದ ಬುಕಿಂಗ್ ಕಚೇರಿಯಲ್ಲಿ ಸ್ಫೋಟ ಉಂಟಾಗಿರುವುದು ವಿಡಿಯೋದಲ್ಲಿ ಕಾಣಿಸಿದೆ.

ಸದಾ ಉಗ್ರರ ದಾಳಿಗೆ ತುತ್ತಾಗುತ್ತಿರುವ ಪಾಕಿಸ್ತಾನದ ಬಲೂಚಿಸ್ತಾನದಲ್ಲಿ ಶನಿವಾರ ಬೆಳಿಗ್ಗೆ ಮತ್ತೊಂದು ಭಯೋತ್ಪಾದನಾ ದಾಳಿ ನಡೆದಿದೆ. ಕ್ವೆಟ್ಟಾದ ಮುಖ್ಯ ರೈಲ್ವೆ ನಿಲ್ದಾಣದಲ್ಲಿ ಭಾರಿ ಸ್ಫೋಟ ಸಂಭವಿಸಿದ್ದು, ಕನಿಷ್ಠ 25 ಮಂದಿ ಮೃತಪಟ್ಟಿದ್ದಾರೆ. ಇದು ತನ್ನದೇ ಕೃತ್ಯ ಎಂದು ಬಲೂಚ್ ಲಿಬರೇಷನ್ ಆರ್ಮಿ ಸಂಘಟನೆ ಹೇಳಿಕೊಂಡಿದೆ.

ಹೊಣೆ ಹೊತ್ತ ಬಿಎಲ್‌ಎ: ಇನ್‌ಫ್ಯಾಂಟ್ರಿ ಸ್ಕೂಲ್‌ನ ಸೇನಾ ಸಿಬ್ಬಂದಿಯನ್ನು ಗುರಿಯಾಗಿಸಿ ಈ ಸ್ಫೋಟ ನಡೆದಿದೆ ಎಂದು ಬಲೂಚಿಸ್ತಾನದ ಪೊಲೀಸ್ ಮಹಾ ನಿರ್ದೇಶಕ ಮೌಜಮ್ ಜಾಹ್ ಅನ್ಸಾರಿ ತಿಳಿಸಿದ್ದಾರೆ. ಕ್ವೆಟ್ಟಾ ರೈಲ್ವೆ ನಿಲ್ದಾಣದಲ್ಲಿನ ಸ್ಫೋಟದ ಹೊಣೆಯನ್ನು ನಾವು ಹೊತ್ತುಕೊಳ್ಳುತ್ತೇವೆ. ಶನಿವಾರ ಬೆಳಿಗ್ಗೆ ಕ್ವೆಟ್ಟಾ ರೈಲ್ವೆ ನಿಲ್ದಾಣದಲ್ಲಿ ಪಾಕಿಸ್ತಾನದ ಸೇನಾ ಘಟಕವು ಇನ್‌ಫ್ಯಾಂಟ್ರಿ ಸ್ಕೂಲ್‌ನಲ್ಲಿ ಕೋರ್ಸ್ ಒಂದನ್ನು ಪೂರ್ಣಗೊಳಿಸಿ ಜಾಫರ್ ಎಕ್ಸ್‌ಪ್ರೆಸ್‌ನಲ್ಲಿ ವಾಪಸ್ ಬರುತ್ತಿದ್ದಾಗ ಅವರ ಮೇಲೆ ಫಿದಾಯೀ ದಾಳಿ ನಡೆಸಲಾಗಿದೆ. ಈ ದಾಳಿಯನ್ನು ಬಿಎಲ್‌ಎ ಫಿದಾಯೀ ಘಟಕ ಮಜೀದ್ ಬ್ರಿಗೇಡ್ ನಡೆಸಿದೆ ಎಂದು ಬಲೂಚ್ ಲಿಬರೇಷನ್ ಆರ್ಮಿ ವಕ್ತಾರ ಜೀಯಾಂದ್ ಬಲೂಚ್ ಹೇಳಿದ್ದಾರೆ.

ಸಾರ್ವಜನಿಕ ಸ್ಥಳಗಳಲ್ಲಿ ಬುರ್ಖಾ ನಿಷೇಧಿಸಿದ ಸ್ವಿಟ್ಜರ್ಲ್ಯಾಂಡ್ ಸರ್ಕಾರ

ಬೆರ್ನ್: ಸಾರ್ವಜನಿಕ ಸ್ಥಳಗಳಲ್ಲಿ ಬುರ್ಖಾ ಧರಿಸಿ ಓಡಾಡುವಂತಿಲ್ಲ ಎಂಬ ಕಠಿಣ ಕಾನೂನು ಕ್ರಮವನ್ನು ಸ್ವಿಟ್ಜರ್ಲ್ಯಾಂಡ್ ಸರ್ಕಾರವು ಜಾರಿಗೊಳಿಸಿದೆ. ಸ್ವಿಟ್ಜರ್ಲ್ಯಾಂಡ್‌ನ ಬಲಪಂಥೀಯ ಆಡಳಿತದ ಪೀಪಲ್ಸ್ ಪಾರ್ಟಿ ಬುರ್ಖಾ ಬ್ಯಾನ್ ಮಾಡಲು ಸ್ವಿಸ್ ಸಂಸತ್ ಮೇಲನೆಯಲ್ಲಿ ಅಂಗೀಕಾರ ಪಡೆದಿತ್ತು. ಅಲ್ಲದೆ 2021 ರ ಜನಾಭಿಪ್ರಾಯ ಸಂಗ್ರಹಣೆಯಲ್ಲಿಯೂ ಬಹು ಸಂಖ್ಯೆಯ ಜನರು ಬುರ್ಖಾ ನಿಷೇಧದ ಪರವಾಗಿ ಓಟ್ ಹಾಕಿದ್ದರು. ಹೌದು ಬುರ್ಖಾ ಮತ್ತು ಮುಖಗವಸುಗಳನ್ನು ನಿಷೇಧಿಸಬೇಕೆ ಎಂದು ಅಲ್ಲಿನ ಜನರಲ್ಲಿ ಕೇಳಿದಾಗ 51 ಪ್ರತಿಶತದಷ್ಟು ಜನರು ಬುರ್ಖಾ ನಿಷೇಧಕ್ಕೆ ಬೆಂಬಲ ನೀಡಿದ್ದರು. ಇನ್ನೂ ಸ್ವಿಟ್ಜರ್ಲ್ಯಾಂಡ್ ಸರ್ಕಾರದ ಈ ನಿರ್ಧಾರಕ್ಕೆ ಭಾರೀ ಆಕ್ರೋಶವೂ ವ್ಯಕ್ತವಾಗಿತ್ತು. ಈ ಎಲ್ಲದರ ನಡುವೆಯೂ ಇದೀಗ ಇಲ್ಲಿನ ಸರ್ಕಾರ ಅಧೀಕೃತವಾಗಿ ಬುರ್ಖಾ ನಿಷೇಧದ ಕಾನೂನನ್ನು ಜಾರಿಗೊಳಿಸಿದೆ.

ನಿಷೇಧವನ್ನು ಸಾರ್ವತ್ರಿಕವಾಗಿ ಅನ್ವಯಿಸುವುದಿಲ್ಲ ಎಂದು ಸ್ವಿಸ್ ಸರ್ಕಾರ ಸ್ಪಷ್ಟಪಡಿಸಿದೆ. ರಾಯಿಟರ್ಸ್ ಸುದ್ದಿ ಸಂಸ್ಥೆಯ ಪ್ರಕಾರ ಕೆಲವು ಸ್ಥಳಗಳು, ಸನ್ನಿವೇಶಗಳಲ್ಲಿ ಈ ನಿಯಮ ಅನ್ವಯವಾಗುವುದಿಲ್ಲ. ವಿಮಾನ,

ರಾಜತಾಂತ್ರಿಕ ಸ್ಥಳಗಳು, ಪವಿತ್ರ ಸ್ಥಳಗಳು, ಪೂಜಾ ಆವರಣಗಳಲ್ಲಿ ಬುರ್ಖಾಗಳನ್ನು ಧರಿಸಬಹುದು, ವೈದ್ಯಕೀಯ ಕಾರಣಗಳು, ವಿಪರೀತ ಚಳಿಯ ಸಂದರ್ಭದಲ್ಲಿ ಮುಖ ಮುಚ್ಚುವಂತೆ ಹೊದಿಕೆಗಳನ್ನು ಧರಿಸಬಹುದು.

ಹೆಚ್ಚುವರಿಯಾಗಿ ಜಾಹೀರಾತು ಮನರಂಜನಾ ಉದ್ದೇಶಗಳಿಗಾಗಿ ಬುರ್ಖಾ, ಮುಖ ಗವಸುಗಳನ್ನು ಧರಿಸಬಹುದು. ಜೊತೆಗೆ ಸೂಕ್ತ ಪ್ರಾಧಿಕಾರವು ಪೂರ್ವ ಅನುಮತಿಯನ್ನು ನೀಡಿದರೆ ಸಾರ್ವಜನಿಕ ಸುವ್ಯವಸ್ಥೆಗೆ ಧಕ್ಕೆಯಾಗದಂತೆ ಅಭಿವ್ಯಕ್ತಿ ಸ್ವಾತಂತ್ರ್ಯದ ಭಾಗವಾಗಿ ಸಭೆಗಳು ನಡೆಯುವಲ್ಲಿ ವೈಯಕ್ತಿಯ ರಕ್ಷಣೆಗಾಗಿ ಬುರ್ಖಾ, ಮುಖ ಗವಸುಗಳನ್ನು ಧರಿಸಬಹುದು. ಇಸ್ಲಾಂ ಧರ್ಮದ ಆಚರಣೆ,

ಜನವರಿಯಿಂದ ಈ ಕಠಿಣ ನಿಯಮ ಜಾರಿ ಯಾಗಲಿದ್ದು, ನಿಯಮವನ್ನು ಉಲ್ಲಂಘಿಸಿ ದವರಿಗೆ 1,000 ಸ್ವಿಸ್ ಫ್ರಾಂಕ್ ಅಂದರೆ ಅಂದಾಜು 96,280 ರೂ. ದಂಡವನ್ನು ವಿಧಿಸಲಾಗುವುದು ಎಂಬ ಕಾನೂನನ್ನು ಸ್ವಿಟ್ಜರ್ಲ್ಯಾಂಡ್ ಸರ್ಕಾರ ಜಾರಿಗೊಳಿಸಿದೆ ಎಂದು ರಾಯಿಟರ್ಸ್ ಸುದ್ದಿ ಸಂಸ್ಥೆ ತಿಳಿಸಿದೆ.

ಸಂಪ್ರದಾಯದ ಭಾಗವಾಗಿ ಹೆಚ್ಚಿನ ಮುಸ್ಲಿಂ ಮಹಿಳೆಯರು ಮನೆಯಿಂದ ಹೊರಗೆ ಹೋಗುವಾಗ ಬುರ್ಖಾ ಧರಿಸಿ ಹೋಗುತ್ತಾರೆ, ಸಾರ್ವಜನಿಕ ಸ್ಥಳಗಳಲ್ಲಿ ಬುರ್ಖಾ ಧರಿಸಿಯೇ ಓಡಾಡುತ್ತಾರೆ.

ಆದರೆ ಫ್ರಾನ್ಸ್, ಚೀನಾ, ಡೆನ್ಮಾರ್ಕ್, ಬೆಲ್ಜಿಯಾ, ಆಸ್ಟ್ರೀಯಾ, ಬೆಲ್ಜಿಯಮ್ ಇತ್ಯಾದಿ ದೇಶಗಳು ಸಾರ್ವಜನಿಕ ಸ್ಥಳಗಳಲ್ಲಿ ಕಣ್ಣು, ಮೂಗು, ಬಾಯಿ ಮುಖವನ್ನು ಮುಚ್ಚುವ ಬುರ್ಖಾ ಧರಿಸಿ ಓಡಾಡುವುದಕ್ಕೆ ನಿಷೇಧವನ್ನು ಹೇರಿವೆ. ಇದೀಗ ಈ ಪಟ್ಟಿಗೆ ಸ್ವಿಟ್ಜರ್ಲ್ಯಾಂಡ್ ದೇಶವೂ ಕೂಡಾ ಸೇರ್ಪಡೆಯಾಗಿದೆ.

ಸೋಲು ಗೆಲ್ಲುವ ಗುರಿಗೆ ದಾರಿ: ಜೋ ಬೈಡೆನ್

ವಾಷಿಂಗ್ಟನ್: ಚುನಾವಣೆಯಲ್ಲಿ ಹಿನ್ನಡೆಗಳು ಅನಿವಾರ್ಯ, ಆದರೆ ಅದನ್ನು ಬಿಟ್ಟುಕೊಡುವುದನ್ನು ಕ್ಷಮಿಸಲಾಗದು. ಸೋಲು ಎಂದರೆ ನಾವು ಸೋತಿದ್ದೇವೆ ಎಂದಲ್ಲ ಮುಂದೆ ಗೆಲ್ಲುವ ಗುರಿಯೊಂದಿಗೆ ಹೋರಾಡೋಣ ಎಂದು ಅಮೆರಿಕಾ ಅಧ್ಯಕ್ಷ ಜೋ ಬೈಡೆನ್ ಹೇಳಿದ್ದಾರೆ.

ಅಮೆರಿಕಾ ಅಧ್ಯಕ್ಷೀಯ ಚುನಾವಣೆಯಲ್ಲಿ ಪರಾಭವಗೊಂಡಿರುವ ಉಪಾಧ್ಯಕ್ಷೆ ಕಮಲಾ ಹ್ಯಾರೀಸ್ ಅವರ ಸೋಲಿನಿಂದ ಹತಾಶರಾಗಿರುವ ಸಿಬ್ಬಂದಿಗಳು ಮತ್ತು ಡೆಮಾಕ್ರಟಿಕ್‌ಗಳನ್ನುದ್ದೇಶಿಸಿ ಮಾತನಾಡಿದ ಅವರು ಭವಿಷ್ಯದಲ್ಲಿ ಗುರಿ ಸಾಧಿಸುವ ನಿಟ್ಟಿನಲ್ಲಿ ಕೆಲಸ ಮಾಡೋಣ, ಯಾರೂ ಹತಾಶರಾಗುವುದು ಬೇಡ ಎಂದಿದ್ದಾರೆ. ಅಮೆರಿಕಾದ ಅಧ್ಯಕ್ಷರಾಗಿ ಡೋನಾಲ್ಡ್ ಟ್ರಂಪ್ ಆಯ್ಕೆಯಾದ ಬಳಿಕ ಡೆಮಾಕ್ರಟಿಕ್ ಕಾರ್ಯಕರ್ತರಿಗೆ ಬೆಂಬಲ ತುಂಬುವ ಜೊತೆಗೆ ಸಾಂತ್ವಾನ ಹೇಳಿದ ಅವರು ಒಂದಷ್ಟು ದಿನ ಸೋಲು ನಿರಾಸೆ ತರುವುದು ಸಹಜ ಎಂದಿದ್ದಾರೆ. ಅಮೆರಿಕಾ ಚುನಾವಣಾ ವ್ಯವಸ್ಥೆಯ ಸಮಗ್ರತೆ ಸಾಬೀತು ಪಡಿಸಿದೆ ಅಧಿಕಾರದ ಕ್ರಮಬದ್ಧ ವರ್ಗಾವಣೆಗೆ ತಾವು ಎಲ್ಲಾ ರೀತಿಯ ಸಹಕಾರ ನೀಡಲಾಗುವುದು ಎಂದು ಅವರು 2020 ರಲ್ಲಿ ಬೈಡೆನ್



ಶ್ವೇತಭವನದಲ್ಲಿ ಭೇಟಿಯಾಗಲು ಜೋ ಬೈಡೆನ್ ಅವರು ಚುನಾಯಿತ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರನ್ನು ಆಹ್ವಾನಿಸಿದ್ದಾರೆ. 2020ರಲ್ಲಿ ಡೊನಾಲ್ಡ್ ಟ್ರಂಪ್ ಅಧಿಕಾರದಿಂದ ಕೆಳಗಿಳಿಯುವ ವೇಳೆ ಈ ಸಂಪ್ರದಾಯ ಪಾಲಿಸಿರಲಿಲ್ಲ

ಅವರ ಸೋಲನ್ನು ರದ್ದುಗೊಳಿಸಲು ಪ್ರಯತ್ನಿಸಿದ ಮತ್ತು ಈ ವರ್ಷವೂ ವಂಚನೆಯ ಆಧಾರರಹಿತ ಹಕ್ಕುಗಳನ್ನು ಎತ್ತುವ ಟ್ರಂಪ್‌ಗೆ ಸೂಚ್ಯ ಖಂಡನಾರ್ಹ ಎಂದಿದ್ದಾರೆ.

ಕಮಲಾ ಹ್ಯಾರಿಸ್ ಡೊನಾಲ್ಡ್ ಟ್ರಂಪ್‌ಗೆ ಚುನಾವಣೆಯಲ್ಲಿ ಆದ ಸೋಲು ಒಪ್ಪಿಕೊಂಡ ಅವರು ಭವಿಷ್ಯದಲ್ಲಿ ಹೋರಾಡಲು ಪ್ರತಿಜ್ಞೆ ಮಾಡಿದ್ದಾರೆ. ನೀವು ಯಾರಿಗೆ ಮತ ಹಾಕಿದರೂ ನಾವು ಮಾಡಬಹುದೆಂದು ಭಾವಿಸುತ್ತೇನೆ ಎಂದರೆ ಒಬ್ಬರನ್ನೊಬ್ಬರು ವಿರೋಧಿಗಳಂತೆ ಅಲ್ಲ ಆದರೆ ಸಹ ಅಮೆರಿಕನ್ನರಂತೆ ನೋಡಿ, ತಾಪಮಾನ ಕಡಿಮೆ ಮಾಡಿ ಅಮೆರಿಕದ ಚುನಾವಣಾ ವ್ಯವಸ್ಥೆಯ ಸಮಗ್ರತೆಯ ಬಗ್ಗೆ ಪ್ರಶ್ನೆ ಮಾಡುವುದಿಲ್ಲ ಎಂದಿದ್ದಾರೆ.

ಹಳಿತಪ್ಪಿದ ಶಾಲಿಮಾರ್ ಎಕ್ಸ್‌ಪ್ರೆಸ್ ರೈಲಿನ ಬೋಗಿಗಳು

ಕೋಲ್ಕತ್ತಾ: ಪಶ್ಚಿಮ ಬಂಗಾಳದ ಹೌರಾದಲ್ಲಿ ಪಾರ್ಸೆಲ್ ವ್ಯಾನ್ ಕೋಚ್ ಸೇರಿದಂತೆ ಸಿಕಂದ್ರಾಬಾದ್ ಶಾಲಿಮಾರ್ ಎಸ್‌ಎಫ್ ಎಕ್ಸ್‌ಪ್ರೆಸ್‌ನ ಮೂರು ಬೋಗಿಗಳು ಹಳಿತಪ್ಪಿರುವ ಘಟನೆ ನಡೆದಿದೆ. ಮೂರು ಬೋಗಿಗಳು ಹಳಿತಪ್ಪಿದ್ದರೂ ಯಾವುದೇ ಪ್ರಾಣ ಹಾನಿಯಾಗಿಲ್ಲ ಎಂದು ಆಗ್ನೇಯ ರೈಲ್ವೆ ವಿಭಾಗದ ಅಧಿಕಾರಿಗಳು ತಿಳಿಸಿದ್ದಾರೆ.

ಸಾಪ್ತಾಹಿಕ ವಿಶೇಷ ರೈಲು ಕೋಲ್ಕತ್ತಾದಿಂದ ಸುಮಾರು 40 ಕಿ.ಮೀ ದೂರದಲ್ಲಿರುವ ನಲ್ಬುರದಲ್ಲಿ ಹಳಿತಪ್ಪಿದೆ. ಇದುವರೆಗೆ ಯಾವುದೇ ಪ್ರಾಣಹಾನಿ ಅಥವಾ ಗಾಯಗಳ ವರದಿಯಾಗಿಲ್ಲ ಹಳಿತಪ್ಪಿದ ಬೋಗಿಗಳಲ್ಲಿ ಪಾರ್ಸೆಲ್ ವ್ಯಾನ್ ಕೂಡ ಸೇರಿದೆ ಎಂದು ತಿಳಿಸಿದ್ದಾರೆ.

22850 ಸಿಕಂದರಾಬಾದ್ ಶಾಲಿಮಾರ್ ವೀಕ್ಲಿ ಎಕ್ಸ್‌ಪ್ರೆಸ್ ಖರಗ್‌ಪುರ ವಿಭಾಗದ ನಲ್ಬುರ್ ನಿಲ್ದಾಣದ ಮೂಲಕ ಹಾದು ಹೋಗುತ್ತಿದ್ದಾಗ ಕೋಚ್‌ಗಳು ಹಳಿತಪ್ಪಿದೆ. ಘಟನೆಗೆ ಕಾರಣ ಪತ್ತೆ ಹಚ್ಚುವ ಸಂಬಂಧ ತನಿಖೆಗೆ ಆದೇಶಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಅಪಘಾತ

ಪರಿಹಾರ ರೈಲು ಮತ್ತು ಸಂತ್ರಗಚಿ ಮತ್ತು ಖರಗ್‌ಪುರದಿಂದ ವೈದ್ಯಕೀಯ ಪರಿಹಾರ ರೈಲುಗಳನ್ನು ಸಹಾಯಕ್ಕಾಗಿ ತಕ್ಷಣವೇ ಕಳುಹಿಸಲಾಗಿದೆ ಎಂದು ರೈಲ್ವೆ ಹೇಳಿದೆ. ಕೋಲ್ಕತ್ತಾಗೆ ಪ್ರಯಾಣಿಕರನ್ನು ಸಾಗಿಸಲು ಬಸ್‌ಗಳನ್ನು ಸಹ ಕಳುಹಿಸಲಾಗಿದೆ. ಸದ್ಯದ ಮಾಹಿತಿ ಪ್ರಕಾರ ರೈಲು ಬೋಗಿಗಳು ಹಳಿತಪ್ಪಿದರೂ ಯಾವುದೇ ಪ್ರಾಣಹಾನಿ ಆಗಿಲ್ಲ ಎಂದು ಮಾಹಿತಿಯಲ್ಲಿ ತಿಳಿಸಲಾಗಿದೆ. ಇತ್ತೀಚಿನ ದಿನಗಳಲ್ಲಿ ದೇಶಾದ್ಯಂತ ವಿವಿಧ ಭಾಗಗಳಲ್ಲಿ ರೈಲು ಅಪಘಾತಗಳು ಮತ್ತು ರೈಲು ಹಳಿ ತಪ್ಪುತ್ತಿರುವ ಘಟನೆಗಳು ರೈಲ್ವೆ ಸಚಿವಾಲಯದ ಅಧಿಕಾರಿಗಳನ್ನು ಆತಂಕಕ್ಕೆ ಸಿಲುಕುವಂತೆ ಮಾಡಿವೆ.

ಜಾರ್ಖಂಡ್ ಸಿಎಂ ಆಪ್ತರ ನಿವಾಸದ ಮೇಲೆ ಐಟಿ ದಾಳಿ

ರಾಂಚಿ: ಜಾರ್ಖಂಡ್ ಸಿಎಂ ಹೇಮಂತ್ ಸುರೇನ್ ಅವರ ಆಪ್ತ ಕಾರ್ಯ ಒದರ್ಶಿ ಶ್ರೀವಾತ್ಸವ, ಅವರ ಸಂಬಂಧಿಕರ ನಿವಾಸದ ಮೇಲೆ ಆದಾಯ ತೆರಿಗೆ ಅಧಿಕಾರಿಗಳು ದಾಳಿ ನಡೆಸಿದ್ದಾರೆ. ಹೇಮಂತ್ ಸುರೇನ್‌ಅವರ ಆಪ್ತ ಕಾರ್ಯದರ್ಶಿ ಶ್ರೀವಾತ್ಸವ, ಸಂಬಂಧಿಕರು, ಆಪ್ತರಿಗೆ ಸೇರಿದ 17ರಿಂದ 18 ಕಡೆ ಐಟಿ ಅಧಿಕಾರಿಗಳು ದಾಳಿ ನಡೆಸಿದ್ದಾರೆ. ರಾಂಚಿಯ ಏಳು ಸ್ಥಳಗಳು, ಜಮ್ಶೆಡ್ಪುರದ 9 ಸ್ಥಳಗಳಲ್ಲಿ ಆದಾಯ ತೆರಿಗೆ ಇಲಾಖೆಯಿಂದ ದಾಳಿ ನಡೆಯುತ್ತಿದೆ. ಜಮ್ಶೆಡ್ಪುರದ ಅಂಜನಿಯಾ ಇಸ್ಟ್ ಸೇರಿದಂತೆ ಇತರ ಸ್ಥಳಗಳಲ್ಲಿ ಸಹ ದಾಳಿ ನಡೆಸಲಾಗಿದೆ.

ಮಾಹಿತಿ ಪ್ರಕಾರ ಆದಾಯ ತೆರಿಗೆ ಇಲಾಖೆ ಅಧಿಕಾರಿಗಳು ತೆರಿಗೆ ಅಕ್ರಮಗಳು ನಡೆಸಿರುವ ಕುರಿತು ಬಂದಿರುವ ದೂರಿನ ಆಧಾರದ ಮೇಲೆ ಈ ದಾಳಿ ನಡೆಸಿದ್ದಾರೆ. ಜಾರ್ಖಂಡ್ ಮುಖ್ಯಮಂತ್ರಿ ಹೇಮಂತ್ ಸೊರೇನ್ ಅವರ ಆಪ್ತ ಸಲಹೆಗಾರ ಸುನಿಲ್ ಶ್ರೀವಾಸ್ತವ ಅವರು ತೆರಿಗೆಯಲ್ಲಿ ಕೆಲವು ಅಕ್ರಮಗಳನ್ನು ಎಸಗಿದ್ದಾರೆ ಎಂಬ ಮಾಹಿತಿ ಐಟಿಗೆ ಸಿಕ್ಕಿತ್ತು. ಇದಾದ ಬಳಿಕ ಐಟಿ ಇಲಾಖೆ ಈ ಕ್ರಮ ಕೈಗೊಂಡಿದೆ. ಈ ಹಿಂದೆ ಅಕ್ಟೋಬರ್ 26ರಂದು, ವಿಧಾನಸಭಾ ಚುನಾವಣೆಯ ಸಮಯದಲ್ಲಿ ಹವಾಲಾ

ಮೂಲಕ ಹಣದ ವ್ಯವಹಾರದ ಮಾಹಿತಿಯ ಆಧಾರದ ಮೇಲೆ ಆದಾಯ ತೆರಿಗೆ ಇಲಾಖೆ ರಾಂಚಿ, ಜಮ್ಶೆಡ್ಪುರ, ಗಿರಿದಿಹ್ ಮತ್ತು ಕೋಲ್ಕತ್ತಾದಲ್ಲಿ ದಾಳಿ ನಡೆಸಿತ್ತು.

ಈ ಅವಧಿಯಲ್ಲಿ ಆದಾಯ ತೆರಿಗೆ ಇಲಾಖೆ ಹವಾಲಾ ದಂಧೆಕೋರರ ಸ್ಥಳಗಳಿಂದ 150 ಕೋಟಿ ರೂಪಾಯಿ ಮೌಲ್ಯದ ಬೇನಾಮಿ ಆಸ್ತಿ ಮತ್ತು ಹೂಡಿಕೆ ಸಂಬಂಧಿತ ದಾಖಲೆಗಳನ್ನು ವಶಪಡಿಸಿಕೊಂಡಿತ್ತು. ಇದಕ್ಕೂ ಮುನ್ನ ಅಕ್ಟೋಬರ್ 14ರಂದು ಜಾರಿ ನಿರ್ದೇಶನಾಲಯ ತಂಡ ಹೇಮಂತ್ ಸೊರೇನ್ ಸರ್ಕಾರದ ಸಚಿವ ಮಿಥಿಲೇಶ್ ಠಾಕೂರ್ ಅವರ ನಿವಾಸದ ಮೇಲೆ ದಾಳಿ ನಡೆಸಿತ್ತು.

ಈ ಅವಧಿಯಲ್ಲಿ ಇಡಿ 20 ಕಡೆ ದಾಳಿ ನಡೆಸಿತ್ತು. ಜಲ ಜೀವನ್ ಮಿಷನ್ಗೆ ಸಂಬಂಧಿಸಿದ ಯೋಜನೆಗಳಲ್ಲಿನ

ಜಾರ್ಖಂಡ್ ವಿಧಾನಸಭಾ ಚುನಾವಣೆಗೆ ಅಖಾಡ ತಯಾರಾಗಿದ್ದು, ಇದೇ ನವೆಂಬರ್ 13 ಮತ್ತು 20ರಂದು ಎರಡು ಹಂತದಲ್ಲಿ ಜಾರ್ಖಂಡ್‌ನಲ್ಲಿ ವಿಧಾನಸಭೆ ಚುನಾವಣೆ ನಡೆಯಲಿದೆ. ನವೆಂಬರ್ 23ರಂದು ಮತ ಎಣಿಕೆ ನಡೆದು ಫಲಿತಾಂಶ ಹೊರಬರಲಿದೆ.

ಅಕ್ರಮ ಗಳ ಬಗ್ಗೆ ಈ ದಾಳಿ ನಡೆದಿದೆ.

ಮಿಥ್ಲೇಶ್ ಠಾಕೂರ್ ಅವರ ಸಹೋದರ ವಿನಯ್ ಠಾಕೂರ್, ಖಾಸಗಿ ಕಾರ್ಯದರ್ಶಿ ಹರೇಂದ್ರ ಸಿಂಗ್, ಹಲವು ಇಲಾಖೆ ಎಂಜಿನಿಯರ್‌ಗಳ ಮನೆಗಳ ಮೇಲೆ ಇಡಿ ತಂಡ ದಾಳಿ ನಡೆಸಿತ್ತು. ಸಚಿವ ಮಿಥಿಲೇಶ್ ಠಾಕೂರ್, ಅವರ ಸಂಬಂಧಿಕರ ಮನೆ ಮೇಲೆ ಇಡಿ ದಾಳಿ ನಡೆದಿದ್ದು, ಇದು ಅನಿರೀಕ್ಷಿತವೇನಲ್ಲ ಎಂದು ಮುಖ್ಯಮಂತ್ರಿ ಹೇಮಂತ್ ಸೊರೆನ್ ಹೇಳಿದ್ದಾರೆ. ನಮ್ಮ ವಿರೋಧ ಪಕ್ಷದ ಗೆಳೆಯರು ಚುನಾವಣೆಯ ಸಮಯದಲ್ಲಿ ಇದನ್ನೆಲ್ಲ ಮತ್ತೆ ನೋಡಲಾರಂಭಿಸಿದ್ದಾರೆ. ಅವರ ಸೂಚನೆ ಮೇರೆಗೆ ಈ ಕ್ರಮ ಕೈಗೊಳ್ಳಲಾಗಿದೆ ಎಂದು ಆರೋಪಿಸಿದ್ದಾರೆ.

ರತನ್ ಟಾಟಾ ಅವರ ಸಾಧನೆಗಳನ್ನು ಸ್ಮರಿಸಿದ ಪ್ರಧಾನಿ ಮೋದಿ

**ಮುಂ

ಪ್ರಭಾಸ್ ವಿರುದ್ಧ 'ಕಣ್ಣಪ್ಪ' ಗರಂ

ದಿ ಲಾರ್ಡ್ ಆಫ್ ದಿ ರಿಂಗ್ಸ್

ಸಿನಿಮಾ ಶೂಟಿಂಗ್ ವೇಳೆ ಸಾಕಷ್ಟು ಗೌಪ್ಯತೆಯನ್ನು ಕಾಪಾಡಿಕೊಂಡರೂ, ದುರುಳರ ಕಾರಣದಿಂದಾಗಿ ಸಿಕ್ರೇಟ್ ಆಚೆ ಬರುತ್ತಿವೆ. ಕಣ್ಣಪ್ಪ ಸಿನಿಮಾ ಟೀಮ್ ನಲ್ಲೂ ಅಂಥದ್ದೊಂದು ಅಚಾತುರ್ಯ ನಡೆದಿದೆ. ಹಾಗಾಗಿ ಕಣ್ಣಪ್ಪ ಟೀಮ್ ಗರಂ ಆಗಿದೆ. ಈ ಸಿನಿಮಾದಲ್ಲಿ ಪ್ರಭಾಸ್ ನಟಿಸಿದ್ದು, ಪ್ರಭಾಸ್ ಅವರ ಲುಕ್ ನ ಫೋಟೋವನ್ನು ಲೀಕ್ ಮಾಡಲಾಗಿದೆ. ಲೀಕ್ ಮಾಡಿದವರ ವಿರುದ್ಧ ಕಾನೂನು ಕ್ರಮಕ್ಕೂ ಟೀಮ್ ಮುಂದಾಗಿದೆ. ದೊಡ್ಡ ಬಜೆಟ್‌ನಲ್ಲಿ ನಿರ್ಮಾಣವಾಗುತ್ತಿರುವ ಕಣ್ಣಪ್ಪ ಸಿನಿಮಾ ಇದೀಗ ವಿಶೇಷ ಕೈಂಕರ್ಯದಲ್ಲಿ ತೊಡಗಿಸಿಕೊಂಡಿದೆ. ಹಿರಿಯ ನಟ ಮೋಹನ್ ಬಾಬು, ವಿಷ್ಣು ಮಂಚು ಮತ್ತು ಕಣ್ಣಪ್ಪ ಸಿನಿಮಾ ತಂಡ, ಕೇದಾರನಾಥ, ಬದರಿನಾಥ್ ಮತ್ತು ಋಷಿಕೇಶಕ್ಕೆ ಭೇಟಿ ನೀಡಿದ್ದಾರೆ. ಈ ಮೂಲಕ 12 ಜ್ಯೋತಿರ್ಲಿಂಗಗಳ ದರ್ಶನಕ್ಕೆ ಮುಂದಾಗಿದ್ದಾರೆ. ನಟ ಮೋಹನ್ ಬಾಬು, ಅವರ ಪುತ್ರ ವಿಷ್ಣು ಮಂಚು, ನಿರ್ಮಾಪಕ ಮುಖೇಶ್ ಕುಮಾರ್ ಮತ್ತು ನಟ ಅರ್ಪಿತ್ ರಂಕಾ ಅವರ ಜತೆಗೆ ಕೇದಾರನಾಥ, ಬದರಿನಾಥ್ ಮತ್ತು ಋಷಿಕೇಶದ ಶಿವನ ದೇವಾಲಯಗಳಿಗೆ ಭೇಟಿ ನೀಡಿ, ಆಧ್ಯಾತ್ಮಿಕ ಯಾತ್ರೆಯನ್ನು ಕೈಗೊಂಡರು. ಭವ್ಯವಾದ ಹಿಮಾಲಯದ ನಡುವೆ ನೆಲೆಸಿರುವ ಶಿವನಿಗೆ ಸಮರ್ಪಿತವಾದ ಹನ್ನೆರಡು ಜ್ಯೋತಿರ್ಲಿಂಗಗಳಲ್ಲಿ ಒಂದಾದ ಕೇದಾರನಾಥಕ್ಕೆ ತಂಡವು ಭೇಟಿ ನೀಡಿತು. ಬಳಿಕ ಬದರಿನಾಥದಲ್ಲಿ ಪ್ರಾರ್ಥನೆ ಸಲ್ಲಿಸಿ, ಋಷಿಕೇಶಕ್ಕೆ ಭೇಟಿ ನೀಡಿದರು. ಈ ಯಾತ್ರೆಯ ಬಗ್ಗೆ ಮಾತನಾಡಿರುವ ವಿಷ್ಣು ಮಂಚು, ''ಕಣ್ಣಪ್ಪ ಸಿನಿಮಾ ಬಿಡುಗಡೆಗೂ ಮುನ್ನ ಎಲ್ಲಾ 12 ಜ್ಯೋತಿರ್ಲಿಂಗ ಪುಣ್ಯ ಕ್ಷೇತ್ರಗಳಿಗೆ ತೆರಳುವುದು ನಮ್ಮ ಗುರಿ. ಅದರಂತೆ ಮೊದಲಿಗೆ ಕೇದಾರನಾಥನ ದರ್ಶನ ಪಡೆದಿದ್ದೇವೆ. ಮುಂಬರುವ ದಿನಗಳಲ್ಲಿ ಇನ್ನುಳಿದ 10 ಜ್ಯೋತಿರ್ಲಿಂಗಗಳನ್ನು ದರ್ಶನ ಮಾಡಲಿದ್ದೇವೆ. ಅದೇ ರೀತಿ ಶೀಘ್ರದಲ್ಲಿಯೇ ಈ ನಮ್ಮ ಸಿನಿಮಾ ರಿಲೀಸ್ ಆಗಲಿದೆ. ದಿ ಲಾರ್ಡ್ ಆಫ್ ದಿ ರಿಂಗ್ಸ್‌ನಂತಹ ಮಹಾಕಾವ್ಯ ಕಥೆಗಳಿಂದ ಸ್ಫೂರ್ತಿ ಪಡೆದ ಈ ಸಿನಿಮಾ, ದೃಶ್ಯವೈಭವದ ಮೂಲಕವೇ ಎಲ್ಲರನ್ನು ಬೆರಗುಗೊಳಿಸುತ್ತದೆ. ಹೆಸರಾಂತ ಹಾಲಿವುಡ್ ಛಾಯಾಗ್ರಾಹಕ ಶೆಲ್ಡನ್ ಚೌ ಅವರು ನ್ಯೂಜಿಲೆಂಡ್‌ನ ರಮಣೀಯ ಪ್ರದೇಶಗಳಲ್ಲಿ ದೃಶ್ಯಗಳನ್ನು ಸೆರೆಹಿಡಿದಿದ್ದಾರೆ.



ಯಶ್ ಸಿನಿಮಾಕ್ಕಾಗಿ ಹಾಲಿವುಡ್‌ನಿಂದ ಜೆಜೆ ಪೆರ್ರಿ

ಯಶ್ ನಟಿಸುತ್ತಿರುವ 'ಟಾಕ್ಸಿಕ್' ಸಿನಿಮಾದಲ್ಲಿ ಭಾರತದ ಸ್ಟಾರ್ ನಟ-ನಟಿಯರು ಮಾತ್ರವೇ ಅಲ್ಲದೆ, ವಿದೇಶದ ಕೆಲವು ನಟರು ಸಹ ನಟಿಸುತ್ತಿದ್ದಾರೆ. ನಟರು ಮಾತ್ರವೇ ಅಲ್ಲದೆ ಹಾಲಿವುಡ್‌ನ ಕೆಲ ಖ್ಯಾತ ತಂತ್ರಜ್ಞರನ್ನು ಸಹ ಸಿನಿಮಾಕ್ಕೆ ಭಾರತಕ್ಕೆ ಕರೆಸಿಕೊಳ್ಳಲಾಗಿದೆ. ಯಶ್ ನಟನೆಯ 'ಟಾಕ್ಸಿಕ್' ಸಿನಿಮಾವನ್ನು ಭಾರಿ ದೊಡ್ಡ ಮಟ್ಟದಲ್ಲಿ ನಿರ್ಮಾಣ ಮಾಡಲಾಗುತ್ತಿದೆ. ಭಾರತದ ಸ್ಟಾರ್ ಕಲಾವಿದರ ಜೊತೆಗೆ ವಿದೇಶಗಳ ನಟರೂ ಸಹ 'ಟಾಕ್ಸಿಕ್' ಸಿನಿಮಾನಲ್ಲಿ ನಟಿಸುತ್ತಿದ್ದಾರೆ. ನಟರು ಮಾತ್ರವೇ ಅಲ್ಲದೆ ವಿದೇಶದ ಅತ್ಯುತ್ತಮ ತಂತ್ರಜ್ಞರು ಸಹ 'ಟಾಕ್ಸಿಕ್' ಸಿನಿಮಾಕ್ಕೆ ಬಳಸಿಕೊಳ್ಳಲಾಗುತ್ತಿದೆ. ಸಿನಿಮಾದ ವಿಎಫ್ ಎಕ್ಸ್, ಗ್ರಾಫಿಕ್ಸ್, ಮಿನಿಯೇಚರ್ ನಿರ್ಮಾಣ ಇನ್ನಿತರೆಗಳಿಗೆ ಹಾಲಿವುಡ್‌ನ ಜನಪ್ರಿಯ ಸಂಸ್ಥೆಯೊಂದಿಗೆ ಒಪ್ಪಂದ ಮಾಡಿಕೊಳ್ಳಲಾಗಿದೆ. ಈಗ ಹಾಲಿವುಡ್‌ನ ಟಾಪ್ ತಂತ್ರಜ್ಞರೊಬ್ಬರು 'ಟಾಕ್ಸಿಕ್' ಸಿನಿಮಾಕ್ಕಾಗಿ ಮುಂಬೈಗೆ ಬಂದಿದ್ದಾರೆ. ಹಾಲಿವುಡ್‌ನ ಬ್ಲಾಕ್ ಬಸ್ಟರ್ ಸಿನಿಮಾಗಳಾದ 'ಐರನ್ ಮ್ಯಾನ್', ಎಕ್ಸ್‌ಮ್ಯಾನ್, ಜಾನ್ ವಿಕ್ 2 ಇನ್ನೂ ಹಲವಾರು ಕ್ಲಾಸಿಕ್ ಆಕ್ಷನ್ ಸಿನಿಮಾಗಳಿಗೆ ಕೆಲಸ ಮಾಡಿರುವ ಜನಪ್ರಿಯ ಆಕ್ಷನ್ ನಿರ್ದೇಶಕ ಜೆಜೆ ಪೆರ್ರಿ ಇದೀಗ ಮುಂಬೈಗೆ ಬಂದಿದ್ದಾರೆ. 'ಟಾಕ್ಸಿಕ್' ಸಿನಿಮಾದ ಆಕ್ಷನ್ ದೃಶ್ಯವನ್ನು ನಿರ್ದೇಶನ ಮಾಡಲಿರುವ ಜೆಜೆ ಪೆರ್ರಿ ಇದಕ್ಕಾಗಿ ತುಸು ಮುಂಚಿತವಾಗಿಯೇ ಮುಂಬೈಗೆ ಆಗಮಿಸಿದ್ದಾರೆ. ಯಶ್ ನಟಿಸುತ್ತಿರುವ 'ಟಾಕ್ಸಿಕ್' ಸಿನಿಮಾ ಹಲವು ದಿನಗಳ ಕಾಲ ಬೆಂಗಳೂರಿನ ಎಚ್ ಎಂಟಿಯಲ್ಲಿ ಸೆಟ್ ನಿರ್ಮಾಣ ಮಾಡಿ ಶೂಟಿಂಗ್ ಮಾಡಿದೆ. ಕೆಲ ದಿನಗಳ ಹಿಂದೆಯಷ್ಟೆ ಚಿತ್ರತಂಡ ಮುಂಬೈಗೆ ಸ್ಥಳಾಂತರಗೊಂಡಿದ್ದು, ಮುಂಬೈನಲ್ಲಿ ವಿಶೇಷ ಸೆಟ್ ನಿರ್ಮಾಣ ಮಾಡಿ ಚಿತ್ರೀಕರಣ ಮಾಡುತ್ತಿದೆ. ಇಲ್ಲಿ ಸತತ 60 ದಿನಗಳ ಚಿತ್ರೀಕರಣ ನಡೆಯಲಿದೆ ಎನ್ನಲಾಗುತ್ತಿದೆ. 60 ದಿನಗಳ ಚಿತ್ರೀಕರಣದಲ್ಲಿ ಆಕ್ಷನ್ ದೃಶ್ಯಗಳ ಚಿತ್ರೀಕರಣವೂ ಸಹ ನಡೆಯಲಿದೆ. ಜೆಜೆ ಪೆರ್ರಿ, ಭಿನ್ನವಾದ ಆಕ್ಷನ್ ದೃಶ್ಯಗಳನ್ನು 'ಟಾಕ್ಸಿಕ್' ಸಿನಿಮಾಕ್ಕಾಗಿ ನಿರ್ಮಾಣ ಮಾಡಲಿದ್ದಾರೆ. ಹ್ಯಾಂಡ್ ಟು ಹ್ಯಾಂಡ್ ಕಾಂಬ್ಯಾಟ್, ಗನ್ ಫೈಟ್ ಮತ್ತು ಕೆಲ ಆಕ್ಷನ್ ದೃಶ್ಯಗಳು 'ಟಾಕ್ಸಿಕ್' ಸಿನಿಮಾದಲ್ಲಿ ಇರಲಿವೆ. ಪ್ರತಿಯೊಂದು ಆಕ್ಷನ್ ದೃಶ್ಯವನ್ನು ಭಿನ್ನವಾಗಿ ಕಂಪೋಸ್ ಮಾಡಲಾಗುತ್ತಿದೆ. ಜೆಜೆ ಪೆರ್ರಿ ಈಗಾಗಲೇ ಆಕ್ಷನ್ ಸೆಟ್‌ಪೀಸ್‌ನ ಟ್ರಯಲ್ ವಿಡಿಯೋ ತಯಾರಿಸಿದ್ದು, ಅದನ್ನು ಯಶ್, ನಿರ್ದೇಶಕಿ ಗೀತು ಮೋಹನ್‌ದಾಸ್ ನೋಡಿ ಒಪ್ಪಿಗೆ ನೀಡಿದ ಬಳಿಕವೇ ಈಗ ಜೆಜೆ ಪೆರ್ರಿ ಭಾರತಕ್ಕೆ ಬಂದಿದ್ದಾರೆ.

ಐಟಂ ಹಾಡಿಗೆ ಕನ್ನಡದ ನಟಿ ಶ್ರೀಲೀಲಾ

ಅಲ್ಲು ಅರ್ಜುನ್, ರಶ್ಮಿಕಾ ಮಂದಣ್ಣ ನಟನೆಯ ಪ್ಯಾನ್ ಇಂಡಿಯಾ ಸಿನಿಮಾ 'ಪುಷ್ಪ 2' ಡಿ.6ರಂದು ರಿಲೀಸ್ ಆಗಲಿದೆ. ಸಿನಿಮಾ ಬಿಡುಗಡೆ ದಿನಗಣನೆ ಶುರುವಾಗಿದೆ. ಹೀಗಿರುವಾಗ ಚಿತ್ರದ ಕುರಿತು ಇಂಟರೆಸ್ಟಿಂಗ್ ಮಾಹಿತಿಯೊಂದು ಸಿಕ್ಕಿದೆ. ಈ ಸಿನಿಮಾದ ಐಟಂ ಹಾಡಿಗೆ ಕನ್ನಡದ ನಟಿ ಶ್ರೀಲೀಲಾ ಕುಣಿದಿದ್ದಾರೆ. ಆ ಫೋಟೋ ಲೀಕ್ ಕೂಡ ಆಗಿದೆ. ಈ ಹಿಂದೆ ಈ ಹಾಡಿಗೆ ಬಾಲಿವುಡ್ ನಟಿಯರ ಹೆಸರೆಲ್ಲ ಕೇಳಿ ಬಂದಿತ್ತು. ಅದರಲ್ಲೂ ಶ್ರದ್ಧಾ ಕಪೂರ್ ಈ ಚಿತ್ರದಲ್ಲಿ ಐಟಂ ಹಾಡಿಗೆ ಹೆಜ್ಜೆ ಹಾಕಲಿದ್ದಾರೆ ಎನ್ನಲಾದ ಸುದ್ದಿಯೊಂದು ಸೋಶಿಯಲ್ ಮೀಡಿಯಾದಲ್ಲಿ ಹರಿದಾಡಿತ್ತು. 'ಪುಷ್ಪ 1'ರಲ್ಲಿ ಸಮಂತಾ ಡ್ಯಾನ್ಸ್ ಮಾಡಿದ್ದ ಹಾಡು ಸಿಕ್ಕಾಪಟ್ಟೆ ಸದ್ದು ಮಾಡಿತ್ತು. ಚಿತ್ರದ ಗೆಲುವಿಗೆ ಕಥೆಯ ಜೊತೆ ಸಮಂತಾ ಡ್ಯಾನ್ಸ್ ಪ್ಲಸ್ ಆಗಿತ್ತು. ಹಾಗಾಗಿಯೇ ಪುಷ್ಪ 2ರಲ್ಲೂ ಇದನ್ನೇ ಫಾರ್ಮುಲಾ ಬಳಸುತ್ತಿದ್ದಾರೆ. ಈ ಹಿಂದೆ ಐಟಂ ಹಾಡಿಗೆ ಹೆಜ್ಜೆ ಹಾಕಲು ಜಾನ್ವಿ ಕಪೂರ್, ತೃಪ್ತಿ ದಿಮ್ರಿ, ಶ್ರೀಲೀಲಾ ಹೀಗೆ ಅನೇಕರ ಹೆಸರು ಸದ್ದು ಮಾಡಿತ್ತು.

ಮಂತ್ರಾಲಯಕ್ಕೆ ಭೇಟಿ ನೀಡಿ ರಾಯರ ದರ್ಶನ ಪಡೆದ ಡಾಲಿ

ಮದುವೆ ಅನೌನ್ಸ್ ಮಾಡಿದ ಬಳಿಕ ರಾಯಚೂರಿನ ಮಂತ್ರಾಲಯಕ್ಕೆ ಭೇಟಿ ನೀಡಿದ ನಟ ಡಾಲಿ ಧನಂಜಯ್, ರಾಯರ ದರ್ಶನ ಪಡೆದರು. ಬಳಿಕ ನಗರದ ಸ್ಟೇಷನ್ ರಸ್ತೆ ಬಳಿ ಖಾಸಗಿ ಮಾಲ್ ಉದ್ಘಾಟನೆಗೆ ಬಂದಿದ್ದ ಡಾಲಿ ಧನಂಜಯ್ ನೋಡಲು ಅಭಿಮಾನಿಗಳು ನೂಕುನುಗ್ಗಲು ಮಾಡಿದರು. ಕಾಲ್ತುಳಿತವಾಗಿದ್ದರಿಂದ ಪೊಲೀಸರು ಲಾಠಿ ಪ್ರಹಾರ ಮಾಡಿ ಜನರನ್ನ ಚದುರಿಸಿದ್ದಾರೆ. ಕಿಕ್ಕಿರಿದು ತುಂಬಿದ್ದ ಅಭಿಮಾನಿಗಳಿಗೆ ಪೊಲೀಸರು ಬಿಸಿಬಿಸಿ ಕಜ್ಜಾಯ ನೀಡಿದ್ದಾರೆ. ಇನ್ನೂ ಈ ವೇಳೆ ನಟ ಡಾಲಿ ಧನಂಜಯ್ ಕೂಲಿಂಗ್ ಗ್ಲಾಸ್ ಕಿತ್ತಿಕೊಳ್ಳಲು ಅಭಿಮಾನಿಯೊಬ್ಬ ಯತ್ನಿಸಿದ ಘಟನೆ ನಡೆದಿದೆ. ಜನರನ್ನು ನಿಯಂತ್ರಿಸಲು ಪೊಲೀಸರು ಹರಸಾಹಸ ಪಡಬೇಕಾಯಿತು. ಪೊಲೀಸರನ್ನೂ ಬಿಡದೆ ಅಭಿಮಾನಿಗಳು ತಳ್ಳಾಟ ನಡೆಸಿದರು. ವಿದ್ಯಾರ್ಥಿನಿಯರು ಕಾಲೇಜು ಕಟ್ಟಡದ ಟೆರೇಸ್ ಏರಿ ಡಾಲಿ ಧನಂಜಯ್ ನೋಡಲು ಹರಸಾಹಸ ಪಟ್ಟರು. ವಿದ್ಯಾರ್ಥಿನಿಯರನ್ನ ಕೆಳಗಿಳಿಸಲು ಉಪನ್ಯಾಸಕರು ಕೋಲು ಹಿಡಿದು ಬರಬೇಕಾಯಿತು. ರಾಯಚೂರಿನಲ್ಲಿ ಮಾತನಾಡಿದ ನಟ, ಉತ್ತರ ಕರ್ನಾಟಕ ಜನ ತೋರಿಸುವ ಪ್ರೀತಿ ರಫ್ ಆಯಂಡ್ ಟಫ್ ಆದ್ರೂ ಅಗಾಧವಾದದ್ದು. ಖುಷಿಯಾಗುತ್ತೆ ರಾಯಚೂರಿಗೆ ಮತ್ತೆ ಮತ್ತೆ ಬರುತ್ತೇನೆ ಎಂದರು. ಝಿಬ್ರಾ ಚಿತ್ರ ಶೀಘ್ರದಲ್ಲೇ ಬಿಡುಗಡೆಯಾಗುತ್ತೆ ಎಲ್ಲರೂ ನೋಡಿ ಎಂದು ತಿಳಿಸಿದರು.

ಬಲ್ಲಾಳದೇವ ರಾಣಾ ಜೊತೆ ಕಾಂತಾರದ ಶಿವ

ತೆಲುಗಿನ ಖ್ಯಾತ ನಟ ರಾಣಾ ದಗ್ಗುಬಾಟಿ ಮತ್ತು ಕನ್ನಡದ ಹೆಸರಾಂತ ನಟ ರಿಷಬ್ ಶೆಟ್ಟಿ ಜೊತೆಗಿನ ಫೋಟೋ ಸೋಷಿಯಲ್ ಮೀಡಿಯಾದಲ್ಲಿ ವೈರಲ್ ಆಗ್ತಿದೆ. ರಾಣಾ ಏನಾದರೂ ಕನ್ನಡ ಸಿನಿಮಾ ರಂಗಕ್ಕೆ ಎಂಟ್ರಿ ಕೊಟ್ಟರಾ ಅನ್ನೋ ಅನುಮಾನ ಕೂಡ ಮೂಡಿದೆ. ಆದರೆ, ಕನ್ನಡಕ್ಕೆ ರಾಣಾ ಬಂದಿಲ್ಲ. ತೆಲುಗಿಗೆ ರಿಷಬ್ ಹೋಗಿದ್ದಾರೆ. ಜೈ ಹನುಮಾನ್ ಸಿನಿಮಾದಲ್ಲಿ ಈ ಜೋಡಿ ಒಟ್ಟಾಗಿ ನಟಿಸುತ್ತಿದೆ. 'ಕಾಂತಾರ' ಕಣಕ್ಕಿಳಿದಿರುವ ಕಾಡುಬೆಟ್ಟ ಶಿವನ ಲುಕ್ಕು ಕಣ್ತುಂಬಿಕೊಳ್ಳುವುದ್ದಕ್ಕೆ ಅಖಂಡ ಸಿನಿಮಾ ಪ್ರೇಮಿಗಳು ಕಾತರದಿಂದ ಕಾಯ್ತಿದ್ದಾರೆ. ಕುಂದಾಪುರದ ಕೆರಾಡಿ ಹುಡ್ಗ 'ಕಾಂತಾರ' ಪ್ರೀಕ್ವೆಲ್ ಮೂಲಕ ಕದಂಬರ ಕಥೆ ಹರವಿಡೋದಿಕ್ಕೆ ರೆಡಿಯಾಗಿರುವುದರ ಜೊತೆಗೆ ಪುರಾತನ ಸಮರ ಕಲೆ ಕಳರಿಪಯಟ್ಟು ಕಲೆಯನ್ನ ಕಟ್ಟಿಕೊಡಲು ಕಸರತ್ತು ನಡೆಸಿದ್ದಾರೆ. ಇದರ ನಡುವೆ ಹನುಮಾನ್ ಪಾತ್ರದಲ್ಲಿ ಮಿಂಚಲು ರಿಷಬ್ ಶೆಟ್ಟಿ ರೆಡಿಯಾಗಿದ್ದಾರೆ. ಈ ಮೂಲಕ ತೆಲುಗಿಗೆ ನಟ ಎಂಟ್ರಿ ಕೊಟ್ಟಿದ್ದಾರೆ. ಟಾಲಿವುಡ್ ಅಂಗಳದಲ್ಲಿ ಮೂಡಿಬಂದಿದ್ದ 'ಜೈ ಹನುಮಾನ್' ನಿಮಾ ಸಕ್ಸಸ್ ಕಂಡಿತ್ತು. ಗಲ್ಲಾಪೆಟ್ಟಿಗೆಯಲ್ಲಿ ಕಮಾಲ್ ಮಾಡಿದ್ದ ಹನುಮಾನ್ ಸಿನಿಮಾದ ಸೀಕ್ವೆಲ್ ಮೂಡಿಬರುತ್ತಿದ್ದು, ಇದೀಗ ಪ್ಯಾನ್ ಇಂಡಿಯಾ ಹಿಟ್ ಸೀಕ್ವೆಲ್‌ನಲ್ಲಿ 'ಕಾಂತಾರ' ಶಿವ ನಟಿಸುವುದು ಅಧಿಕೃತವಾಗಿದೆ.

ಕದಂಬರ ಕಥೆ ಹರವಿಡೋದಿಕ್ಕೆ ರೆಡಿ

ಆಸ್ಟ್ರೇಲಿಯಾ ವಿರುದ್ಧದ ಅನಧಿಕೃತ ಟೆಸ್ಟ್ ಸರಣಿಯನ್ನೂ ಸೋತ ಭಾರತ

ಕೈಕೊಟ್ಟ ಭಾರತದ ಬ್ಯಾಟ್ಸ್‌ಮನ್‌ಗಳು

ಭಾರತ-ಎ ಮತ್ತು ಆಸ್ಟ್ರೇಲಿಯಾ-ಎ ತಂಡಗಳ ನಡುವೆ ನಡೆದ ಎರಡು ಪಂದ್ಯಗಳ ಅನಧಿಕೃತ ಟೆಸ್ಟ್ ಸರಣಿಯಲ್ಲಿ ಭಾರತ ತಂಡ 2-0 ಅಂತರದ ಸೋಲು ಎದುರಿಸಬೇಕಾಯಿತು. ಸರಣಿಯ ಎರಡನೇ ಪಂದ್ಯ ಮೆಲ್ಬೋರ್ನ್‌ನಲ್ಲಿ ನಡೆಯಿತು. ಈ ಪಂದ್ಯದಲ್ಲಿ ಭಾರತ ತಂಡ ಕೇವಲ 3 ದಿನಗಳಲ್ಲಿ ಸೋತಿದೆ. ಹಿಂದಿನ ಪಂದ್ಯದಲ್ಲೂ ಆಸ್ಟ್ರೇಲಿಯಾ ಎ 7 ವಿಕೆಟ್‌ಗಳಿಂದ ಜಯ ಸಾಧಿಸಿತ್ತು. ಭಾರತ ಹಾಗೂ ಆಸ್ಟ್ರೇಲಿಯಾ ನಡುವಿನ ಐದು ಪಂದ್ಯಗಳ ಬಾರ್ಡರ್ ಗವಾಸ್ಕರ್ ಟ್ರೋಫಿ ಟೆಸ್ಟ್ ಸರಣಿ ಆರಂಭವಾಗುವುದಕ್ಕೂ ಮುನ್ನ ಉಭಯ ದೇಶಗಳ ಎ ತಂಡಗಳ ನಡುವೆ ನಡೆದ ಎರಡು ಅನಧಿಕೃತ ಟೆಸ್ಟ್ ಪಂದ್ಯಗಳನ್ನು ಅತಿಥೇಯ ಆಸ್ಟ್ರೇಲಿಯಾ ಎ ತಂಡ ಗೆದ್ದುಕೊಳ್ಳುವಲ್ಲಿ ಯಶಸ್ವಿಯಾಗಿದೆ. ಮೆಲ್ಬೋರ್ನ್‌ನಲ್ಲಿ ನಡೆದ ಸರಣಿ ಎರಡನೇ ಪಂದ್ಯದಲ್ಲಿ ಆಸ್ಟ್ರೇಲಿಯಾ-ಎ ತಂಡ, ಭಾರತ-ಎ ತಂಡವನ್ನು 6 ವಿಕೆಟ್‌ಗಳಿಂದ ಸೋಲಿಸಿತು. ಮೊನ್ನೆಯ ಪಂದ್ಯದಲ್ಲೂ ಭಾರತ ತಂಡ 7 ವಿಕೆಟ್‌ಗಳಿಂದ ಸೋಲನುಭವಿಸಿತ್ತು. ಈ ಮೂಲಕ ಬಾರ್ಡರ್ ಗವಾಸ್ಕರ್ ಟ್ರೋಫಿ ಟೆಸ್ಟ್ ಸರಣಿಯ ತಯಾರಿ ದೃಷ್ಟಿಯಿಂದ ಆಡಿದ ಎರಡೂ ಅಭ್ಯಾಸ ಪಂದ್ಯಗಳನ್ನು ಸೋತಿರುವ ಟೀಂ ಇಂಡಿಯಾ, ನವೆಂಬರ್ 22 ರಿಂದ ಆರಂಭವಾಗಲಿರುವ ಆಸ್ಟ್ರೇಲಿಯಾ ವಿರುದ್ಧದ ಮೊದಲ ಟೆಸ್ಟ್ ಪಂದ್ಯದಲ್ಲಿ ಯಾವ ರೀತಿಯ ಪ್ರದರ್ಶನ ನೀಡುತ್ತದೆ ಎಂಬುದನ್ನು ಕಾದುನೋಡಬೇಕಿದೆ. ಈ ಪಂದ್ಯದಲ್ಲಿ ಆಸ್ಟ್ರೇಲಿಯಾ ಎ ಟಾಸ್ ಗೆದ್ದು ಮೊದಲು ಬೌಲಿಂಗ್ ಮಾಡಲು ನಿರ್ಧರಿಸಿತು. ಅದರಂತೆ ಮೊದಲ ಇನ್ನಿಂಗ್ಸ್ ಆರಂಭಿಸಿದ ಭಾರತ ಎ ತಂಡಕ್ಕೆ ಮೊದಲ ಪಂದ್ಯದಂತೆ ಈ ಪಂದ್ಯದಲ್ಲೂ ಭಾರತದ ಬ್ಯಾಟ್ಸ್‌ಮನ್‌ಗಳು ಕೈಕೊಟ್ಟರು. ಹೀಗಾಗಿ ಭಾರತ ತಂಡ ಮೊದಲ ಇನಿಂಗ್ಸ್‌ನಲ್ಲಿ ಕೇವಲ 161 ರನ್ ಗಳಿಸಿ ಆಲೌಟ್ ಆಗಿತ್ತು. ಇದಕ್ಕೆ ಉತ್ತರವಾಗಿ ಆಸ್ಟ್ರೇಲಿಯಾ ತಂಡ ತನ್ನ ಮೊದಲ ಇನ್ನಿಂಗ್ಸ್‌ನಲ್ಲಿ 223 ರನ್ ಗಳಿಸಿತ್ತು. ಈ ಮೂಲಕ 62 ರನ್‌ಗಳ ಮುನ್ನಡೆ ಸಾಧಿಸಿತ್ತು. ಪಂದ್ಯದ ಎರಡನೇ ಇನಿಂಗ್ಸ್‌ನಲ್ಲಾದರೂ ಭಾರತದ ಬ್ಯಾಟ್ಸ್‌ಮನ್‌ಗಳು ಪುಟಿದೇಳುವ ನಿರೀಕ್ಷೆ ಇತ್ತು. ಆದರೆ ಎರಡನೇ ಇನ್ನಿಂಗ್ಸ್‌ನಲ್ಲೂ ಬ್ಯಾಟ್ಸ್‌ಮನ್‌ಗಳು ಕಳಪೆ ಪ್ರದರ್ಶನ ನೀಡಿದರು. ಹೀಗಾಗಿ ಭಾರತ-ಎ ತಂಡ ತನ್ನ ಎರಡನೇ ಇನ್ನಿಂಗ್ಸ್‌ನಲ್ಲಿ ಕೇವಲ 229 ರನ್ ಗಳಿಸಲಷ್ಟೇ ಶಕ್ತವಾಯಿತು. ಅಂತಿಮವಾಗಿ ಆಸ್ಟ್ರೇಲಿಯ ತಂಡಕ್ಕೆ ಪಂದ್ಯ ಗೆಲ್ಲಲು 168 ರನ್‌ಗಳ ಗುರಿ ಸಿಕ್ಕಿತು. ಈ ಪಂದ್ಯದಲ್ಲಾದರೂ ಆಸ್ಟ್ರೇಲಿಯಾವನ್ನು ಮಣಿಸಬೇಕು ಎನ್ನುವ ಉದ್ದೇಶವಿಟ್ಟುಕೊಂಡಿದ್ದ ಭಾರತ ತಂಡಕ್ಕೆ ಎರಡನೇ ಇನ್ನಿಂಗ್ಸ್‌ನಲ್ಲಿ ವೇಗಿಗಳು ಉತ್ತಮ ಆರಂಭ ನೀಡಿದರು. ಕೇವಲ ಒಂದು ರನ್‌ಗಳಿಗೆ ಆಸ್ಟ್ರೇಲಿಯಾದ ಎರಡು ವಿಕೆಟ್ ಉರುಳಿಸಿದರು. 73 ರನ್ ತಲುಪುವ ವೇಳೆಗೆ ಆಸ್ಟ್ರೇಲಿಯಾ 4 ವಿಕೆಟ್ ಕಳೆದುಕೊಂಡಿತ್ತು. ಆದರೆ ಇದಾದ ನಂತರ ಭಾರತೀಯ ಬೌಲರ್‌ಗಳು ವಿಕೆಟ್‌ಗಾಗಿ ಹಾತೊರೆಯಬೇಕಾಯಿತು. ಅಂತಿಮವಾಗಿ ಆಸ್ಟ್ರೇಲಿಯಾ 6 ವಿಕೆಟ್‌ಗಳು ಬಾಕಿ ಇರುವಂತೆಯೇ ಗೆಲುವಿನ ದಡ ಸೇರಿತು.

ಟೀಂ ಇಂಡಿಯಾಕ್ಕೆ ಹೆಚ್ಚಿದ ತಲೆನೋವು

ಈ ಪಂದ್ಯದಲ್ಲಿ ಅಭಿಮನ್ಯು ಈಶ್ವರನ್, ಕೆಎಲ್ ರಾಹುಲ್, ಧ್ರುವ ಜುರೆಲ್, ನಿತೀಶ್ ಕುಮಾರ್ ರೆಡ್ಡಿ ಮತ್ತು ಪ್ರಸಿದ್ಧ್ ಕೃಷ್ಣ ಭಾರತ ಎ ತಂಡದ ಭಾಗವಾಗಿದ್ದರು. ಆದರೆ ಈ ಪಂದ್ಯದಲ್ಲಿ ಧ್ರುವ್ ಜುರೆಲ್ ಮತ್ತು ಪ್ರಸಿದ್ಧ್ ಕೃಷ್ಣ ಹೊರತುಪಡಿಸಿ ಯಾವುದೇ ಆಟಗಾರ ಒಟ್ಟಾರೆ ಉತ್ತಮ ಪ್ರದರ್ಶನ ನೀಡಲು ಸಾಧ್ಯವಾಗಲಿಲ್ಲ. ಕೆಎಲ್ ರಾಹುಲ್ ಎರಡೂ ಇನ್ನಿಂಗ್ಸ್‌ಗಳಲ್ಲಿ ಒಟ್ಟು 14 ರನ್ ಗಳಿಸಿದರು. ಅದೇ ಸಮಯದಲ್ಲಿ, ಅಭಿಮನ್ಯು ಈಶ್ವರನ್ ಕೂಡ ಎರಡು ಇನ್ನಿಂಗ್ಸ್‌ಗಳಲ್ಲಿ ಕೇವಲ 17 ರನ್ ಗಳಿಸಿದರು. ನಿತೀಶ್ ಕುಮಾರ್ ರೆಡ್ಡಿ ಮೊದಲ ಇನಿಂಗ್ಸ್‌ನಲ್ಲಿ 16 ರನ್ ಮತ್ತು ಎರಡನೇ ಇನ್ನಿಂಗ್ಸ್‌ನಲ್ಲಿ 38 ರನ್ ಗಳಿಸಿದರು. ಆದರೆ ಎರಡನೇ ಟೆಸ್ಟ್‌ನಲ್ಲಿ ಆಡುವ ಅವಕಾಶ ಪಡೆದಿದ್ದ ವಿಕೆಟ್ ಕೀಪರ್ ಧ್ರುವ್ ಜುರೆಲ್ ಗಮನಾರ್ಹ ಪ್ರದರ್ಶನ ನೀಡಿ, ಎರಡೂ ಇನ್ನಿಂಗ್ಸ್‌ಗಳಲ್ಲಿ ಅರ್ಧಶತಕದ ಇನ್ನಿಂಗ್ಸ್ ಆಡಿದರು. ಮತ್ತೊಂದೆಡೆ, ಪ್ರಸಿದ್ಧ್